ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 229

6-3-2025 ಗುರುವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 229

## ಸರ್ಕಾರಿ ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇ.4 ರಷ್ಟು ಮೀಸಲಾತಿ

### ಕಾಂಗ್ರೆಸ್ ವಿರುದ್ಧ ಬಿಜೆಪಿ ಕೆಂಡಾಮಂಡಲ

**ಬೆಂಗಳೂರು :** ಕರ್ನಾಟಕದಲ್ಲಿ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಸರ್ಕಾರಿ ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇಕಡಾ 4ರಷ್ಟು ಮೀಸಲಾತಿ ನೀಡಲು ಯೋಜಿಸುತ್ತಿದೆ ಎಂದು ಬಿಜೆಪಿ ಬುಧವಾರ ಆರೋಪಿಸಿದೆ.

ರಾಜ್ಯಾದ್ಯಂತ ಎಲ್ಲಾ ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿರುವಾಗ, ಆಡಳಿತಾರೂಢ ಕಾಂಗ್ರೆಸ್ ಅಲ್ಪಸಂಖ್ಯಾತರಿಗೆ ಸರ್ಕಾರಿ ಒಪ್ಪಂದಗಳಲ್ಲಿ ಶೇಕಡಾ ನಾಲ್ಕು ಮೀಸಲಾತಿ ನೀಡುವ ಪ್ರಸ್ತಾಪವನ್ನು ಸಚಿವ ಸಂಪುಟದ ಮುಂದೆ ಮಂಡಿಸಲು ನಿರ್ಧರಿಸಿದೆ ಎಂದು ಬಿಜೆಪಿ ರಾಜ್ಯ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.



ದೇಶದಲ್ಲಿ ಅನೇಕ ಇತರ ಸಮುದಾಯಗಳಿರುವಾಗ ಅಲ್ಪಸಂಖ್ಯಾತರೆಂದರೆ ಯಾವಾಗಲೂ ಮುಸ್ಲಿಮರು ಎಂದು ಏಕೆ ಕರೆಯಲಾಗುತ್ತದೆ ಎಂದು ವಿಜಯೇಂದ್ರ ಪ್ರಶ್ನಿಸಿದರು.

"ಅಲ್ಪಸಂಖ್ಯಾತರು ಎಂದರೆ ಮುಸ್ಲಿಮರು ಮಾತ್ರವೇ ಹೊರತು ಬೇರೆ ಯಾರನ್ನೂ ಅಲ್ಲವೇ? ಕಾಂಗ್ರೆಸ್‌ನ ಅಲ್ಪಸಂಖ್ಯಾತರ ತುಷ್ಟೀಕರಣ ನೀತಿಗಳು ಸಮಾಜದಲ್ಲಿ ಅಶಾಂತಿಯನ್ನು ಉಂಟುಮಾಡುತ್ತವೆ" ಎಂದು ವಿಜಯೇಂದ್ರ ಸುದ್ದಿಗಾರರಿಗೆ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನಿಜವಾಗಿಯೂ ಹಿಂದುಳಿದ ಸಮುದಾಯಗಳ ನಾಯಕರಾಗಿದ್ದ-ರೆ, ಅವರು ತಮ್ಮನ್ನು ತಾವು ಹಿಂದುಳಿದ ಸಮುದಾಯಗಳ ನಾಯಕ ಎಂದು ಬಿಂಬಿಸಿಕೊಳ್ಳಲು ಪ್ರಯತ್ನಿಸುತ್ತಿದ್ದರೆ, ಅವರಿಗೆ ಅಧಿಕಾರ ನೀಡುವ ನೀತಿಗಳನ್ನು ತರಬೇಕು ಎಂದು ವಿಜಯೇಂದ್ರ ಹೇಳಿದ್ದಾರೆ.

ಸಿದ್ದರಾಮಯ್ಯ ಅವರ ಅಲ್ಪಸಂಖ್ಯಾತರ ತುಷ್ಟೀಕರಣ ನೀತಿಗೆ ಪಾಠ ಕಲಿಸುವಂತೆ ವಿಜಯೇಂದ್ರ ಜನರಿಗೆ ಕರೆ ನೀಡಿದ್ದಾರೆ.

ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಕರ್ನಾಟಕದ ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಅಲ್ಪಸಂಖ್ಯಾತರ ತ ುಷ್ಟೀಕರಣದ ಮೇಲೆ ಕೇಂದ್ರೀಕರಿಸಿದೆ ಎಂದು ಹೇಳಿದರು. ಈ ರೀತಿಯ ಮೀಸಲಾತಿಗಳು ಸಂವಿಧಾನ ವಿರೋಧಿ. ಭಾರತೀಯ ಸಂವಿಧಾನದ ಶಿಲ್ಪಿ ಬಿ.ಆರ್. ಅಂಬೇಡ್ಕರ್ ಅವರು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ವಿರುದ್ಧವಾಗಿದ್ದರು ಎಂದು ಅವರು ಪ್ರತಿಪಾದಿಸಿದರು.

## ದ್ವಿತೀಯ ಪಿಯುಸಿ ಪರೀಕ್ಷೆ; 396 ವಿದ್ಯಾರ್ಥಿಗಳು ಗೈರು

**ದಾವಣಗೆರೆ :** ದ್ವಿತೀಯ ಪಿಯುಸಿ ಪರೀಕ್ಷೆ ನಡೆಯುತ್ತಿದ್ದು ಮಾರ್ಚ್ 5 ರಂದು ನಡೆದ ರಾಜ್ಯಶಾಸ್ತ್ರ ಹಾಗೂ ಸಂಖ್ಯಾಶಾಸ್ತ್ರ ವಿಷಯಗಳ ಪರೀಕ್ಷೆಗೆ 396 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ ತಿಳಿಸಿದ್ದಾರೆ.

ರಾಜ್ಯಶಾಸ್ತ್ರ ವಿಷಯದ ಪರೀಕ್ಷೆಗೆ 4397 ವಿದ್ಯಾರ್ಥಿಗಳು ನೊಂದಾಯಿಸಿದ್ದು 4030 ಪರೀಕ್ಷೆಗೆ ಹಾಜರಾಗಿ 367 ವಿದ್ಯಾರ್ಥಿಗಳು ಗೈರಾಗಿದ್ದರು. ಸಂಖ್ಯಾಶಾಸ್ತ್ರ ವಿಷಯವನ್ನು 1263 ವಿದ್ಯಾರ್ಥಿಗಳು ತೆಗೆದುಕೊಂಡಿದ್ದು 1234 ಹಾಜರಾಗಿ 29 ವಿದ್ಯಾರ್ಥಿಗಳು ಗೈರು ಹಾಜರಾಗಿರುವರು.

## ಜೈಲು ಪಾಲಾಗಿರುವ ನಟಿ ರನ್ಯಾ ರಾವ್ ಫ್ಲ್ಯಾಟ್ ಮೇಲೆ ದಾಳಿ, ಅಪಾರ ಪ್ರಮಾಣದ ನಗದು, ಚಿನ್ನ ವಶ!



**ಬೆಂಗಳೂರು:** ದುಬೈನಿಂದ ಅಕ್ರಮವಾಗಿ ಚಿನ್ನ ಕಳ್ಳಸಾಗಣೆ ಮಾಡಿದ ಆರೋಪದಲ್ಲಿ ಬಂಧನಕ್ಕೀಡಾಗಿರುವ ಕನ್ನಡದ ನಟಿ ರನ್ಯಾ ರಾವ್ ಅವರ ಬೆಂಗಳೂರಿನ ನಿವಾಸದ ಮೇಲೆ ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ) ಬುಧವಾರ ದಾಳಿ ನಡೆಸಿ ಅಪಾರ ಪ್ರಮಾಣದ ನಗದು ಮತ್ತು ಕೋಟ್ಯಂತರ ರೂಪಾಯಿ ಮೌಲ್ಯದ ಚಿನ್ನ ವಶಪಡಿಸಿಕೊಂಡಿದೆ.

ದುಬೈನಿಂದ ಸೋಮವಾರ ರಾತ್ರಿ ಎಮಿರೇಟ್ಸ್ ಏರ್‌ಲೈನ್ಸ್ ವಿಮಾನದಲ್ಲಿ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ನಟಿಯನ್ನು ತಪಾಸಣೆ ಮಾಡಿದಾಗ 14.80 ಕೆಜಿ ಚಿನ್ನ ಪತ್ತೆಯಾಗಿತ್ತು. ಬಳಿಕ ನಟಿಯನ್ನು ಬಂಧಿಸಲಾಗಿತ್ತು.

ರನ್ಯಾ ಅವರ ಲ್ಯಾವೆಲ್ಲೆ ರಸ್ತೆಯಲ್ಲಿರುವ ಐಷಾರಾಮಿ ಫ್ಲಾಟ್‌ನಿಂದ 2.06 ಕೋಟಿ ರೂಪಾಯಿ ಮೌಲ್ಯದ ಚಿನ್ನ ಮತ್ತು 2.67 ಕೋಟಿ ರೂಪಾಯಿ ನಗದನ್ನು ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಆ ಫ್ಲಾಟ್‌ಗೆ ನಟಿ 4.5 ಲಕ್ಷ ರೂಪಾಯಿ ಬಾಡಿಗೆ ಪಾವತಿಸುತ್ತಿದ್ದರು ಎಂದು ಎಂದು ವರದಿಯಾಗಿದೆ.

32 ವರ್ಷದ ರನ್ಯಾ ರಾವ್ ಅವರು ಪೊಲೀಸ್ ಮಹಾನಿರ್ದೇಶಕ (ಪೊಲೀಸ್ ವಸತಿ ನಿಗಮ) ರಾಮಚಂದ್ರ ರಾವ್ ಅವರ ಪುತ್ರಿ. ಆದರೆ, ನಾಲ್ಕು ತಿಂಗಳ ಹಿಂದೆ ನಟಿ ಮದುವೆಯಾದಾಗಿನಿಂದ ಅವರಿಬ್ಬರೂ ಸಂಪರ್ಕದಲ್ಲಿಲ್ಲ ಎನ್ನಲಾಗಿದೆ.

ದುಬೈನ ಚಿನ್ನ ಕಳ್ಳಸಾಗಣೆ ಜಾಲದಲ್ಲಿ ಕನ್ನಡದ ನಟಿಯೊಬ್ಬರು ಸಕ್ರಿಯರಾಗಿರುವ ಬಗ್ಗೆ ಡಿಆರ್ ಐ ಅಧಿಕಾರಿಗಳಿಗೆ ಕೆಲವು ದಿನಗಳ ಹಿಂದಷ್ಟೇ ಮಾಹಿತಿ ದೊರೆತಿತ್ತು. ಪದೇ ಪದೆ ದುಬೈಗೆ ಹೋಗಿ ಬರುತ್ತಿದ್ದ ರನ್ಯಾ ಮೇಲೆ ಅಧಿಕಾರಿಗಳು ಕಣ್ಣಿಟ್ಟಿದ್ದರು. ಕಳೆದ 15 ದಿನಗಳಲ್ಲಿ ರನ್ಯಾ ರಾವ್ ಅವರು ನಾಲ್ಕು ಬಾರಿ ದುಬೈಗೆ ಹೋಗಿ ಬಂದಿದ್ದರು.

## ನಿಷೇಧಾಜ್ಞೆ ಜಾರಿ

**ಚಿಕ್ಕಮಗಳೂರು: ಮಾ. 05:** ಚಿಕ್ಕಮಗಳೂರು ನಗರದ ಬಸವನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿರುವ ಬಡಮಕಾನ್ ದರ್ಗಾವನ್ನು ಹೊರತುಪಡಿಸಿ ಅದರ ಪಕ್ಕದಲ್ಲಿ ಇರುವ ವಿವಾದಿತ ಸ್ಥಳದಲ್ಲಿ ಯಾರು ಕೂಡಾ ಪ್ರವೇಶ/ಕಟ್ಟಡ ನಿರ್ಮಾಣ/ತೆರವು ಮತ್ತು ಪ್ರತಿಭಟನೆ ಹಾಗೂ ಯಾವುದೇ ರೀತಿಯ ಚಟುವಟಿಕೆಗಳನ್ನು ಮಾರ್ಚ್ 04 ರಂದು ಮಧ್ಯರಾತ್ರಿ 12.00 ಗಂಟೆಯಿಂದ ಮಾರ್ಚ್ 10 ರ ಮಧ್ಯರಾತ್ರಿ 12.00 ಗಂಟೆಯ ವರೆಗೆ ಮಾಡಬಾರದು. ಈ ವಿವಾದಿತ ಸ್ಥಳದಲ್ಲಿ ಸಾರ್ವಜನಿಕ ಶಾಂತಿ, ಸಂರಕ್ಷಣಾ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ನಿಷೇಧಾಜ್ಞೆ ಜಾರಿಗೊಳಿಸಿ ಚಿಕ್ಕಮಗಳೂರು ತಾಲ್ಲೂಕು ತಹಸೀಲ್ದಾರ್ ಹಾಗೂ ತಾಲ್ಲೂಕು ದಂಡಾಧಿಕಾರಿ ಡಾ. ಸುಮಂತ್ ಆದೇಶ ಹೊರಡಿಸಿದ್ದಾರೆ.

ಸದರಿ ವಿವಾದಿತ ಸ್ಥಳದಲ್ಲಿ ಕಟ್ಟಡ ನಿರ್ಮಾಣ/ತೆರವು ಮತ್ತು ಪ್ರತಿಭಟನೆ ಹಾಗೂ ಯಾವುದೇ ರೀತಿಯ ಚಟುವಟಿಕೆಯನ್ನು ಮತ್ತು ಯಾವುದೇ ಸಾರ್ವಜನಿಕರು ಪ್ರವೇಶ ಮಾಡಬಾರದು. ಈ ಸ್ಥಳದಲ್ಲಿ 5 ಮತ್ತು ಅದಕ್ಕಿಂತ ಹೆಚ್ಚಿನ ಜನರು ಗುಂಪು ಸೇರಬಾರದು. ಸಾರ್ವಜನಿಕರು ಯಾವುದೇ ಶಸ್ತ್ರಾಸ್ತ್ರ/ಮಾರಕಾಸ್ತ್ರ ಹಿಡಿದು ಓಡಾಡಲು ಮತ್ತು ಬಳಸಲು ಅವಕಾಶವಿರುವುದಿಲ್ಲ. ಯಾವುದೇ ಸಿಡಿಮದ್ದು, ಇತ್ಯಾದಿ ಸ್ಫೋಟಕಗಳನ್ನು ಬಳಸಬಾರದು. ಯಾವುದೇ ಕಾನೂನು ಬಾಹಿರ ಚಟುವಟಿಕೆಗಳಿಗೆ ಅವಕಾಶವಿರುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಐಪಿಎಸ್ ಅಧಿಕಾರಿ ವರ್ತಿಕಾ ವರ್ಗಾವಣೆ ಬೆನ್ನಲ್ಲೇ ಡಿ. ರೂಪಾ ಎತ್ತಂಗಡಿ



**ಬೆಂಗಳೂರು:** ಕಳೆದ ಸೋಮವಾರ ಐಪಿಎಸ್ ಅಧಿಕಾರಿ ವರ್ತಿಕಾ ಕಟಿಯಾರ್ ಅವರನ್ನು ವರ್ಗಾವಣೆ ಮಾಡಿದ್ದ ರಾಜ್ಯ ಸರ್ಕಾರ ಬುಧವಾರ ಹಿರಿಯ ಐಪಿಎಸ್ ಅಧಿಕಾರಿ ಡಿ ರೂಪಾ ಅವರನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ.

ಡಿ. ರೂಪಾ ಅವರ ವಿರುದ್ಧ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಲಿಖಿತ ದೂರು ನೀಡಿದ್ದ ವರ್ತಿಕಾ ಕಟಿಯಾರ್ ಅವರನ್ನು ಸೋಮವಾರ ವರ್ಗಾವಣೆ ಮಾಡಲಾಗಿತ್ತು. ಇದೀಗ ಆಂತರಿಕ ಭದ್ರತಾ ವಿಭಾಗದ ಐಜಿಪಿಯಾಗಿದ್ದ ಡಿ ರೂಪಾ ಅವರನ್ನು ಕರ್ನಾಟಕ ಸಿಲ್ಕ್ ಮಾರ್ಕೆಟಿಂಗ್ ಬೋರ್ಡ್ ವ್ಯವಸ್ಥಾಪಕ ನಿರ್ದೇಶಕರಾಗಿ ವರ್ಗಾವಣೆ ಮಾಡಲಾಗಿದೆ.


## ಗೊಲ್ಲರು-ಕಾಡುಗೊಲ್ಲ ಹೆಣ್ಣು ಮಕ್ಕಳನ್ನು ಸಮಾಜದ ಮುಖ್ಯವಾಹಿನಿಗೆ ತನ್ನಿ

### ವಿವಿ ಅಧಿವೇಶನದಲ್ಲಿ ಕೆ.ಎಸ್. ಬಸವಂತಪ್ಪ ಒತ್ತಾಯ

**ದಾವಣಗೆರೆ:** ಗೊಲ್ಲರು ಮತ್ತು ಕಾಡುಗೊಲ್ಲ ಸಮುದಾಯದ ಹೆಣ್ಣು ಮಕ್ಕಳಿಗೆ ಸಂಪ್ರದಾಯದ ವಿಚಾರದಲ್ಲಿ ಆಗುತ್ತಿರುವ ಸಾಮಾಜಿಕ ಅಡೆತಡೆ ಹಾಗೂ ಆರೋಗ್ಯ ತೊಂದರೆಗಳ ಕುರಿತು ಸರ್ಕಾರ ಜಾಗೃತಿ ಮೂಡಿಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಕೆಲಸ ಮಾಡಬೇಕೆಂದು ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ ಸರ್ಕಾರವನ್ನು ಆಗ್ರಹಿಸಿದರು.

ವಿಧಾನಸೌಧದಲ್ಲಿ ನಡೆಯುತ್ತಿರುವ ಬಜೆಟ್ ಅಧಿವೇಶನದಲ್ಲಿ ಶಾಸಕ ಶಿವಲಿಂಗೇಗೌಡ ಈ ವಿಷಯ ಕುರಿತು ಪ್ರಸ್ತಾಪಿಸಿದಾಗ ಶಾಸಕ ಕೆ.ಎಸ್. ಬಸವಂತಪ್ಪದನಿಗೂಡಿಸಿದರು.

ಈ ಸಮುದಾಯದಲ್ಲಿ ಬೇರು ಬಿಟ್ಟಿರುವ ಮೂಢನಂಬಿಕೆ ಹಾಗೂ ಹಲವು ಸಂಪ್ರದಾಯಗಳಿಂದ



ಆಗುತ್ತಿರುವ ತೊಂದರೆಗಳ ಬಗ್ಗೆ ಸರ್ಕಾರ ಹಿಂದುಳಿದ ವರ್ಗಗಳ ಇಲಾಖೆ ಮೂಲಕ ಜಾಗೃತಿ ಮೂಡಿಸುತ್ತಿದೆ. ಇದಕ್ಕಾಗಿ ಪ್ರತಿವರ್ಷ ಇಂತಿಷ್ಟು ಅನುದಾನವನ್ನೂ ಮೀಸಲಿಡುತ್ತಿದೆ. ಆದರೆ ಮೌಢ್ಯತೆಗೆ ಒಳಗಾಗಿರುವ ಸಮುದಾಯವನ್ನು ಶಾಶ್ವತವಾಗಿ ಹೊರ ತರಲು ಆಗಿಲ್ಲ.

ಈ ಬಗ್ಗೆ ಸರ್ಕಾರ ಜಾಗೃತಿ ಮೂಡಿಸುವ ಕಾರ್ಯಕ್ರಮಗಳ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಬೇಕೆಂದು ಮನವಿ ಮಾಡಿದರು.

ಕೆಲ ವರ್ಷಗಳ ಹಿಂದೆ ಗೊಲ್ಲರು ಮತ್ತು ಕಾಡುಗೊಲ್ಲ ಸಮುದಾಯದಲ್ಲಿ ಋತುಮತಿಯಾದ ಹೆಣ್ಣು ಮಕ್ಕಳನ್ನು ಹೊರಕ್ಕೆ ಕೂರಿಸುತ್ತಿದ್ದ ಕುರಿತು ಸಾಕಷ್ಟು ಚರ್ಚೆಗಳಾಗಿದ್ದವು. ಈಗ ಬಾಣಂತಿ ಹಾಗೂ ಎಳೆಯ ಮಕ್ಕಳನ್ನು ಮನೆಯಿಂದ ಹೊರಗಿಡುವ ಬಗ್ಗೆ ವರದಿಗಳು ಕೂಡ ಬರುತ್ತಿವೆ.

ಈ ಸಮಾಜದ ಅಭಿವೃದ್ಧಿಗಾಗಿ ಕಾಡುಗೊಲ್ಲ ಅಭಿವೃದ್ಧಿ ನಿಗಮ ಸ್ಥಾಪಿಸಲಾಗಿದೆ. ಆದರೆ ಇನ್ನೂ ಸಮಾಜ ಅಭಿವೃದ್ಧಿ ಆಗಿಲ್ಲ. ನಿಗಮದ ಮೂಲಕ ಸಾಲಸೌಲಭ್ಯ, ಈ ಸಮುದಾಯದ ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುವ ಮೂಲಕ ಅವರನ್ನು ಮೌಢ್ಯತೆಯಿಂದ ಹೊರ ತರುವ ಕೆಲಸ ಸರ್ಕಾರ ಮಾಡಬೇಕೆಂದು ಒತ್ತಾಯಿಸಿದರು.

## ಕೇಂದ್ರ ಸರ್ಕಾರದ ಭರವಸೆಗಳ ಸಮಿತಿ ಸದಸ್ಯರಾಗಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ನೇಮಕ

**ದಾವಣಗೆರೆ.ಮಾ.5;** ಕೇಂದ್ರ ಸರ್ಕಾರವು ಭರವಸೆಗಳ



ಸಮಿತಿಯನ್ನು ರಚನೆ ಮಾಡಿದ್ದು ಈ ಸಮಿತಿಗೆ ಸದಸ್ಯರನ್ನಾಗಿ ದಾವಣಗೆರೆ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರನ್ನು ಲೋಕಸಭಾ ಸ್ಪೀಕರಾದ ಓಂ ಬಿರ್ಲಾ ಅವರು ನೇಮಕಮಾಡಿದ್ದಾರೆ.

ಈ ಸಮಿತಿಗೆ ಸಂಸದರಾದ ಹರೇಂದ್ರ ಸಿಂಗ್ ಮಲ್ಲಿಕ್

ಅಧ್ಯಕ್ಷರಾಗಿದ್ದಾರೆ ಹಾಗೂ ಸಮಿತಿಯಲ್ಲಿ 15 ಸಂಸದರು ಸದಸ್ಯರಾಗಿದ್ದಾರೆ. ದಾವಣಗೆರೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಆರೋಗ್ಯ ಸಮಿತಿ, ಶಿಕ್ಷಣ ಸಲಹಾ ಸಮಿತಿ ಹಾಗೂ ನಿಮಾನ್ಸ್ ಸಂಸ್ಥೆಯ ಸದಸ್ಯರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು ಇದೀಗ ಭರವಸೆ ಸಮಿತಿಗೂ ಸದಸ್ಯರಾಗಿದ್ದಾರೆ. ಈ ಕಮಿಟಿಯು ಸಚಿವರು ನೀಡಿದ ಭರವಸೆಗಳು ಮತ್ತು ಬದ್ಧತೆಗಳನ್ನು ಪರಿಶೀಲಿಸುತ್ತದೆ.ಜೊತೆಗೆ

ಭರವಸೆಗಳನ್ನು ಎಷ್ಟು ಕಾರ್ಯಗತಗೊಳಿಸಲಾಗಿದೆ ಎಂಬುದರ ಕುರಿತು ವರದಿ ಮಾಡಲಿದೆ.

ಅನುಷ್ಠಾನ ಅಗತ್ಯ ಸಮಯದಲ್ಲಿ ನಡೆದಿದೆ ಎಂಬುದರ ಬಗ್ಗೆ ವರದಿ ಹಾಗೂ ಅನುಷ್ಠಾನಗೊಳ್ಳದ ಬಗ್ಗೆ ಬಂದ ದೂರುಗಳನ್ನು ಪರಿಶೀಲಿಸಲಿದೆ ಎಂದು ಸಂಸದರ ಆಪ್ತ ಸಹಾಯಕರಾದ ಕೆ.ಎಲ್ ಹರೀಶ್ ಬಸಾಪುರ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಎಂ.ಕೆ. ಫೈಜಿ ಬಿಡುಗಡೆಗೆ ಎಸ್‌ಡಿಪಿಐ ಆಗ್ರಹ




**ದಾವಣಗೆರೆ :** ಮಾರ್ಚ್ 04, ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ದಾವಣಗೆರೆ ಜಿಲ್ಲಾ ಸಮಿತಿ ವತಿಯಿಂದ ನಗರದ ಅಕ್ತರ್ ರಜಾ ಸರ್ಕಲ್ ಬಳಿ ಎಸ್ ಡಿ ಪಿ ಐ ರಾಷ್ಟ್ರೀಯ ಅಧ್ಯಕ್ಷರಾದ ಎಂ ಕೆ ಫೈಝಿ ರವರನ್ನು ಇಡಿ ಅನ್ಯಾಯವಾಗಿ ಬಂಧಿಸಿರುವುದನ್ನು ಖಂಡಿಸಿ ಮತ್ತು ಶೀಘ್ರವಾಗಿ ಬಿಡುಗಡೆಗೊಳಿಸುವಂತೆ ಪ್ರತಿಭಟನೆ ನಡೆಸಿತು.

ಎಸ್ ಡಿಪಿಐ ರಾಷ್ಟ್ರೀಯ ಅಧ್ಯಕ್ಷರ ಬಂಧನವನ್ನು ಖಂಡಿಸುತ್ತದೆ ಈ ಬಂಧನವು ಭಿನ್ನಮತವನ್ನು ಹತ್ತಿಕ್ಕಲು ಮತ್ತು ರಾಜಕೀಯ ವಿರೋಧಿಗಳನ್ನು ದಮನಿಸಲು ನಡೆಸುವ ಸೇಡಿನ ರಾಜಕೀಯದ ಭಾಗವಾಗಿದೆ ದೆಹಲಿಯಲ್ಲಿ ಜಾರಿ ನಿರ್ದೇಶನಾಲಯವು ತನ್ನ ರಾಷ್ಟ್ರೀಯ ಅಧ್ಯಕ್ಷ ಎಂ.ಕೆ. ಫೈಜಿ ಅವರನ್ನು ಬಂಧಿಸಿರುವುದಕ್ಕೆ ಭಾರತೀಯ ಸಾಮಾಜಿಕ ಪ್ರಜಾಸತ್ತಾತ್ಮಕ ಪಕ್ಷವು ತನ್ನ ತೀವ್ರ ಖಂಡನೆಯನ್ನು ವ್ಯಕ್ತಪಡಿಸಿತು.

ರಾಷ್ಟ್ರೀಯ ಅಧ್ಯಕ್ಷರ ಬಂಧನವು ಕೇಂದ್ರ ಬಿಜೆಪಿ ಸರ್ಕಾರವು ಭಿನ್ನಮತದ ಧ್ವನಿಯನ್ನು ಹತ್ತಿಕ್ಕಲು ನಡೆಸಿದ ಸೇಡಿನ ರಾಜಕೀಯವಲ್ಲದೆ ಬೇರೇನೂ ಅಲ್ಲ. ಸುಳ್ಳು ಆರೋಪಗಳನ್ನು ಹೊರಿಸುವ ಮೂಲಕ ಮತ್ತು ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುವ ಮೂಲಕ ಪ್ರಜಾಪ್ರಭುತ್ವ ವಿರೋಧಿಗಳನ್ನು ಬೆದರಿಸುವುದು ಮತ್ತು ದಬ್ಬಾಳಿಕೆ ಮಾಡುವುದು ಆಡಳಿತದ ಕಾರ್ಯಸೂಚಿಯ ಭಾಗವಾಗಿದೆ ಎಂದರು.

ಈ ಸಮಯದಲ್ಲಿ ಜಿಲ್ಲಾಧ್ಯಕ್ಷ ಯಾಹಿಯ, ಜಿಲ್ಲಾ ಉಪಾಧ್ಯಕ್ಷ ರಜ್ವಿ ರಿಯಾಜ್ ಅಹಮದ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ ಆರ್ ತಾಹೀರ್, ಜಿಲ್ಲಾ ಕಾರ್ಯದರ್ಶಿ ಗಳಾದ ಮೊಹಮ್ಮದ್ ಮೋಹಸಿನ್,ಮೊಹಮ್ಮದ್ ಜುನೈದ್, ಜಿಲ್ಲಾ ಕೋಶಾಧಿಕಾರಿ ಮೊಹಮ್ಮದ್ ಅಜರುದ್ದೀನ್, ಜಿಲ್ಲಾ ಸಮಿತಿ ಸದಸ್ಯರಾದ ಇಸ್ಮಾಯೀಲ್ ಝಬಿವುಲ್ಲಾ, ಸೈಯದ್ ಅಶ್ಫಾಖ್, ಸೈಯದ್ ರೆಹಮಾನ್, ಜಬಿ ಅಜಾದ್ ನಗರ ಮತ್ತು ದಾವಣಗೆರೆ ಮತ್ತು ಹರಿಹರ ವಿಧಾನಸಭಾ ಕ್ಷೇತ್ರ ಸಮಿತಿಗಳ ಪದಾಧಿಕಾರಿಗಳು ಕಾರ್ಯಕರ್ತರು, ಹಾಗೂ ಬೆಂಬಲಿಗರು ಉಪಸ್ಥಿತರಿದ್ದರು.

## ಆಂತರಿಕ ಶಕ್ತಿ ನಮ್ಮನ್ನು ಉನ್ನತ ಮಟ್ಟಕ್ಕೆ ತೆಗೆಕೊಂಡು ಹೋಗುತ್ತದೆ : ನ್ಯಾ.ಶೈನಿ



**ಶಿವಮೊಗ್ಗ :** ನಮ್ಮೊಳಗಿನ ಆಂತರಿಕ ಶಕ್ತಿ ನಮ್ಮನ್ನು ಉನ್ನತ ಮಟ್ಟಕ್ಕೆ ತೆಗೆದುಕೊಂಡು ಹೋಗುತ್ತದೆ. ಆದ್ದರಿಂದ ಹೆಣ್ಣು ಮಕ್ಕಳು ತಮ್ಮ ಶಕ್ತಿ ಅರಿತು ಇತರೆ ಹೆಣ್ಣುಮಕ್ಕಳ ಶಕ್ತಿಯನ್ನು ಅರ್ಥ ಮಾಡಿಕೊಂಡು ಮುಂದೆ ಬರಬೇಕೆಂದು ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಶೈನಿ ಕೆ ಎಂ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಬುಧವಾರ ನೆಹರೂ ಕ್ರೀಡಾಂಗಣದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೆಣ್ಣುಮಕ್ಕಳು ಕಟ್ಟುಪಾಡು, ಕಟ್ಟಳೆಗಳನ್ನು ಮುರಿದು ಮುಂದೆ ಬಂದಿದ್ದಾಳೆ. ಪುರುಷರು ನಿರ್ವಹಿಸುವಂತಹ ಬಹುತೇಕ ಎಲ್ಲಾ ಕ್ಷೇತ್ರಗಳಲ್ಲೂ ಇಂದು ಹೆಣ್ಣುಮಕ್ಕಳಿದ್ದಾರೆ. ಜೊತೆಗೆ ಅವಳೆಡೆಗಿನ ಸಮಾಜದ ನಿರೀಕ್ಷೆಗಳು, ಪಿತೃಪ್ರಧಾನ ಸಮಾಜದ ರೂಢಿಗಳು ಹಾಗೂ ಸಾಕಷ್ಟು ಇತರೆ ಸವಾಲುಗಳನ್ನು ಎದುರಿಸುತ್ತಾ ಬಂದಿದ್ದಾಳೆ. ಹೆಣ್ಣು ಎಷ್ಟೇ ಯಶಸ್ಸು ಸಾಧಿಸಿದ್ದರೂ ಕುಟುಂಬ, ಕಾಳಜಿ ವಿಷಯ ಬಂದಾಗ ತನ್ನ ಆಸೆಗಳನ್ನು ತ್ಯಾಗ ಮಾಡಿ ರಾಜೀ ಮಾಡಿಕೊಳ್ಳಲೇಬೇಕಾಗುತ್ತದೆ.

ಹೆಣ್ಣುಮಕ್ಕಳು ಕ್ಲೇಷಗಳನ್ನು ಕಳೆದು ಮನಸ್ಥಿತಿ ಮತ್ತು ಆಲೋಚನೆ ಬದಲಾಯಿಸಿಕೊಂಡಲ್ಲಿ ಉತ್ತಮ ಬದಲಾವಣೆ ಸಾಧ್ಯವಾಗುತ್ತದೆ. ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಮ್ಮಲ್ಲಿನ ಕೌಶಲ್ಯವನ್ನು, ಶಕ್ತಿಯನ್ನು ಹೆಚ್ಚಿಸುತ್ತದೆ. ಬಲವಾದ ಸಾಮಾಜಿಕ ನೆಟ್‌ವರ್ಕ್ ಒದಗಿಸುತ್ತದೆ. ಮಾತಿಗೆ ಒಳ್ಳೆಯ ಶಕ್ತಿ ಇದ್ದು ನಾವಾಡುವ ಮಾತು ಸತ್ವ ಮತ್ತು ತತ್ವಭರಿತವಾಗಿರಬೇಕು. ವೈಷಮ್ಯ, ದ್ವೇಷ, ಪ್ರಚೋದನೆಗೀಡು ಮಾಡದೇ ಸೌಹಾರ್ದಯುತವಾಗಿರಬೇಕು ಎಂದ ಅವರು ಮಹಿಳೆಯರಾದ ನಾವೆಲ್ಲ ನಮ್ಮ ಸಾಧನೆಗಳನ್ನು ಆಚರಿಸೋಣ, ಒಬ್ಬರಿಗೊಬ್ಬರು ಬೆಂಬಲಿಸೋಣ, ಕರ್ತವ್ಯಪಾಲನೆಯೊಂದಿಗೆ ಸಬಲೀಕರಣಗೊಳ್ಳೋಣ ಎಂದು ಕರೆ ನೀಡಿದರು.

ಕಟೀಲ್ ಅಶೋಕ್ ಪೈ ಸ್ಮಾರಕ ಕಾಲೇಜಿನ ಪ್ರಾಂಶುಪಾಲರಾದ ಡಾ.ಸಂಧ್ಯಾ ಕಾವೇರಿ ಕೆ ಮಾತನಾಡಿ, ಈ ವರ್ಷದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಘೋಷವಾಕ್ಯ 'ಕ್ರಿಯೆಗಳ ವೇಗವನ್ನು ವರ್ಧಿಸಿ' ಎಂಬುದಾಗಿದ್ದು, ನಾವು ಸಮಾನತೆಯ ಕ್ರಿಯೆಗಳ ವೇಗವನ್ನು ವರ್ಧಿಸಬೇಕು. ಇಡೀ ಸಮಾಜ ಸಕ್ರಿಯವಾಗಿ ಪಾಲ್ಗೊಂಡು ಸಮಾನತೆಯನ್ನು ಸಾಧಿಸಬೇಕು. ಸಾಧನೆಯೊಂದೇ ಸಾಲದು, ಇದರ ವೇಗವನ್ನು ವರ್ಧಿಸಬೇಕು ಎಂದು ಹೇಳಿದರು.

ಉತ್ತಮ ಸಾಧನೆಯ ಭಾಗವೇ ಕ್ರೀಡೆ. ಇದೊಂದು ಸಮಾಜದ ಅಭಿವೃದ್ಧಿಯ ಅತ್ಯುತ್ತಮ ಮಾದರಿ. ಹಾಗೂ ಇದನ್ನು ಸಮಾನತೆಯ ಸೂಚ್ಯಂಕವನ್ನಾಗಿ ತೆಗೆದುಕೊಳ್ಳಬಹುದು. ಕ್ರೀಡೆಯಿಂದ ಮನುಷ್ಯನ ಎಲ್ಲ ಸ್ನಾಯುಗಳಿಗೆ ಚಲನೆ ದೊರೆಯುತ್ತದೆ. ಸ್ನಾಯು ಮತ್ತು ಮೆದುಳಿನ ಸಂಯೋಜನೆ ಅತ್ಯಂತ ಮುಖ್ಯ. ಕ್ರೀಡೆ ಮೆದುಳಿನ ರಾಸಾಯನಿಕ ಏರುಪೇರುಗಳನ್ನು ಸಮತೋಲನಗೊಳಿಸುತ್ತದೆ. ಮಾನಸಿಕ ಸುಸ್ಥಿತಿಗೆ ಕಾರಣವಾಗುತ್ತದೆ. ಏಕಾಗ್ರತೆಯನ್ನು ಹೆಚ್ಚಿಸಿ, ಭಾವನೆಗಳನ್ನು ನಿಯಂತ್ರಿಸುತ್ತದೆ. ಹಾಗೂ ಸೋಲು, ಗೆಲುವನ್ನು ಸಮಾನವಾಗಿ ಸ್ವೀಕರಿಸುವುದನ್ನು ಕಲಿಸುತ್ತದೆ. ಕ್ರೀಡೆಯನ್ನು ಪ್ರೀತಿಸಿದರೆ ಅದು ತಮ್ಮ ಬಗ್ಗೆ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ.ಆದ್ದರಿಂದ ಹೆಣ್ಣುಮಕ್ಕಳು ಕ್ರೀಡೆ ಕುರಿತು ಯಾವುದೇ ತಪ್ಪು ಕಲ್ಪನೆ ಹೊಂದದೆ ಮುಂದೆ ಬರಬೇಕೆಂದು ಕರೆ ನೀಡಿದರು.

## ಭೂಮಿ ಹಕ್ಕಿಗಾಗಿ 11 ಕ್ಕೆ ಬೆಂಗಳೂರು ಚಲೋ



**ಚಿಕ್ಕಮಗಳೂರು:** ಭೂಮಿಯ ಹಕ್ಕು ಸಾಮಾಜಿಕ ನ್ಯಾಯದ ಪ್ರತಿಪಾದನೆಗಾಗಿ ಮಾ.11 ರಂದು ಬೆಂಗಳೂರು ಚಲೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಯುಕ್ತ ಹೋರಾಟ ಕರ್ನಾಟಕ ಸಂಘಟನೆ ಜಿಲ್ಲಾಧ್ಯಕ್ಷ ಗೌಸ್ ಮೊಯಿದ್ದೀನ್ ತಿಳಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಮಾ.11 ರಂದು ಭೂ ಸತ್ಯಾಗ್ರಹಕ್ಕೆ ಚಾಲನೆ ನೀಡಲಿದ್ದು, ಮಾ.12 ಮತ್ತು 13 ರಂದು ಬೆಂಗಳೂರಿನ ಗಾಂಧಿ ಭವನದಲ್ಲಿ ನಡೆಯಲಿರುವ ಜನಚಳವಳಿಗಳ ಬಜೆಟ್ ಅವೇಶನದಲ್ಲಿ ಭೂ-ಹಕ್ಕಿನ ಪ್ರತಿಪಾದನೆ ನಡೆಯಲಿದೆ ಎಂದು ಹೇಳಿದರು.

ಸಾಗುವಳಿ ಮಾಡುತ್ತಾ ಅರ್ಜಿ ಸಲ್ಲಿಸಿರುವ ಭೂರಹಿತರಿಗೆಲ್ಲರಿಗೂ ಯಾವುದೇ ಸಬೂಬು ಹೇಳದೆ ಸರಕಾರ ಹಕ್ಕುಪತ್ರ ನೀಡಲೇಬೇಕು. ಬಡವರು ಕಟ್ಟಿಕೊಂಡಿರುವ ಮನೆಗಳಿಗೆ ಸಕ್ರಮ ಮಂಜೂರಾತಿ ನೀಡಬೇಕು. ನೆಲೆ ಇಲ್ಲದ ಪ್ರತಿಯೊಂದು ಕುಟುಂಬಕ್ಕೂ ಸ್ವಂತದ ಸೂರೊಂದನ್ನು ಸರಕಾರ ಕಲ್ಪಿಸಿಕೊಡಬೇಕು. ಅಭಿವೃದ್ಧಿಯ ಹೆಸರಲ್ಲಿ ಬಲವಂತದ ಭೂಸ್ವಾಧೀನ ನಿಲ್ಲಲಿ. ಒತ್ತುವರಿ ಹೆಸರಲ್ಲಿ ಯಾವುದೇ ಜಾಗ, ಭೂಮಿಯಿಂದ ಒಕ್ಕಲೆಬ್ಬಿಸಬಾರದು ಒತ್ತಾಯಿಸಿದರು.

ಭೂಮಿಯ ಮೇಲೆ ಬಲಾಢ್ಯರಿಗೆ ಮಾತ್ರವಲ್ಲ ಬಡವರಿಗೂ ಹಕ್ಕಿದೆ. ಮಲೆನಾಡಿನಲ್ಲಿ ಜಾರಿಗೆ ತರುತ್ತಿರುವ ಭೂ-ಗುತ್ತಿಗೆ ರದ್ದುಪಡಿಸಬೇಕು ಹಾಗೂ ಅರಣ್ಯ ಹಕ್ಕು ಕಾಯಿದೆ ಅನ್ವಯ ಭೂ-ಮಂಜೂರಾತಿ ನೀಡುವುದು ಸೇರಿದಂತೆ ವಿವಿಧ ಬೇಡಿಕೆ ಮುಂದಿಟ್ಟು ಭೂ-ವಸತಿ ಹಕ್ಕು ವಂಚಿತರು ಅಂದು ಸರಕಾರ-ಕ್ಕೆ ನೋಟೀಸ್ ನೀಡಲಿದ್ದಾರೆ ಎಂದು ಹೇಳಿದರು.

ಸಂಯುಕ್ತ ಹೋರಾಟ ಕರ್ನಾಟಕ ಸಂಘಟನೆ ಮುಖಂಡರಾದ ಕೆ.ಕೆ. ಕೃಷ್ಣೇಗೌಡ, ಬಸವರಾಜು, ಲೋಕೇಶ್, ಎದ್ದೇಳು ಕರ್ನಾಟಕದ ರೀತು, ಅರುಣಾಕ್ಷಿ, ಲೋಕೇಶ್, ಹುಸೇನ್, ಗಣೇಶ್ ಮತ್ತಿತರರಿದ್ದರು.



# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ನಿಮ್ಮ ಮಕ್ಕಳ ಸಮಸ್ಯೆಗಳನ್ನು ನಿಭಾಯಿಸಲು ಸ್ವಲ್ಪ ಸಮಯ ತೆಗೆದುಕೊಳ್ಳಿ. ಧೃತಿಗೆಡಬೇಡಿ – ವೈಫಲ್ಯಗಳು ಸಹಜ ಅವುಗಳು ಜೀವನದ ಸೌಂದರ್ಯವಾಗಿವೆ. ಕಡಿಮೆ ಅಡೆತಡೆಗಳೊಂದಿಗೆ–ಇದು ಅದ್ಭುತ ಸಾಧನೆಗಳ ದಿನದಂತೆ ಕಾಣುತ್ತದೆ ತಾವು ಬಯಸಿದ್ದು ಸಿಗದಿದ್ದಲ್ಲಿ ಕಿರಿಕಿಯಾಗಿ ವರ್ತಿಸುವ ಸಹೋದ್ಯೋಗಿಗಳ ಎಚ್ಚರದಿಂದಿರಿ.

### ವೃಷಭ ರಾಶಿ

ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ. ನಿಮ್ಮ ವರ್ತನೆ ಕೇವಲ ನಿಮ್ಮ ಕುಟುಂಬಕ್ಕೆ ಮಾತ್ರವೇ ಅಸಮಾಧಾನ ತರದೇ ಸಂಬಂಧಗಳಲ್ಲೂ ಶೂನ್ಯತೆಯನ್ನು ತರಬಹುದು. ನಿಮ್ಮ ಪ್ರೇಮಿಗೆ ಇಷ್ಟವಿಲ್ಲದ ಉಡುಪುಗಳು ಅವರಿಗೆ ಮುಜುಗರ ಉಂಟುಮಾಡಬಹುದಾದ್ದರಿಂದ ಅವುಗಳನ್ನು ಧರಿಸಬೇಡಿ. ನೀವು ಕಷ್ಟಕರವೆಂದು ತೋರುವ ಸಮಸ್ಯೆಗಳನ್ನು ಪರಿಹರಿಸಲು ನಿಮಗಿರುವ ಸಂಪರ್ಕಗಳನ್ನು ಬಳಸಬೇಕಾಗುತ್ತದೆ

### ಮಿಥುನ ರಾಶಿ

ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಕೌಟುಂಬಿಕ ಸಮಸ್ಯೆಗೆ ಮೊದಲ ಆದ್ಯತೆ ನೀಡಬೇಕು. ನೀವು ವಿಳಂಬವಿಲ್ಲದೇ ಇದನ್ನು ಚರ್ಚಿಸಬೇಕು, ಏಕೆಂದರೆ ಒಮ್ಮೆ ಇದನ್ನು ಬಗೆಹರಿಸಿದ ನಂತರ ಮನೆಯಲ್ಲಿನ ಜೀವನ ನಡೆಸಲು ಹೆಚ್ಚು ಸುಲಭವಾಗುತ್ತದೆ ಮತ್ತು ನಿಮ್ಮ ಕುಟುಂಬದ ಸದಸ್ಯರ ಮೇಲೆ ಪ್ರಭಾವ ಬೀರಲು ನಿಮಗೆ ಯಾವುದೇ ತೊಂದರೆ ಕಂಡುಬರುವುದಿಲ್ಲ.

### ಕರ್ಕ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ನೀವು ನಿಮ್ಮ ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ. ನಿಮಗೆ ಆಶ್ಚರ್ಯವಾಗುವ ಹಾಗೆ ನಿಮ್ಮ ಸಹೋದರ ನಿಮ್ಮನ್ನು ಪಾರು ಮಾಡುತ್ತಾರೆ. ನೀವು ಒಬ್ಬರೊಬ್ಬರನ್ನು ಸಂತೋಷವಾಗಿಡಲು ಒಟ್ಟೊಟ್ಟಿಗೆ ಕೆಲಸ ಮಾಡಬೇಕು.

### ಸಿಂಹ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ಸ್ನೇಹಿತರು ಜೊತೆಗಿನ ಚಟುವಟಿಕೆಗಳು ಆಹ್ಲಾದಕರವಾಗಿರುತ್ತವೆ – ಇಲ್ಲದಿದ್ದರೆ ನೀವು ಖಾಲಿ ಕೈಯಲ್ಲಿ ಜೊತೆ ತೆರಳುತ್ತೀರಿ. ಪ್ರಣಯದ ಬಂಧಗಳು ನಿಮ್ಮ ಸಂತೋಷವನ್ನು ಆಸಕ್ತಿಕರವಾಗಿಸುತ್ತವೆ. ಇಂದು ಕೆಲಸದಲ್ಲಿ ನಿಮಗೆ ನಿಜಕ್ಕೂ ಒಳ್ಳೆಯದಾಗಬಹುದು, ಇಂದು ನಿಮ್ಮನ್ನು ದ್ವೇಷಿಸುವವರಿಗೆ ‘ಹಲೋ’ ಎಂದಲ್ಲಿ.

### ಕನ್ಯಾ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಅನಿರೀಕ್ಷಿತ ಬಿಲ್ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ. ಪ್ರೀತಿ ಇಂದ್ರಿಯಗಳ ಮಿತಿಯನ್ನು ಮೀರಿದ್ದಾಗಿದೆ, ಆದರೆ ನಿಮ್ಮ ಇಂದ್ರಿಯಗಳು ಇಂದು ಪ್ರೀತಿಯ ಭಾವಪರವಶತೆಯನ್ನು ಅನುಭವಿಸುತ್ತವೆ. ನೀವು ಏನೂ ಮಾಡಿದರೂ ಪರಿಪೂರ್ಣವಾಗಿ ಮಾಡುತ್ತೀರಿ – ನಿಮ್ಮ ಸುತ್ತಲಿನವರಿಗೆ ನೀವೆಷ್ಟು ಪರಿಣಾಮಕಾರಿಯೆಂದು ತೋರಿಸುವ ಮೂಲಕ ನಿಮ್ಮ ಮೌಲ್ಯವನ್ನು ಸಾಬೀತು ಮಾಡಿ.

### ತುಲಾ ರಾಶಿ

ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ– ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ. ಒಬ್ಬ ಹತ್ತಿರದ ಸಂಬಂಧಿಗೆ ಹೆಚ್ಚು ಗಮನ ನೀಡಬೇಕಾಗಬಹುದಾದರೂ ಅವರು ಬೆಂಬಲ ಮತ್ತು ಆರೈಕೆ ನೀಡಬಹುದು. ಪ್ರಣಯದ ಅವಕಾಶಗಳಿವೆ – ಆದರೆ ಅವು ಕ್ಷಣಿಕವಾಗಿರುತ್ತವೆ

### ವೃಶ್ಚಿಕ ರಾಶಿ

ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ತಮ್ಮ ವ್ಯಾಪರಕ್ಕಾಗಿ ಮನೆಯಿಂದ ಹೊರಗೆ ಹೋಗಿರುವ ವ್ಯಾಪಾರಿಗಳು, ತನ್ನ ಹಣವನ್ನು ಜಾಗರೂಕವಾಗಿಡಿ, ಹಣದ ಕಳ್ಳತನವಾಗುವ ಸಾಧ್ಯತೆ ಇದೆ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

### ಧನು ರಾಶಿ

ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ಸಹಾನುಭೂತಿ ಮತ್ತು ತಿಳುವಳಿಕೆಗೆ ಪ್ರತಿಫಲ ದೊರಕುತ್ತದೆ. ಆದರೆ ಯಾವುದೇ ಆತುರದ ತೀರ್ಮಾನ ಒತ್ತಡ ಉಂಟುಮಾಡಬಹುದಾದ್ದರಿಂದ ಎಚ್ಚರಿಕೆಯಿಂದಿರಿ.

### ಮಕರ ರಾಶಿ

ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು.

### ಕುಂಭ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಇಂದು ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ.

### ಮೀನ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು.

# ಎಸ್.ಎಸ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಂಶೋಧನಾ ವಿದ್ಯಾರ್ಥಿಗಳ ಸಾಧನೆಗೆ ಶ್ಲಾಘನೆ




**ದಾವಣಗೆರೆ:** ನಗರದ ರಾಷ್ಟ್ರೀಯ ಹೆದ್ದಾರಿ ನಾಲ್ಕರಲ್ಲಿನ ಬಾಪೂಜಿ ಶೈಕ್ಷಣಿಕ ಸಂಘದ ಅಡಿಯಲ್ಲಿನ ಎಸ್.ಎಸ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಸಂಶೋಧನಾ ಕೇಂದ್ರದಿಂದ 2024–25 ನೇ ಸಾಲಿನಲ್ಲಿ ನಡೆದ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ಅತ್ಯುತ್ತಮ ರ್ಯಾಂಕ್ ಪಡೆದು ತೇರ್ಗಡೆ ಹೊಂದಿದ್ದಾರೆ.

ಪಿ.ಜಿ ಹಂತದಲ್ಲಿ ಬರುವ ಎಂ.ಡಿ ವಿಭಾಗದಲ್ಲಿ ತುರ್ತು ಔಷಧ ಪರೀಕ್ಷೆಯಲ್ಲಿ ಡಾ.ಅರವಿಂದ ಪಿ.ಕೆ 5 ನೇ ರ್ಯಾಂಕ್ ಪಡೆದಿದ್ದರೆ, ಎಂ.ಎಸ್ ಹಂತದಲ್ಲಿನ ಪ್ರಸೂತಿ ಮತ್ತು ಸ್ತ್ರೀರೋಗ ವಿಭಾಗದಲ್ಲಿ ಡಾ.ವಾರಧಿ ಜಿ.ಆರ್ 3 ನೇ ರ್ಯಾಂಕ್ ಪಡೆದಿದ್ದಾರೆ.

ಯು.ಜಿ ಹಂತದ ವ್ಯಾಪ್ತಿಗೆ ಬರುವ ಪರೀಕ್ಷೆಗಳಲ್ಲಿ ಡಾ.ಯುವರಾಜ್ ಎಸ್.ಪಿ ಅವರು ವೈದ್ಯಕೀಯ ವಿಶ್ವವಿದ್ಯಾಲಯದ 4 ನೇ ಟಾಫರ್ ಆಗಿದ್ದಲ್ಲದೆ ವಿವಿಧ ವಿಭಾಗಳಲ್ಲಿ ರ್ಯಾಂಕ್ ಪಡೆದು ಸಾಧನೆ ಮಾಡಿದ್ದಾರೆ. ಮಕ್ಕಳ ವೈದ್ಯಕೀಯ ಕ್ಷೇತ್ರವಾದ ಫೀಡಿಯಾಟ್ರಿಕ್ (ಕಂಇಆಖಂಖಿಖಅ) ವಿಭಾಗದಲ್ಲಿ ಭಾರ್ಗವಿ 6ನೇ ರ್ಯಾಂಕ್, ಅಧಿತಿ 8 ನೇ ರ್ಯಾಂಕ್, ಅಕ್ಷತಾ 8 ನೇ ರ್ಯಾಂಕ್, ಸಹನ ಹೆಚ್.ಎನ್ 8 ನೇ ರ್ಯಾಂಕ್ ಪಡೆದಿದ್ದಾರೆ. ಅಂಗರಚನಾಶಾಸ್ತ್ರ ವಿಭಾಗದಲ್ಲಿ ಸುಪ್ರಜಾ ಎಂ.ಹೆಚ್ ಅವರು 10 ನೇ ರ್ಯಾಂಕ್ ಪಡೆದಿದ್ದು, ಸಿಂದೂ ಎನ್. ಅವರು ಶರೀರಶಾಸ್ತ್ರ ) 9 ನೇ ರ್ಯಾಂಕ್ ಹಾಗೂ ಸಮುದಾಯ ) ವಿಭಾಗದಲ್ಲಿ 10 ನೇ ರ್ಯಾಂಕ್ ಪಡೆದಿರುವರು. ನಂದಕಿಶೋರ್ ಬಾಣಾಪುರ ಮಕ್ಕಳ ವೈದ್ಯಕೀಯ ಕ್ಷೇತ್ರವಾದ ಫೀಡಿಯಾಟ್ರಿಕ್ ವಿಭಾಗದಲ್ಲಿ 5 ನೇ ರ್ಯಾಂಕ್ ಹಾಗೂ ಮೈಕ್ರೋಬಯಲಾಜಿ ವಿಭಾಗದಲ್ಲಿ 10 ನೇ ರ್ಯಾಂಕ್ ಪಡೆದು ಸಾಧನೆ ಮಾಡಿರುವರು.

ವೈದ್ಯಕೀಯ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಎಸ್.ಎಸ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಸಂಶೋಧನಾ ಕೇಂದ್ರದ ಮುಖ್ಯಸ್ಥರು ಹಾಗೂ ಹಿರಿಯ ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪ ಅವರು ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ ಅವರು ಹಾಗೂ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಹಾಗೂ ಸಂಸ್ಥೆಯ ಪ್ರಾಂಶುಪಾಲರಾದ ಡಾ.ಬಿ.ಎಸ್ ಪ್ರಸಾದ್, ವೈದ್ಯಕೀಯ ಅಧೀಕ್ಷಕರಾದ ಅರುಣ್ ಕುಮಾರ್ ಅವರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಗೆ ಸಂಸ್ಥೆಯ ಆಡಳಿತ ಮಂಡಳಿಯವರು ಹಾಗೂ ಭೋದಕ–ಭೋದಕೇತರ ಸಿಬ್ಬಂದಿಗಳು ಅಭಿನಂದಿಸಿದ್ದಾರೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ವಿದ್ಯಾರ್ಥಿಗಳು ಕೌಶಲ್ಯಾಭಿವೃದ್ಧಿ ತರಬೇತಿಗಳ ಸದುಪಯೋಗ ಪಡೆಯಿರಿ



**ಶಿವಮೊಗ್ಗ:** ಕೌಶಲ್ಯಾಭಿವೃದ್ಧಿ, ಕೈಗಾರಿಕಾಭಿವೃದ್ಧಿ ಹಾಗೂ ರಾಷ್ಟ್ರದ ಅಭಿವೃದ್ದಿಗೆ ಅತ್ಯಂತ ಅವಶ್ಯಕವಾದ ಶಿಕ್ಷಣ ಪಡೆದ ಎಲ್ಲಾ ಅಭ್ಯರ್ಥಿಗಳು ಕೌಶಲ್ಯಾಭಿವೃದ್ಧಿ ತರಬೇತಿಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಶಿವಮೊಗ್ಗ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಉಪಾಧ್ಯಕ್ಷರಾದ ಜಿ.ವಿಜಯಕುಮಾರ್ ಹೇಳಿದರು.

ಗಾಜನೂರಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ವತಿಯಿಂದ ಮಂಗಳವಾರ ಆಯೋಜಿಸಿದ್ದ ಪಿ. ಎಂ ಇಂಟರ್ನಶಿಪ್ ಅಂಡ್ ಅಪ್ರೆಂಟಿಷಿಪ್ ಯೋಜನೆಗಳ ಅರಿವು ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು

ಶಿವಮೊಗ್ಗ ಜಿಲ್ಲಾ ವಾಣಿಜ್ಯ ಹಾಗೂ ಕೈಗಾರಿಕಾ ಸಂಘ ಆರಂಭಿಸಿರುವ ಅಡ್ವಾನ್ಸ್ಡ ಸ್ಕಿಲ್ ಅಕಾಡೆಮಿಯ ಬಗ್ಗೆ ಮಾಹಿತಿ ನೀಡಿದ ಅವರು ಇದನ್ನು ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ನಿರ್ದೇಶಕರಾದ ಡಾ. ಬಿ. ವಿ. ಲಕ್ಷ್ಮೀದೇವಿ ಗೋಪಿನಾಥ್ ಮಾತನಾಡಿ, ಇಂದಿನ ವಿದ್ಯಾರ್ಥಿಗಳೇ ಭವಿಷ್ಯ ಭಾರತದ ಗುಣಮಟ್ಟವನ್ನು ನಿರ್ಧರಿಸುವುದು. ಆದ್ದರಿಂದ ಇಂತಹ ಅವಕಾಶಗಳನ್ನು ಉಪಯೋಗಿಸಿಕೊಂಡು ಕೌಶಲ್ಯಾಭಿವೃದ್ಧಿ ಬೆಳಿಸಿಕೊಳ್ಳಬೇಕು ಎಂದರು.

ನಿರ್ದೇಶಕ ಗಣೇಶ್ ಎಂ ಅಂಗಡಿ ಮಾತನಾಡಿ, ವಿದ್ಯಾರ್ಥಿಗಳಿಗೆ ಕೌಶಲ್ಯ ಕಲಿತು, ಉತ್ತಮ ಉತ್ಪಾದಕರಾಗಲು, ಉದ್ಯಮಿಯಾಗಲು ಕರೆ ನೀಡಿದರು. ಜಿಲ್ಲಾ ಶಿಶಿಕ್ಷು ನೋಡಲ್ ಅಧಿಕಾರಿ ವಿಜಯಕುಮಾರ್ ಸಪಲಿ ಮಾತನಾಡಿ, ಐಟಿಐ ತರಬೇತಿಯಾದ ನಂತರ ಅರ್ಹ ಅಭ್ಯರ್ಥಿಗಳು ಪಿಎಂಐಎಸ್ ಪೋರ್ಟಲ್ ಮತ್ತು ಪೋರ್ಟಲ್ನಲ್ಲಿ ನೋಂದಣಿ ಮಾಡಿಕೊಂಡು ತರಬೇತಿ ಪಡೆದುಕೊಳ್ಳಿರಿ ಎಂದರು. ಕಾರ್ಯಕ್ರಮದಲ್ಲಿ ಗಾಜನೂರು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಬಿ. ಟಿ . ಶೇಖರಪ್ಪ, ತೀರ್ಥಹಳ್ಳಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕಾಳಿದಾಸ್ ನಾಯ್ಕ್, ಭದ್ರಾವತಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ತರಬೇತಿ ಅಧಿಕಾರಿಗಳು ಹಾಗೂ ಸಹಾಯಕ ಶಿಶಿಕ್ಷು ಅಧಿಕಾರಿಗಳಾದ ಡಿ. ಮಾಲತೇಶ್ವರ್. ರಿಪ್ಪನ್ಪೇಟೆಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯ ಆರ್. ಮೂರ್ತಿ, ಗಾಜನೂರು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಭಾರ ತರಬೇತಿ ಅಧಿಕಾರಿಯಾದ ಕೆ.ಕೃಷ್ಣಮೂರ್ತಿ, ಎನ್ಎಸ್ಡಿಸಿ ಡಿಪಿಎಂಯು ರವರಾದ ಹೆಚ್. ಗೀತಾ, ಶಿವಮೊಗ್ಗ ಜಿಲ್ಲೆಯ 10 ಉದ್ದಿಮೆದಾರರು ಹಾಗೂ ತರಬೇತುದಾರರು ಉಪಸ್ಥಿತರಿದ್ದರು.

# ರಾಜ್ಯದ ಕಾಂಗ್ರೆಸ್ ಸರ್ಕಾರ ದಿವಾಳಿಯಾಗಿದೆ: ಪಿ. ರಾಜೀವ್



**ದಾವಣಗೆರೆ:** ರಾಜ್ಯ ಸರ್ಕಾರಿ ನೌಕರರಿಗೆ ಸಂಬಳ ನೀಡಲು ಸಾಲ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರವನ್ನು ಗಮನಿಸಿದರೆ, ಸರ್ಕಾರ ಸಂಪೂರ್ಣವಾಗಿ ದಿವಾಳಿ ಆಗಿದೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್ ಹೇಳಿದರು.

ಮಂಗಳವಾರ ದಾವಣಗೆರೆ ಬಿಜೆಪಿ ಕಾರ್ಯಾಲಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ಧರಾಮಯ್ಯ ಸರ್ಕಾರ ಆರ್ಥಿಕವಾಗಿ ಸಧೃಡವಾಗಿದೆ ಎಂದು ರಾಜ್ಯಪಾಲರಿಂದ ಹಗಲು ಸುಳ್ಳು ಹೇಳಿಸಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರ ಹಿಡಿಯಲಿಕ್ಕಾಗಿ ಐದು ಗ್ಯಾರಂಟಿ ಯೋಜನೆಗಳನ್ನು ಘೋಷಿಸಿ, ಎಸ್ ಸಿ.ಎಸ್.ಪಿ. ಮತ್ತು ಟಿ.ಎಸ್.ಪಿ.ಗೆ ಮೀಸಲಿಟ್ಟ ಹಣವನ್ನು

ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡು ಎಸ್ಸಿ ಎಸ್ಟಿ ಗಳಿಗೆ ದೊಡ್ಡ ಅನ್ಯಾಯ ಮಾಡಿದೆ. ಎಸ್ಸಿ ಎಸ್ಟಿ ಜನಸಂಖ್ಯೆಯ ಆಧಾರಿತ ಅಯಾ ರಾಜ್ಯಗಳು ಅನುದಾನ ಮೀಸಲಿಡಬೇಕೆಂದು ಕೇಂದ್ರ ಸರ್ಕಾರದ ನಿಯಮವಿದೆ. ಆದರೆ, ಕಾಂಗ್ರೆಸ್ ಸರ್ಕಾರ ಇದಾವುದನ್ನು ಪಾಲಿಸುತ್ತಿಲ್ಲ. ಎಸ್ಸಿಎಸ್ಸಿ ಹಾಗೂ ಟಿಎಸ್ಪಿ ವರ್ಗಕ್ಕೆ ಎಷ್ಟು ಹಣ ಕೊಟ್ಟಿದ್ದೀರಿ ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿ ಇದ್ದಾಗ ಸಾಕಷ್ಟು ಅನುದಾನ ಬರುತ್ತಿತ್ತು. ಆದರೆ, ಈಗ ಯಾವುದೇ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಬರುತ್ತಿಲ್ಲ. ಅಷ್ಟೇ ಅಲ್ಲ, ಯಾವುದೇ ನಿಗಮ ಮಂಡಳಿಗಳಿಗೂ, ಕುಡಿಯುವ ನೀರಿನ ಯೋಜನೆಗಳಿಗೂ ಹಣ ಹೊಂದಿಸದಷ್ಟು ಕೆಳಮಟ್ಟಕ್ಕೆ ಕಾಂಗ್ರೆಸ್ ಸರ್ಕಾರ ಅಧೋಗತಿಗೆ ಇಳಿದಿದೆ. ಎಲ್ಲಾ ವರ್ಗಕ್ಕೂ ನೀಡಬೇಕಾದ ಅನುದಾನ ಇರಲಿ, ಪರಿಶಿಷ್ಟ ಜಾತಿ, ಪಂಗಡದ ಉಪ ಯೋಜನೆಗಳಿಗೆ ನೀಡುತ್ತಿದ್ದ ಅನುದಾನ ಕೂಡ ನೀಡುತ್ತಿಲ್ಲ ಎಂದು ಕಿಡಿಕಾರಿದರು.

ಎಲ್ಲದಕ್ಕೂ ಕಡ್ಡಿ ಆಡಿಸುವ ಪ್ರಿಯಾಂಕ ಖರ್ಗೆ ಅವರೇ, ಈಗ ಯಾಕೆ ಸುಮ್ಮನ್ನಿದ್ದೀರಿ. ಮಾತನಾಡಿ, ನಿಮ್ಮ ಸರ್ಕಾರ ಯಾವ ಸ್ಥಿತಿಗೆ ಬಂದಿದೆ ಎಂದರೆ, ಭಿಕ್ಷುಕನ ತಟ್ಟೆಗೆ ಕೈ ಹಾಕಿದಂತೆ. ಇದರ ಪರಿಣಾಮವಾಗಿ ಪರಿಶಿಷ್ಟ ಜಾತಿ, ಪಂಗಡಗಳ ಜನರಿಗೆ ಯಾವುದೇ ಸೌಲಭ್ಯ ಸಿಗುತ್ತಿಲ್ಲ. ಗಂಗಾ ಕಲ್ಯಾಣ, ಭೂ ಒಡೆತನ, ಹೈನುಗಾರಿಕೆ, ವಸತಿ ಸೇರಿದಂತೆ ಯಾವುದೇ ಯೋಜನೆಗಳು ಜಾರಿ ಆಗಿಲ್ಲ. ಇದನ್ನು ಬಿಜೆಪಿ ಉಗ್ರವಾಗಿ ಖಂಡನೆ ಮಾಡುತ್ತದೆ ಎಂದು ಹೇಳಿದರು.

ಸುದ್ದಿಗೋಷ್ಟಿಯಲ್ಲಿ ರಾಜ್ಯ ?ಸ್ಟಿ ಮೋರ್ಚಾ ಅಧ್ಯಕ್ಷ ಬಂಗಾರು ಹನುಮಂತು, ಜಿಲ್ಲಾಧ್ಯಕ್ಷ ಎನ್. ರಾಜಶೇಖರ, ಮಾಜಿ ಸಚಿವ ಎಸ್.ಎ. ರವೀಂದ್ರನಾಥ, ಮಾಜಿ ಶಾಸಕರಾದ ಹೆಚ್.ಪಿ. ರಾಜೇಶ್, ಎಸ್.ವಿ. ರಾಮಚಂದ್ರ, ಮಾಜಿ ಮುಖ್ಯ ಸಚೇತಕ ಡಾ .ಎ.ಹೆಚ್. ಶಿವಯೋಗಿ ಸ್ವಾಮಿ. ಬಿ.ಎಂ. ಸತೀಶ್, ಲೋಕಿಕೆರೆ ನಾಗರಾಜ್, ಶ್ರೀನಿವಾಸ್ ದಾಸಕರಿಯಪ್ಪ, ಅನಿಲ್ ಕುಮಾರ್ ನಾಯ್ಕ, ರಮೇಶ್ ನಾಯ್ಕ, ಆರ್. ಎಲ್. ಶಿವಪ್ರಕಾಶ್, ಧನಂಜಯ ಕಡ್ಲೆಬಾಳು ಇನ್ನಿತರರು ಉಪಸ್ಥಿತರಿದ್ದರು.

# ಇಂದು ‘ಶರಣ ಸಿರಿ’ ಪ್ರಶಸ್ತಿ ಪ್ರದಾನ ಹಾಗೂ ಪದಗ್ರಹಣ ಸಮಾರಂಭ




ದಾವಣಗೆರೆ: ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಮೈಸೂರು, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ದಾವಣಗೆರೆ ವತಿಯಿಂದ ಫೆ.6 ಗುರುವಾರ ಬೆಳಿಗ್ಗೆ 11 ಗಂಟೆಗೆ ನಗರದ ಕುವೆಂಪು ಕನ್ನಡ ಭವನದಲ್ಲಿ

ವಿಶರಣ ಸಿರಿಹಿ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ದಾವಣಗೆರೆ ಜಿಲ್ಲಾ ಯುವ ವೇದಿಕೆ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಬಿ. ಪರಮೇಶ್ವರಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಸಾನಿಧ್ಯ ವಹಿಸಿ, ಪ್ರಶಸ್ತಿ ಪ್ರದಾನವನ್ನು ಸಾಣೇಹಳ್ಳಿ ತರಳಬಾಳು ಶಾಖಾ ಮಠದ ಪಟ್ಟಾಧ್ಯಕ್ಷ ಶ್ರೀ ಡಾ. ಪಂಡಿತಾರಾಧ್ಯ ಶಿವಾಚಾರ್ಯರು ನಡೆಸಿಕೊಡಲಿದ್ದಾರೆ. ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ್ ಉದ್ಘಾಟನೆ ನೆರವೇರಿಸಲಿದ್ದು, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ

ಅಧ್ಯಕ್ಷತೆಯನ್ನು ಡಾ. ಸಿ. ಸೋಮಶೇಖರ್ ಐಎಎಸ್ ಇವರು ವಹಿಸಲಿದ್ದಾರೆ. ಇದೇ ವೇಳೆ ಚನ್ನಗಿರಿ ತಾಲ್ಲೂಕು ಶರಣ ಸಾಹಿತ್ಯ ಪರಿಷತ್ತು ಗೌರವಾಧ್ಯಕ್ಷರಾದ ಹೆಚ್.ಎಸ್. ಮಲ್ಲಿಕಾರ್ಜುನಪ್ಪ ಅವರಿಗೆ ‘ಶರಣಸಿರಿ’ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಶರಣ ಸಂಸ್ಕೃತಿ ಚಿಂತಕ ಡಾ. ಬಸವರಾಜ ನೆಲ್ಲಿಸರ ಅವರು, ‘ಬಸವಣ್ಣನವರ ಬಹುಮುಖ ವ್ಯಕ್ತಿತ್ವ’ ವಿಷಯ ಕುರಿತು ಅನುಭಾವ ಹಂಚಿಕೊಳ್ಳಲಿದ್ದಾರೆ. ಜಿಲ್ಲಾಧ್ಯಕ್ಷ ಕೆ.ಬಿ. ಪರಮೇಶ್ವರಪ್ಪ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ. ದತ್ತಿ ದಾಸೋಹಿಗಳ ಪರಿಚಯವನ್ನು ಹೆಚ್. ಕೆ. ಲಿಂಗರಾಜು, ಸೇವಾ ದೀಕ್ಷೆ ಬೋಧನೆಯನ್ನು ರಾಜ್ಯ ಯುವ ವೇದಿಕೆ ಸಂಚಾಲಕ ಪ್ರಕಾಶ್ ಎಸ್. ಅಂಗಡಿ ನಡೆಸಿಕೊಡಲಿದ್ದು, ಯುವ ವೇದಿಕೆ ಅಧ್ಯಕ್ಷ ಡಾ. ಶಿವರಾಜ್ ಕಬ್ಬೂರು ಮತ್ತು ತಂಡದವರು ಸೇವಾದೀಕ್ಷೆ ಸ್ವೀಕರಿಸಲಿದ್ದಾರೆ. ರಾಜ್ಯ ಕದಳಿ ವೇದಿಕೆ ಉಪಸಂಚಾಲಕಿ ಪ್ರಮೀಳ ನಟರಾಜ್, ಜಿಲ್ಲಾ ಅಧ್ಯಕ್ಷೆ ಗಾಯತ್ರಿ ವಸ್ತ್ರದ್ ಉಪಸ್ಥಿತರಿರುವರು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ, ಉಪಾಧ್ಯಕ್ಷ ಎನ್.ಎಸ್. ರಾಜು, ಕಾರ್ಯದರ್ಶಿಗಳಾದ ಬಿ.ಟಿ. ಪ್ರಕಾಶ್, ಭರಮಪ್ಪ ಮೈಸೂರು, ಖಜಾಂಚಿ ಆರ್. ಸಿದ್ದೇಶಪ್ಪ, ಸದಸ್ಯರಾದ ಜಿ.ಎಂ. ಕುಮಾರಪ್ಪ ಉಪಸ್ಥಿತರಿದ್ದರು.

### ಶರಣ ಸಿರಿ ದತ್ತಿ ಪ್ರಶಸ್ತಿ

**ಚಿತ್ರದುರ್ಗ ಜಿಲ್ಲೆ ಭೀಮಸಮುದ್ರದ ಲಿಂ. ಶ್ರೀಮತಿ ಹಾಲಮ್ಮ ಮತ್ತು ಲಿಂ. ಶ್ರೀ ಜಿ ಮಲ್ಲಿಕಾರ್ಜುನಪ್ಪ ಇವರ ಸ್ಮರಣೆಗಾಗಿ ಶ್ರೀಮತಿ ಗಾಯತ್ರಿ ಸಿದ್ದೇಶ್ವರ ಮತ್ತು ಶ್ರೀ ಜಿ.ಎಂ. ಸಿದ್ದೇಶ್ವರ ಅವರು ಪರಿಷತ್ತಿನಲ್ಲಿ ದತ್ತಿಯನ್ನಿಟ್ಟಿದ್ದು, ಅದರ ನಿಶ್ಚಿತ ಠೇವಣಿಯ ಬಡ್ಡಿಯ ಹಣದಲ್ಲಿ ದಾವಣಗೆರೆ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಪ್ರಸ್ತುತ ವರ್ಷದಿಂದ ವಿಶರಣ ಸಿರಿಹಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತದೆ ಎಂದು ತಿಳಿಸಿದರು.**

# ಮಾರ್ಚ್ 15 ರಂದು ಹದಡಿ ರಸ್ತೆಯಲ್ಲಿನ ಸರ್ಕಾಟಿ ಐಟಿಐ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ

**ದಾವಣಗೆರೆ:** ಎಸ್.ಎಸ್.ಎಲ್.ಸಿ.ಯಿಂದ ಪದವಿ, ಸ್ನಾತಕೋತ್ತರ ಪದವಿ ಸೇರಿದಂತೆ ಐಟಿಐ, ಡಿಪ್ಲೊಮಾ, ಇಂಜಿನಿಯರಿಂಗ್ ವೃತ್ತಿಪರ ಕೋರ್ಸ್ಗಳನ್ನು ಪಡೆದವರಿಗೆ ವಿವಿಧ ಕಂಪನಿಗಳಿಗೆ ಅವಶ್ಯವಿರುವ 3 ಸಾವಿರ ಹುದ್ದೆಗಳ ಭರ್ತಿಗೆ ಮಾರ್ಚ್ 15 ರಂದು ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ ಏರ್ಪಡಿಸಿದ್ದು ಜಿಲ್ಲೆಯ ಯುವಕ, ಯುವತಿಯರು ಇದರ ಲಾಭ ಪಡೆಯಬೇಕೆಂದು ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಉದ್ಯೋಗ ಮೇಳದ ಪೋಸ್ಟರ್ನ್ನು ಮಂಗಳವಾರ ಗೃಹ ಕಚೇರಿಯಲ್ಲಿ ಬಿಡುಗಡೆ ಮಾಡಿ ಮಾತನಾಡಿದರು. ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಹದಡಿ ರಸ್ತೆಯಲ್ಲಿನ ಸರ್ಕಾರಿ ಐಟಿಐ ಕಾಲೇಜು ಆವರಣದಲ್ಲಿ ಏರ್ಪಡಿಸಲಾಗಿದೆ. ದಾವಣಗೆರೆ ನಗರ ಜವಳಿ ಕ್ಷೇತ್ರದಲ್ಲಿ ಪ್ರಸಿದ್ದಿಯನ್ನು ಪಡೆಯುವ ಮೂಲಕ ಮ್ಯಾಚೇಸ್ಟರ್ ಎಂದೇ ಹೆಸರು ಗಳಿಸಿತ್ತು. ಈಗ ಶಿಕ್ಷಣ ಕ್ಷೇತ್ರದಲ್ಲಿ ಹೆಸರು ಪಡೆದಿದೆ. ದಾವಣಗೆರೆ ಐಟಿಐನಿಂದ ಡಿಪ್ಲೊಮಾ, ಇಂಜಿನಿಯರಿಂಗ್, ಮೆಡಿಕಲ್ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಹೊಂದಿದೆ. ಜ ಇಂತಹ ಬೃಹತ್ ಉದ್ಯೋಗ ಮೇಳಗಳ ಮೂಲಕ ಜಿಲ್ಲೆಯ ಯುವಕ, ಯುವತಿಯರಿಗೆ ಅನುಕೂಲವಾಗಲಿದೆ ಎಂದರು.

## ಚಂದ್ರಗುತ್ತಿ ಶ್ರೀ ರೇಣುಕಮ್ಮ ದೇವಿ ಜಾತ್ರೆ: ಬೆತ್ತಲೆ ಸೇವೆ ನಿಷೇಧ, ಪೂಜಾ ವಿಧಿ–ವಿಧಾನಗಳಿಗೆ ಅನುಮತಿ

**ಶಿವಮೊಗ್ಗ :** ಶಿವಮೊಗ್ಗ ಜಿಲ್ಲೆ ಸೊರಬ ತಾಲೂಕು ಚಂದ್ರಗುತ್ತಿ ಗ್ರಾಮದ ಶ್ರೀ ರೇಣುಕಮ್ಮ ದೇವೆ ಜಾತ್ರೆಯು ಮಾರ್ಚ್ 05 ರಿಂದ 10 ರವರೆಗೆ ನಡೆಯಲಿದ್ದು, ವರದಾ ನದಿಯಲ್ಲಿ ಧಾರ್ಮಿಕ ಸ್ನಾನ ಮಾಡುವುದು, ದೇವರಿಗೆ ಮುಡಿಕೊಡುವುದು, ಪಡ್ಲಿಗಿ ತುಂಬಿಸುವುದು ಮತ್ತು ?ಬೆತ್ತಲೆ ಸೇವೆ” ಯನ್ನು ನಿಷೇಧಿಸಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆರವರು ಆದೇಶ ಹೊರಡಿಸಿದ್ದಾರೆ.

ಈ ನಿಷೇಧಾಜ್ಞೆಯು ಶ್ರೀರೇಣುಕಮ್ಮ ದೇವಿಯ ರಥೋತ್ಸವ ಹಾಗೂ ಇತರೆ ಪೂಜಾ ಕಾರ್ಯಗಳು ಮತ್ತು ಧಾರ್ಮಿಕ ವಿಧಿ–ವಿಧಾನಗಳನ್ನು ನಡೆಸುವುದಕ್ಕೆ ಅನ್ವಯಿಸುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

## ಹಕ್ಕಿಜ್ವರ : ಸಾರ್ವಜನಿಕರು ಆತಂಕಕ್ಕೆ ಒಳಾಗಬಾರದು – ಡಾ.ಎ.ಬಾಬುರತ್ನ

**ಶಿವಮೊಗ್ಗ:** ರಾಜ್ಯದ ಬಳ್ಳಾರಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಹಕ್ಕಿಜ್ವರ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ಶಿವಮೊಗ್ಗ ಜಿಲ್ಲೆಯಲ್ಲೂ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದ್ದು, ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಾಗಬಾರದು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಆಡಳಿತ ಉಪ ನಿರ್ದೇಶಕ ಡಾ.ಎ.ಬಾಬುರತ್ನ ತಿಳಿಸಿದರು.
ಸೋಮವಾರ ನಗರದ ಇಲಾಖೆಯ ಕಚೇರಿಯಲ್ಲಿ ಸಂಜೆ 5 ಗಂಟೆಗೆ ಪಶುಸಂಗೋಪನಾ ಹಾಗೂ ರೇಷ್ಮೆ ಸಚಿವರ ಅಧ್ಯಕ್ಷತೆಯಲ್ಲಿ ಏರ್ಪಡಿಸಿದ್ದ ವರ್ಚುವಲ್ ಸಭೆಯಲ್ಲಿ ಅವರ ಮಾತನಾಡಿದರು.ಜಿಲ್ಲೆಯಲ್ಲಿ ಒಟ್ಟು 332 ಕೋಳಿ ಫಾರಂಗಳಿದ್ದು, ಈ ಫಾರಂಗಳಲ್ಲಿ ಒಟ್ಟು 1741650 ಕೋಳಿಗಳ ಸಾಕಾಣಿಕ ಮಾಡಲಾಗಿದೆ. ಆದರೂ ಇದುವರೆಗೂ ಜಿಲ್ಲೆಯಲ್ಲಿ ಯಾವುದೇ ಹಕ್ಕಿಜ್ವರ ಪ್ರಕರಣ ವರದಿಯಾಗಿಲ್ಲ. ಈಗಾಗಲೇ ಹಕ್ಕಿಜ್ವರ ಸಂಬಂಧಿಸಿದಂತೆ ಕಣ್ಗಾವಲು ಕಾರ್ಯಕ್ರಮವನ್ನು ನಡೆಸುತ್ತಿದ್ದು, ಈ ವರ್ಷದಲ್ಲಿ 476 ಕೋಳಿಗಳ ಮಾದರಿಗಳನ್ನು ತಪಾಸಣೆಗೆ ಒಳಪಡಿಸಲಾಗಿದೆ.ಜಿಲ್ಲೆಯಾದ್ಯಂತ 29 ರ್ಯಾಪಿಡ್ ರೆಸ್ಪಾನ್ಸ ಟೀಮ್ಗಳನ್ನು ಮಾಡಿದ್ದು, ಎಲ್ಲಾ ಕೋಳಿ ಫಾರಂಗಳ ಮೇಲೆ ನಿಗಾ ವಹಿಸಲು ಸೂಚಿಸಲಾಗಿದೆ

## ಭದ್ರಾವತಿ :ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಭದ್ರಾವತಿ ಮೆಸ್ಕಾಂ ಗ್ರಾಮೀಣ ಉಪವಿಭಾಗ ಕಛೇರಿಯಲ್ಲಿ ಮಾ.07 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗ ಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.ಸಂಪರ್ಕಿಸಬಹುದಾದ ದೂರವಾಣಿಸಂಖ್ಯೆ;9448289507.

## ಕಲಾಕುಂಚದಿಂದ ಕವನ ಸಂಕಲನಕ್ಕೆ ಕವನಗಳಿಗೆ ಆಹ್ವಾನ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯಿಂದ ಕಾವ್ಯ ಕುಂಚ ಕವನ ಸಂಕಲನ ಈಗಾಗಲೇ ಒಂದರಿಂದ ಐದು ಭಾಗದ ಕವನ ಸಂಕಲನ ಲೋಕಾರ್ಪಣೆಯಾಗಿದ್ದು 6ನೇ ಕವನ ಸಂಕಲನಕ್ಕೆ ಪೂರ್ಣ ಪ್ರಮಾಣದ ಸಿದ್ಧತೆ ಮಾಡುತ್ತಿದ್ದೇವೆ ಎಂದು ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ಶೆಣೈ ತಿಳಿಸಿದ್ದಾರೆ. ಕವನ ರಚಿಸಿ ಕಳಿಸುವ ಆಸಕ್ತರು 15 ರಿಂದ 20 ಸಾಲುಗಳ ಒಂದು ಕವನ ರಚಿಸಿ ತಮ್ಮ ಆಕರ್ಷಕವಾದ ಒಂದೊಳ್ಳೆಯ ಭಾವಚಿತ್ರ ಮನೆಯ ಪೂರ್ಣ ಪ್ರಮಾಣದ ವಿಳಾಸ ವ್ಯಾಟ್ಸಪ್ ನಂಬರನ್ನು ಈ ಕೆಳಗಿನ ವ್ಯಾಟ್ಸಪ್ ನಂಬರ್ಗೆ ಕಳಿಸಬಹುದು. ವಿಷಯ ಆಯ್ಕೆ ಅವರವರದು. 6ನೇ ಕವನ ಸಂಕಲನ ಲೋಕಾರ್ಪಣೆ ದಿನಾಂಕ ನಿಗದಿಯಾದ ಮೇಲೆ ತಮ್ಮ ತಮ್ಮ ವಿಳಾಸಕ್ಕೆ ಆಹ್ವಾನ ಪತ್ರಿಕೆ ಕಳಿಸುತ್ತೇವೆ. ಅಂದು ರಾಜ್ಯ ಮಟ್ಟದ ಕವಿಗೋಷ್ಠಿಗೆ ಅವಕಾಶ ಕೊಡುತ್ತೇವೆ ಎಂದು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ಪ್ರಕಟಿಸಿದ್ದಾರೆ. ಕವನ ಕಳಿಸುವ ಮತ್ತು ಹೆಚ್ಚಿನ ಮಾಹಿತಿಗೆ 9538732777 ಈ ವ್ಯಾಟ್ಸಪ್ ಸಂಖ್ಯೆಗೆ ಸಂಪರ್ಕಿಸಬಹುದು.

## ನಗದು ಬದಲು ಮಾರ್ಚ್ ಮಾಹೆಯಿಂದ ಅಕ್ಕಿ ವಿತರಣೆ

**ಚಿಕ್ಕಮಗಳೂರು:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ಎಎವೈ ಮತ್ತು ಪಿಹೆಚ್ಹೆಚ್ ಫಲಾನುಭವಿಗಳಿಗೆ ಪ್ರಸ್ತುತ ನೇರ ನಗದು ವರ್ಗಾವಣೆ (ಡಿ.ಬಿ.ಟಿ) ಮುಖಾಂತರ ಹಣವನ್ನು ವರ್ಗಾಯಿಸುವ ಪ್ರಕ್ರಿಯೆಯ ಬದಲಾಗಿ ಫೆಬ್ರವರಿ 2025ರ ಮಾಹೆಯಿಂದ ಜಾರಿಗೆ ಬರುವಂತೆ 5 ಕೆ.ಜಿ. ಅಕ್ಕಿಯನ್ನು ಸಾರ್ವಜನಿಕ ವಿತರಣಾ ಪದ್ಧತಿಯಡಿ ಮಾರ್ಚ್ 2025ರ ಮಾಹೆಯ ಪಡಿತರ ವಿತರಣೆಯೊಂದಿಗೆ ಸೇರಿಸಿ ವಿತರಿಸಲು ಸರ್ಕಾರದಿಂದ ಆದೇಶಿಸಲಾಗಿದೆ. ಅಂತ್ಯೋದಯ (ಎಎವೈ) ಕಾರ್ಡಿಗೆ ಕೇಂದ್ರದಿಂದ 3 ಸದಸ್ಯರ ವರೆಗಿನ ಪಡಿತರ ಚೀಟಿಗೆ 35 ಕೆ.ಜಿ ಅಕ್ಕಿ, ರಾಜ್ಯದಿಂದ 4 ಸದಸ್ಯರ ಮೇಲ್ಪಟ್ಟ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 10 ಕೆ.ಜಿ. ಅಕ್ಕಿ, ಆದ್ಯತಾ (ಪಿಹೆಚ್ಹೆಚ್) ಕಾರ್ಡಿಗೆ ಕೇಂದ್ರದಿಂದ ಪ್ರತಿ ಸದಸ್ಯರಿಗೆ 5 ಕೆ.ಜಿ ಅಕ್ಕಿ, ರಾಜ್ಯದಿಂದ ಪ್ರತಿ ಸದಸ್ಯರಿಗೆ 10 ಕೆ.ಜಿ. ಅಕ್ಕಿ ವಿತರಿಸಲಾಗುತದೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಪ್ರೊ.ಜಿ.ಪರಮೇಶ್ವರಪ್ಪ ಆಯ್ಕೆ

ಹೊಳಲ್ಕೆರೆಯಲ್ಲಿ ಜರುಗಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಪ್ರೊ.ಜಿ.ಪರಮೇಶ್ವರಪ್ಪನವರನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಆಯ್ಕೆ ಮಾಡಿದೆ. ಜಿಲ್ಲೆಯಲ್ಲಿ ಹಿರಿಯ ಸಾಹಿತಿಯಾಗಿರುವ ಪ್ರೊ.ಪರಮೇಶ್ವರಪ್ಪನವರು ಹಲವಾರು ಕೃತಿಗಳನ್ನು ರಚಿಸಿದ್ದು, ಬುಡಕಟ್ಟು ಸಮುದಾಯಗಳ ಬಗ್ಗೆ ವಿಶೇಷ ಒಲವು ಹೊಂದಿದ್ದಾರೆ.



ಮಾ. 9, ಭಾನುವಾರ ಮತ್ತು 10 ರ ಸೋಮವಾರ ಹೊಳಲ್ಕೆರೆಯಲ್ಲಿ 17 ನೇ ಕನ್ನಡ ಸಾಹಿತ್ಯ ಸಮ್ಮೇಳನ ಜರುಗಲಿದೆ. ಈಗಾಗಲೇ ಸಮ್ಮೇಳನದ ಲಾಂಛನವನ್ನು ಉಸ್ತುವಾರಿ ಸಚಿವ ಡಿ.ಸುಧಾಕರ್, ಪ್ರಚಾರ ಪೋಸ್ಟರ್‌ಗಳನ್ನು ಸ್ವಾಗತ ಸಮಿತಿ ಅಧ್ಯಕ್ಷ ಶಾಸಕರ ಎಂ.ಚಂದ್ರಪ್ಪ ಬಿಡುಗಡೆಗೊಳಿಸಿದ್ದಾರೆ.

**ಪ್ರೊ.ಪರಮೇಶ್ವರಪ್ಪ ಪರಿಚಯ :** ಹಿರಿಯೂರು ತಾಲ್ಲೂಕು ಹರ್ತಿಕೋಟೆ ಸಮೀಪದ ಕಪಿಲೆ ಹಟ್ಟಿಯಲ್ಲಿ ಇವರು 15.10.1950 ಜನಿಸಿದರು. ಮೈಸೂರು ವಿವಿಯಲ್ಲಿ ಕನ್ನಡ ವಿಷಯದಲ್ಲಿ ಎಂ.ಎ. ಪದವಿ ಪಡೆದಿದ್ದಾರೆ. ಬೀದರ್, ಮಾಯಕೊಂಡ, ಬೆಳಗಾವಿ ಜಿಲ್ಲೆಯ ಅಥಣಿ, ಚಳ್ಳಕೆರೆ ಮತ್ತು ಚಿತ್ರದುರ್ಗದ ಕಲಾ ಕಾಲೇಜಿನಲ್ಲಿ ಪ್ರಾಚಾರ್ಯರಾಗಿ ನಿವೃತ್ತರಾಗಿದ್ದಾರೆ. 1980 ರಿಂದ 30 ವರ್ಷ ಕಾಲೇಜು ಉಪನ್ಯಾಸಕರಾಗಿ ಸೇವೆ ಸಲ್ಲಿಸಿ 2010 ರಲ್ಲಿ ನಿವೃತ್ತರಾಗಿದ್ದಾರೆ. ಉಪನ್ಯಾಸಕ ವೃತ್ತಿಯಲ್ಲಿ ಕ್ರಿಯಾಶೀಲರಾಗಿ ಸಲ್ಲಿಸಿದ್ದಾರೆ.

ಕಲಾಸಿರಿ,ಸಾಹಿತ್ಯ ಸಂಶೋಧನೆ, ಮನಸ್ವಿ, ಬುಡಕಟ್ಟು ಕಥನಗಳು, ವದ್ದೀಕೆರೆ ಸಿದ್ದೇಶ್ವರ ಚರಿತೆ, ವೀರಕರಿಯಣ್ಣ ಪ್ರಮುಖ ಕೃತಿಗಳಾಗಿವೆ. ಚದುರಿದ ಚಿಂತನೆಗಳು ಮತ್ತು ವರ್ತಮಾನದ ಜನರ ಆಲೋಚನೆಗಳ ಎಂಬ ಎರಡು ಕೃತಿಗಳು ಪ್ರಕಟಣೆಯ ಹಂತದಲ್ಲಿವೆ. ಬುಡಕಟ್ಟುಗಳ ಕಥೆಗಳನ್ನು ಭಾಮಿನಿ ಷಟ್ಪದಿಯಲ್ಲಿ ಕವನ ರೂಪದಲ್ಲಿ ರಚಿಸಿರುವುದು ಇವರ ವಿಶೇಷವಾಗಿದೆ. ನಾನಾ ಕನ್ನಡ ಸಂಘಟನೆಗಳು ಇವರ ಸಾಹಿತ್ಯ ಸೇವೆಯನ್ನು ಗುರುತಿಸಿ, ಗೌರವಿಸಿವೆ. ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಗೆ ಇವರು ಭಾಜನರಾಗಿದ್ದಾರೆ. ಈ ಬಗ್ಗೆ ಕನ್ನಡ ಕಸಾಪ ಜಿಲ್ಲಾಧ್ಯಕ್ಷ ಕೆ.ಎಂ.ಶಿವಸ್ವಾಮಿ ಮತ್ತು ಹೊಳಲ್ಕೆರೆ ತಾಲ್ಲೂಕು ಕಸಾಪ ಅಧ್ಯಕ್ಷ ಎಂ.ಶಿವಮೂರ್ತಿ ಪತ್ರಿಕಾ ಪ್ರಕಟಣೆ ನೀಡಿದ್ದಾರೆ.

# ಆನವಟ್ಟಿ: ಎ ಮತ್ತು ಬಿ ಖಾತಾ ಪಡೆಯಲು ಅವಕಾಶ

**ಶಿವಮೊಗ್ಗ :** ಆನವಟ್ಟಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ದಿ:10/09/2024ರ ಅಂತ್ಯದವರೆಗೆ ಅನಧಿಕೃತ ಬಡಾವಣೆಗಳಲ್ಲಿ ನಿರ್ಮಿಸಿಕೊಂಡಿರುವ ನಿವೇಶನ/ಕಟ್ಟಡಗಳಿಗೆ ಬಿ-ಖಾತೆ ನೀಡಲು ಅವಕಾಶ ಕಲ್ಪಿಸಿಕೊಡಲಾಗಿದ್ದು, ಆಸ್ತಿ ಮಾಲೀಕರು ಪಟ್ಟಣ ಪಂಚಾಯಿತಿ ಕಚೇರಿಯನ್ನು ಸಂಪರ್ಕಿಸುವಂತೆ ಆನವಟ್ಟಿ ಪಟ್ಟಣ ಪಂಚಾಯಿತಿ ಪ್ರಕಟಣೆಯಲ್ಲಿ ತಿಳಿಸಿದೆ.

ಎ-ಖಾತೆ ಪಡೆಯಲು ಆಸ್ತಿಗೆ ಸಂಬಂಧಿಸಿದ ಸ್ವತ್ತಿನ ಮಾಲೀಕತ್ವ ಸಾಬೀತು ಮಾಡಿಸುವ ನೊಂದಾಯಿತ ಮಾರಾಟ ಪತ್ರಗಳು/ದಾನ ಪತ್ರ/ವಿಭಾಗ ಪತ್ರಗಳು ಅಥವಾ ಸರ್ಕಾರದ ನಿಗಮ ಮಂಡಳಿಗಳಿಂದ ನೀಡಲಾದ ಹಕ್ಕುಪತ್ರಗಳು/ ಮಂಜೂರಾತಿ ಪತ್ರಗಳು, ಕಂದಾಯ ಇಲಾಖೆಯಿಂದ 94 ಸಿ.ಸಿ. ಅಡಿ ನೀಡಲಾದ ಹಕ್ಕುಪತ್ರ. ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯಾದ ದೃಢೀಕೃತ ಪ್ರತಿ ಮತ್ತು ನಿವೇಶನ ಬಿಡುಗಡೆ ಪತ್ರ. ಪ್ರಸಕ್ತ ಸಾಲಿನವರೆಗೆ ಋಣಭಾರ ಪ್ರಮಾಣ ಪತ್ರ. ಚಾಲ್ತಿ ಸಾಲಿನ ಆಸ್ತಿ ತೆರಿಗೆ ಪಾವತಿ ರಶೀದಿ. ಮಾಲೀಕರ ಫೋಟೋ ಮತ್ತು ಸ್ವತ್ತಿನ ಫೋಟೋ. ಮಾಲೀಕರ ಗುರುತಿನ ದಾಖಲೆ ಪ್ರತಿ ಮತ್ತು ಕಟ್ಟಡವಿದ್ದಲ್ಲಿ ವಿದ್ಯುಚ್ಛಕ್ತಿ ಬಿಲ್ ಪ್ರತಿಗಳನ್ನು ಸಲ್ಲಿಸುವುದು.

ಬಿ-ಖಾತೆ ಪಡೆಯಲು ಆಸ್ತಿಗೆ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತು ಪಡಿಸುವ ದಿ: 10/09/2024ರ ಪೂರ್ವದಲ್ಲಿ ನೊಂದಾಯಿತ ಮಾರಾಟ ಪತ್ರಗಳು/ದಾನ ಪತ್ರ/ವಿಭಾಗ ಪತ್ರಗಳು/ಹಕ್ಕು ಖುಲಾಸೆ ಪತ್ರಗಳು. ಪ್ರಸಕ್ತ ಸಾಲಿನವರೆಗೆ ಋಣಭಾರ ಪ್ರಮಾಣ ಪತ್ರ. ಚಾಲ್ತಿ ಸಾಲಿನ ಆಸ್ತಿ ತೆರಿಗೆ ಪಾವತಿ ರಶೀದಿ. ಮಾಲೀಕರ ಫೋಟೋ ಮತ್ತು ಸ್ವತ್ತಿನ ಫೋಟೋ. ಮಾಲೀಕರ ಗುರುತಿನ ದಾಖಲೆ ಪ್ರತಿಗಳನ್ನು ಸಲ್ಲಿಸುವುದು.

ಈ ಪ್ರಕಟಣೆ ದಿನಾಂಕದಿಂದ ಮೂರು ತಿಂಗಳೊಳಗೆ ದಾಖಲೆಗಳನ್ನು ಸಲ್ಲಿಸಿ ಬಿ-ಖಾತೆಯನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆನವಟ್ಟಿ ಪಟ್ಟಣ ಪಂಚಾಯಿತಿ ಕಚೇರಿಯ ಸಹಾಯವಾಣಿ ಸಂ.: 08184-200899ನ್ನು ಅಥವಾ ಕಚೇರಿಯನ್ನು ಖುದ್ದಾಗಿ ಸಂಪರ್ಕಿಸುವುದು.

# ಫೆ.28 ರಂದು ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮ

**ಬಳ್ಳಾರಿ :** ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮವನ್ನು ಫೆ.28 ರಂದು ಬೆಳಿಗ್ಗೆ 10.30 ಕ್ಕೆ ಬಳ್ಳಾರಿ ತಾಲ್ಲೂಕಿನ ಮೋಕಾ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಹಮ್ಮದ್ ಹಾರಿಸ್ ಸುಮೇರ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮೋಕಾ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯ (ಪ್ರೌಢ ವಿಭಾಗ) ಉಪ ಪ್ರಾಂಶುಪಾಲರಾದ ಬಿ.ಭಾರತಿ ಅವರು ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ ಎಸ್.ಎಂ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ, ಕ್ಷೇತ್ರ ಶಿಕ್ಷಣಾಧಿಕಾರಿ ನಯೀಮುರ್ ರೆಹಮಾನ್ ಕೆ.ಎಸ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿಯ ಗಣಿತ ವಿಷಯ ನಿರ್ವಾಹಕರಾದ ಬಸವರಾಜ.ಎಂ ಹಾಗೂ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಸಂಪನ್ಮೂಲ ವ್ಯಕ್ತಿಗಳಾಗಿ ಸಿಂಧವಾಳ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ವಿಜ್ಞಾನ ಶಿಕ್ಷಕ ಹೆಚ್.ಪೀರ್ ಭಾಷಾ, ಮೋಕಾ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯ (ಪ್ರೌಢ ವಿಭಾಗ) ಶಿಕ್ಷಕ ಎಸ್.ಎಂ ಹಿರೇಮಠ ಮತ್ತು ಜಿಲ್ಲಾ ಪಂಚಾಯತ್‌ನ ಜಿಲ್ಲಾ ಯೋಜನಾ ಸಂಯೋಜಕ ರಾಮ ಚಂದ್ರರೆಡ್ಡಿ ಜಿ.ಬಿ ಸೇರಿದಂತೆ ಶಾಲಾ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಬಳ್ಳಾರಿ: ಮಾ.08 ರಂದು ಬುಡಕಟ್ಟು ಉತ್ಸವ ಆಚರಣೆ

## ಅಚ್ಚುಕಟ್ಟಾಗಿ ಆಯೋಜಿಸಲು ಸಿದ್ಧತೆ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಸೂಚನೆ

**ಬಳ್ಳಾರಿ :** ಜಿಲ್ಲೆಯಲ್ಲಿ ಮಾ.08 ರಂದು ನಡೆಯುವ ಬುಡಕಟ್ಟು ಉತ್ಸವ ಕಾರ್ಯಕ್ರಮವನ್ನು ಅರ್ಥಪೂರ್ಣ ಹಾಗೂ ಅಚ್ಚುಕಟ್ಟಾಗಿ ಆಯೋಜಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಬುಡಕಟ್ಟು ಉತ್ಸವ ಕಾರ್ಯಕ್ರಮ ಆಯೋಜನೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬುಡಕಟ್ಟು ಉತ್ಸವ ಕಾರ್ಯಕ್ರಮವನ್ನು ಮಾ.08 ರಂದು ಬೆಳಿಗ್ಗೆ 9ಕ್ಕೆ ನಗರದ ಮುನ್ಸಿಪಾಲ್ ಕಾಲೇಜು ಮೈದಾನದಲ್ಲಿ ಆಚರಿಸಲಾಗುವುದು. ಶಿಷ್ಠಾಚಾರದ ನಿಯಮಗಳಂತೆ ಬುಡಕಟ್ಟು ಉತ್ಸವ ಸಮಾರಂಭದ ಆಹ್ವಾನ ಪತ್ರಿಕೆ ಮುದ್ರಿಸಿ, ಆಹ್ವಾನ ಪತ್ರಿಕೆಗಳನ್ನು ಜನಪ್ರತಿನಿಧಿಗಳಿಗೆ, ಗಣ್ಯರಿಗೆ ವಿತರಿಸಲು ಕ್ರಮವಹಿಸಬೇಕು ಎಂದರು.



ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ವಿವಿಧ ಇಲಾಖೆಗಳು ಸಮನ್ವಯತೆಯಿಂದ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿ ಬುಡಕಟ್ಟು ಉತ್ಸವ ಆಚರಿಸಬೇಕು. ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಹಿಸಿದ ಜವಾಬ್ದಾರಿಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸೂಚನೆ ನೀಡಿದರು.

ಬುಡಕಟ್ಟು ಉತ್ಸವ ಆಚರಣೆಗೆ ಸಂಬಂಧಿಸಿದಂತೆ ಸ್ವಾಗತ, ಶಿಷ್ಠಾಚಾರ, ಆಹ್ವಾನ ಪತ್ರಿಕೆ ಹಾಗೂ ವೇದಿಕೆ ಸಮಿತಿ, ಸಾಂಸ್ಕೃತಿಕ ಕಾರ್ಯಕ್ರಮಗಳ ಸಮಿತಿ ಸೇರಿದಂತೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿಯಲ್ಲಿರುವ ಅಧಿಕಾರಿಗಳು ತಮಗೆ ವಹಿಸಿದ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ತಿಳಿಸಿದರು.

ಬುಡಕಟ್ಟು ಉತ್ಸವ ಕಾರ್ಯಕ್ರಮ ನಡೆಯುವ ಮುನ್ಸಿಪಾಲ್ ಕಾಲೇಜು ಮೈದಾನ ಆವರಣವನ್ನು ಸ್ವಚ್ಛಗೊಳಿಸಿ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಆಹಾರ ಹಾಗೂ ಗಣ್ಯರು ಕುಳಿತುಕೊಳ್ಳುವುದಕ್ಕೆ ಆಸನ ವ್ಯವಸ್ಥೆ ಮಾಡಬೇಕು ಎಂದು ಮಹಾನಗರ ಪಾಲಿಕೆ ಆಯುಕ್ತರಿಗೆ ನಿರ್ದೇಶನ ನೀಡಿದರು.

ಬುಡಕಟ್ಟು ಉತ್ಸವವನ್ನು ವ್ಯವಸ್ಥಿತವಾಗಿ ಏರ್ಪಡಿಸಲು ಕ್ರಮ ಕೈಗೊಳ್ಳುವಂತೆ ಪೊಲೀಸ್ ಇಲಾಖೆಗೆ ಸೂಚಿಸಿದ ಅವರು, ಇದಕ್ಕೆ ಬೇಕಾದ ಅಗತ್ಯ ಪೂರ್ವ ತಯಾರಿ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳಿಂದ ಜನಾಕರ್ಷಣೀಯವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳು ಸ್ಥಳೀಯ ಹಾಗೂ ಇತರೆ ಜಿಲ್ಲೆಗಳ ಕಲಾವಿದರಿಂದ ವಿವಿಧ ಕಲಾ ಪ್ರಕಾರಗಳು, ಚಿತ್ರಕಲಾ/ಶಿಲ್ಪಕಲಾ ಪ್ರದರ್ಶನ, ಕರಕುಶಲ ಪ್ರದರ್ಶನ ಮತ್ತು ಮಾರಾಟ ಹಾಗೂ ಬುಡಕಟ್ಟು ಸಮುದಾಯದ ವೇಷಭೂಷಣ, ಆಭರಣಗಳ ಪ್ರದರ್ಶನ, ಆಹಾರ ಮೇಳ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವ್ಯವಸ್ಥೆಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಶಾಲಾ ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಅಂದು ಸಂಜೆ ನಗರದ ಮುನ್ಸಿಪಾಲ್ ಕಾಲೇಜು ಮೈದಾನದಲ್ಲಿ ಪ್ರಸ್ತುತಪಡಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ದಿವಾಕರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಬಿ.ಉಮಾದೇವಿ, ಮಹಾನಗರ ಪಾಲಿಕೆಯ ಆಯುಕ್ತರು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಕಾರ್ಯಾಗಾರದಲ್ಲಿ ನ್ಯಾಯಾಧೀಶೆ ಕೆ.ಜಿ.ಶಾಂತಿ ಅಭಿಮತ

# ವಿಶೇಷಚೇತನರಿಗೆ ಕಾನೂನು ಸೇವೆ ಒದಗಿಸಬೇಕು

**ಬಳ್ಳಾರಿ :** ಸಂವಿಧಾನದಲ್ಲಿ ಎಲ್ಲರೂ ಸಮಾನರು. ವಿಶೇಷವಾಗಿ ಮಕ್ಕಳು ಮತ್ತು ಮಾನಸಿಕ ಅಸ್ವಸ್ಥತೆ, ಬೌದ್ಧಿಕ ಅಂಗವಿಕಲತೆ ಹೊಂದಿರುವ ವ್ಯಕ್ತಿಗಳಿಗೆ ಕಾನೂನು ಸೇವೆ ನೀಡಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಹೇಳಿದರು.

ಗುರುವಾರ, ನಗರದ ತಾಳೂರು ರಸ್ತೆಯ ಹೊಸ ನ್ಯಾಯಾಲಯ ಸಂಕೀರ್ಣದ 3 ನೇ ಮಹಡಿಯ ಸಭಾಂಗಣದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ಕರ್ನಾಟಕ ರಾಜ್ಯ ಸೇವೆಗಳ ಪ್ರಾಧಿಕಾರ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರ ಸಂಯುಕ್ತಾಶ್ರಯದಲ್ಲಿ "ಮಕ್ಕಳಿಗಾಗಿ ಮಕ್ಕಳ ಸ್ನೇಹಿ ಕಾನೂನು ಸೇವೆಗಳ ಯೋಜನೆ 2024 ಮತ್ತು ಮಾನಸಿಕ ಅಸ್ವಸ್ಥಕ ಹೊಂದಿರುವ ವ್ಯಕ್ತಿ ಮತ್ತು ಬೌದ್ಧಿಕ ಅಂಗವಿಕಲತೆ ಹೊಂದಿರುವ ವ್ಯಕ್ತಿಗೆ ಕಾನೂನು ಸೇವೆಗಳ ಯೋಜನೆ 2024" ಕುರಿತು ಆಯೋಜಿಸಿದ್ದ ಒಂದು ದಿನ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.



ಅಂಗವಿಕಲ ಮತ್ತು ಮಾನಸಿಕ ಅಸ್ವಸ್ಥ ಮಕ್ಕಳು ಸಮಾಜದಲ್ಲಿ ಘನತೆ, ಗೌರವದಿಂದ ಬದುಕುವ ಹಕ್ಕಿದೆ. ಇಂತಹ ಮಕ್ಕಳಿಗಾಗಿ ಸೌಕರ್ಯಗಳನ್ನು ಪಡೆಯಲು ವಿಶೇಷವಾದ ಕಾನೂನುಗಳಿವೆ ಎಂದು ತಿಳಿಸಿದರು.

ಬಾಲ್ಯ ವಿವಾಹವಾದವರು, ಶಿಕ್ಷಣದಿಂದ ವಂಚಿತರಾದ ಮಕ್ಕಳು, ಅಂಗವಿಕಲ ಮಕ್ಕಳ ಸಮಸ್ಯೆಗಳನ್ನು ಪರಿಹರಿಸುವ ಕಾರ್ಯವಾಗಬೇಕು. ಇದಕ್ಕೆ ಸ್ಪಂದಿಸುವುದು ಪ್ರತಿಯೊಬ್ಬ ಪ್ರಜೆಯ ಕರ್ತವ್ಯ. ಇಂತಹ ಮಕ್ಕಳನ್ನು ಸರಿಯಾದ ರೀತಿಯಲ್ಲಿ ನೋಡಿಕೊಂಡು ಆತ್ಮವಿಶ್ವಾಸ ತುಂಬುವುದು ಪೋಷಕರ ಆದ್ಯ ಜವಬ್ದಾರಿಯಾಗಿದೆ ಎಂದರು.

ರಾಜ್ಯದಲ್ಲಿ ಅಂಗವಿಕಲತೆ ಹೊಂದಿರುವ ಶೇ.14.9 ಪುರುಷರು, ಶೇ.11.9 ಮಹಿಳೆಯರು ಹಾಗೂ ಮಾನಸಿಕ ಅಸ್ವಸ್ಥತೆ ಹೊಂದಿದ ಶೇ.2.41 ಪುರುಷರು, ಶೇ.2.01 ಮಹಿಳೆಯರು ಹಾಗೂ ಶೇ.0.89 ಮಕ್ಕಳು ಇದ್ದಾರೆ ಎಂದು ಮಾಹಿತಿ ನೀಡಿದರು.

ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಮಾತನಾಡಿ, ನಮ್ಮ ಸಂವಿಧಾನದಲ್ಲಿ ಮಕ್ಕಳಿಗಾಗಿ ಮತ್ತು ಮಾನಸಿಕ ಅಸ್ವಸ್ಥತೆ, ಬೌದ್ಧಿಕ ಅಂಗವಿಕಲತೆ ಹೊಂದಿರುವ ವ್ಯಕ್ತಿಗಳಿಗೆ ವಿಶೇಷವಾದ ಕಾಯ್ದೆಗಳು ಇವೆ. ಸರಿಯಾದ ರೀತಿಯಲ್ಲಿ ಕಾನೂನು ಸೇವೆಗಳನ್ನು ಉಪಯೋಗಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹಡಗಲಿ ರಾಮು, ರೀಡ್ಸ್ ಸಂಸ್ಥೆಯ ನಿರ್ದೇಶಕರಾದ ತಿಪ್ಪೇಶ್ ಸೇರಿದಂತೆ ನ್ಯಾಯಾಲಯದ ಸಿಬ್ಬಂದಿಗಳು, ವಕೀಲರು ಹಾಗೂ ಇತರರು ಉಪಸ್ಥಿತರಿದ್ದರು.

# ಅಂತರಾಷ್ಟ್ರೀಯ ಮಹಿಳಾ ದಿಚಾರಣೆ ಪ್ರಯುಕ್ತ ಕ್ರೀಡಾಕೂಟ

**ಶಿವಮೊಗ್ಗ :** 2024-25 ನೇ ಸಾಲಿನ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಮಹಿಳೆಯರಿಗಾಗಿ ಮಾ.05 ರಂದು ನೆಹರು ಕ್ರೀಡಾಂಗಣದಲ್ಲಿ ವಿವಿಧ ಕ್ರೀಡಾಕೂಟಗಳು ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.


ಥ್ರೋಬಾಲ್, ವಾಲಿಬಾಲ್, ಹಗ್ಗ ಜಗ್ಗಾಟ ಗುಂಪು ವಿಭಾಗ, ಓಟ 400 ಮೀ(40 ವರ್ಷ ಒಳಗಿನವರು), ಓಟ ಸ್ಪರ್ಧೆ (40 ವರ್ಷ ಮೇಲ್ಪಟ್ಟು), ಶಾಟ್‌ಪುಟ್, ನಿಧಾನಗತಿ ಬೈಕ್‌ರೇಸ್, ಮ್ಯೂಸಿಕಲ್ ಚೇರ್, ಕೇರಂ ಡಬಲ್ಸ್ ವೈಯಕ್ತಿಕ ವಿಭಾಗ. ಸಾಂಸ್ಕೃತಿ ಸ್ಪರ್ಧೆಗಳಾದ ಜಾನಪದ ಗೀತೆ ಗುಂಪು ವಿಭಾಗ, ಜಾನಪದ ಗೀತೆ ಮತ್ತು ರಸಪ್ರಶ್ನೆ ವೈಯಕ್ತಿಕ ವಿಭಾಗದಲ್ಲಿ ಸ್ಪರ್ಧೆಗಳು ನಡೆಯಲಿವೆ.

ಭಾಗವಹಿಸುವವರು ದಿ: 05-03-2025 ರ ಬೆಳಿಗ್ಗೆ 9.30 ಗಂಟೆಯೊಳಗೆ ನೆಹರೂ ಕ್ರೀಡಾಂಗಣ ಇಲ್ಲಿ ಹೆಸರು ನೋಂದಾಯಿಸಬೇಕು. ಒಬ್ಬರು ಎರಡು ಗುಂಪು ಹಾಗೂ ಮೂರು ವೈಯಕ್ತಿಕ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿರುತ್ತದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರೇಖ್ಯಾನಾಯ್ಕ ತಿಳಿಸಿದ್ದಾರೆ.

# ಎಡೆಯೂರು ಜಾತ್ರೆ : ಕಾಲ್ತುಳಿತವಾಗದಂತೆ ಮುನ್ನೆಚ್ಚರಿಕೆ ವಹಿಸಲು ಡಿಸಿ ಸೂಚನೆ

**ತುಮಕೂರು :** ಜಿಲ್ಲೆಯ ಕುಣಿಗಲ್ ತಾಲೂಕು ಎಡೆಯೂರು ಶ್ರೀ ಸಿದ್ದಲಿಂಗೇಶ್ವರಸ್ವಾಮಿ ಕ್ಷೇತ್ರದಲ್ಲಿ ಏಪ್ರಿಲ್ 5ರಂದು ಜರುಗುವ ಮಹಾರಥೋತ್ಸವಕ್ಕೆ ಸಹಸ್ರಾರು ಭಕ್ತಾದಿಗಳು ಆಗಮಿಸುವುದರಿಂದ ಯಾವುದೇ ರೀತಿ ಬೆಂಕಿ ಅವಘಡ-ಕಾಲ್ತುಳಿತವಾಗದಂತೆ ಮುನ್ನೆಚ್ಚರಿಕೆ ವಹಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಮ್ಮ ಕಚೇರಿಯಲ್ಲಿ ಗುರುವಾರ ಜರುಗಿದ ಪೂರ್ವಭಾವಿ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಬೆಂಕಿ ಅವಘಡಗಳುಂಟಾದಲ್ಲಿ ಪಾರಾಗುವ ಹಾಗೂ ಕಾಲ್ತುಳಿತ, ನೂಕು-ನುಗ್ಗಲುಗಳಾಗದಂತೆ ಸಂಯಮದಿಂದ ನಡೆದುಕೊಳ್ಳುವ ಬಗ್ಗೆ ಎಲ್‌ಇಡಿ ಪರದೆ ಅಳವಡಿಸಿ ಕಿರು ಚಿತ್ರಗಳನ್ನು ಪ್ರದರ್ಶಿಸುವ ಮೂಲಕ ಜನ ಜಾಗೃತಿ ಮೂಡಿಸಬೇಕು ಎಂದು ಸೂಚಿಸಿದರು.



ಭಕ್ತಾದಿಗಳಿಗೆ ವಿತರಿಸುವ ಪ್ರಸಾದ ತಯಾರಿಸಲು ಶುದ್ಧ ಕುಡಿಯುವ ನೀರನ್ನೇ ಬಳಸಬೇಕು. ಸ್ವಾಮಿಯ ದರ್ಶನಕ್ಕೆ ಕುಟುಂಬ ಸಮೇತ ಆಗಮಿಸುವ ಸಾರ್ವಜನಿಕರಿಗೆ ತೊಂದರೆಯಾಗದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಜಾತ್ರಾ ಸಂದರ್ಭದಲ್ಲಿ ಸ್ವಚ್ಛತೆ ಕಾಪಾಡಲು ಸಿಬ್ಬಂದಿಗಳನ್ನು ನಿಯೋಜಿಸಬೇಕು. ಜಾತ್ರಾ ಕೆಲಸ-ಕಾರ್ಯಗಳಿಗೆ ನಿಯೋಜಿಸುವ ಸಿಬ್ಬಂದಿಗೆ ಧರಿಸಲು ದೇವಸ್ಥಾನದ ಚಿಹ್ನೆಯಿರುವ ಒಂದೇ ಬಣ್ಣದ ಮೇಲು ಅಂಗಿಯನ್ನು ನೀಡಬೇಕು. ಇದರಿಂದ ಸಮಸ್ಯೆಗಳುಂಟಾದಾಗ ನೆರವು ಕೋರಲು ಭಕ್ತಾದಿಗಳಿಗೆ ಅನುವಾಗುತ್ತದೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಮಾತನಾಡಿ ಮಾರ್ಚ್ 29 ರಿಂದ ಏಪ್ರಿಲ್ 12ರವರೆಗೆ ನಡೆಯುವ ಜಾತ್ರೆ ವೇಳೆಯಲ್ಲಿ ಮುಂಜಾಗ್ರತಾ ದೃಷ್ಟಿಯಿಂದ ಅಗ್ನಿಶಾಮಕ ವಾಹನ ಮತ್ತು ಸಿಬ್ಬಂದಿಯನ್ನು ನಿಯೋಜಿಸಬೇಕು. ತಾತ್ಕಾಲಿಕ ಆಸ್ಪತ್ರೆ ಪ್ರಾರಂಭಿಸಿ ತುರ್ತು ಚಿಕಿತ್ಸಾ ವಾಹನ ಹಾಗೂ ಔಷಧಿಯೊಂದಿಗೆ ಅಗತ್ಯ ಸಿಬ್ಬಂದಿಯನ್ನು ನಿಯೋಜಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಸ್ವಾಮಿಯ ರಥದ ರಿಪೇರಿ ಕೆಲಸಗಳಿದ್ದಲ್ಲಿ ಒಂದು ವಾರ ಮುಂಚಿತವಾಗಿ ತಿಳಿಸಬೇಕು ಹಾಗೂ ರಥದ ದೃಢತೆ ಬಗ್ಗೆ ದೃಢೀಕರಣ ಪತ್ರ ನೀಡಬೇಕೆಂದು ಲೋಕೋಪಯೋಗಿ ಇಲಾಖೆಗೆ ಸೂಚನೆ ನೀಡಿ-ದರು. ಜಾತ್ರೆಗೆ ಬರುವ ವಾಹನಗಳಿಗೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆ ಮಾಡಬೇಕು ಎಂದರಲ್ಲದೆ ಜಾತ್ರೆಯಲ್ಲಿ ಭಾಗವಹಿಸುವ ಉತ್ತಮ ರಾಸುಗಳಿಗೆ ಪ್ರಥಮ, ದ್ವಿತೀಯ, ತೃತೀಯ ಬಹುಮಾನವನ್ನು ವಿತರಿಸುವ ಬಗ್ಗೆ ಚರ್ಚಿಸಿದರು. ಮುನ್ನೆಚ್ಚರಿಕಾ ಕ್ರಮವಾಗಿ ಗ್ಯಾಸ್ ಸಿಲಿಂಡರ್ ಹಾಗೂ ಗ್ಯಾಸ್ ಸ್ಟೋವ್‌ಗಳನ್ನು ಇಟ್ಟಿರುವ ಅಂಗಡಿಗಳಲ್ಲಿ 6 ಕೆ.ಜಿ. ಸಾಮರ್ಥ್ಯದ ಎಬಿಸಿ ಪುಡಿ(ಅಗ್ನಿನಂದಕ)ಯನ್ನು ಇಟ್ಟುಕೊಂಡಿದ್ದಲ್ಲಿ ಸಂಭವಿಸಬಹುದಾದ ಅಪಾಯಗಳನ್ನು ತಪ್ಪಿಸಬಹುದೆಂದು ಸಲಹೆ ನೀಡಿದರು.

ಸಭೆಯಲ್ಲಿ ಎಡೆಯೂರು ಶ್ರೀ ಸಿದ್ದಲಿಂಗೇಶ್ವರ ಸ್ವಾಮಿ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಸುನಿಲ್ ಕುಮಾರ್ ಹಾಗೂ ಆರೋಗ್ಯ, ಅಗ್ನಿಶಾಮಕ, ಪಶುಪಾಲನಾ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ಕೆಎಸ್‌ಆರ್‌ಟಿಸಿ ಅಧಿಕಾರಿ ಸೇರಿದಂತೆ ಮತ್ತಿತರ ಇಲಾಖಾಧಿಕಾರಿಗಳು ಉಪಸ್ಥಿತರಿದ್ದರು.

# ಖಾಸಾಬೇಡರ ಪಡೆ ಕುಣಿತ ಪ್ರದರ್ಶನ




ಚಿತ್ರದುರ್ಗ ತಾಲ್ಲೂಕು ಬಚ್ಚಬೋರನಹಟ್ಟಿ ಗ್ರಾಮದಲ್ಲಿ ಫೆ-27 ರಂದು ಖಾಸಾಬೇಡರಪಡೆ ಕುಣಿತ ಪ್ರದರ್ಶಿಸಲಾಯಿತು. ಜಿಲ್ಲಾ ಜಾನಪದ ಕಲಾ ಮಂಡಲ (ರಿ.) ಚಿತ್ರದುರ್ಗ ಇವರಿಂದ ಖಾಸಾಬೇಡರಪಡೆ ಕುಣಿತ ಎಂಬ ಜಾನಪದ ನೃತ್ಯವನ್ನು ಪ್ರದರ್ಶಿಸಲಾಯಿತು. ಚಿತ್ರದುರ್ಗ ಜಿಲ್ಲೆಯ ಪಾರಂಪರಿಕ ಇತಿಹಾಸ ಪ್ರಸಿದ್ದ ಬುಡಕಟ್ಟು ಜನಾಂಗದ ಜಾನಪದ ಕಲೆಯಾದ ಖಾಸಾಬೇಡರಪಡೆ ಕುಣಿತ ಸಾರ್ವಜನಿಕರನ್ನು ಆಕರ್ಷಿಸಿತು. ಕಲಾ ಮಂಡಲದ ಕಲಾವಿದರಾಗಿ ಜಿ.ಗಿರೀಶ್, ಎಸ್. ಉಮಾಪತಿ, ಜಿ.ರಾಜಣ್ಣ, ಆರ್.ಅಮೋಘವರ್ಷ, ಸಾಗರ, ಆರ್.ಅರುಣ್‌ಕುಮಾರ್, ಸಿದ್ದೇಶ್ವರ, ಯು.ದರ್ಶನ, ಸಿ.ಕೆಂಚೇಶ್, ಶ್ರೀಧರ, ವೆಂಕಟೇಶ್‌ಪ್ರಸಾದ್, ಭುವನ, ಗೌತಮ, ಆರ್. ಅಭಿಲಾಷ್, ಎಸ್.ಮಧುಸೂಧನ ರವರುಗಳು ಭಾಗವಹಿಸಿ ಯಶಸ್ವಿ ಪ್ರದರ್ಶನ ಮಾಡಿದರು. ಗ್ರಾಮದ ಸುಮಾರು 200 ಜನ ಪ್ರೇಕ್ಷಕರು ಈ ಕಾರ್ಯಕ್ರಮ ವೀಕ್ಷಿಸಿ ಸಂತೋಷಿಸಿದರು.

# ಮಾರ್ಚ್ 8 ರಂದು ರಾಷ್ಟ್ರೀಯ ಲೋಕ ಅದಾಲತ್

**ಗದಗ :** ಸರ್ವೋಚ್ಚ ನ್ಯಾ೦ಯಾಲ೦ಯ ನವದೆಹಲಿ, ಕರ್ನಾಟಕ ಉಚ್ಚ ನ್ಯಾ೦ಯಾಲ೦ಯ, ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರ ಆದೇಶದನ್ವ೦ಯ ಗದಗ ಜಿಲ್ಲೆ೦ಯಲ್ಲಿ ಮಾರ್ಚ್ 08 ರಂದು ರಾಷ್ಟ್ರೀ೦ಯ ಲೋಕ ಅದಾಲತ್ ಹಮ್ಮಿಕೊಂಡಿದ್ದು ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾ೦ಯಾಧೀಶರಾದ ಬಸವರಾಜ ತಿಳಿಸಿದರು.

ನಗರದ ಜಿಲ್ಲಾ ನ್ಯಾ೦ಯಾಲ೦ಯದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮ೦ಯ ಪೋಲಾಗುವುದನ್ನು ತಪ್ಪಿಸಲು, ಮತ್ತು ರಾಜಿ ಸಂಧಾನದಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾ೦ಯಾಲ೦ಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣ ಮರುಪಾವತಿ ಮಾಡಲಾಗುವುದು ಹಾಗೂ ಪ್ರಕರಣ ರಾಜೀ ಆದಲ್ಲಿ ಉಭ೦ಯ ಪಕ್ಷಗಾರರಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ ಇಲ್ಲಿಗೆ ಪ್ರಕರಣ ಮುಕ್ತಾ೦ಯಗೊಂಡು ತಮ್ಮ ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ಸಹಾ೦ಯಕವಾಗುತ್ತದೆ ಎಂದರು.

# ಏ.05 ಮತ್ತು 06ರಂದು ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟ

**ಶಿವಮೊಗ್ಗ :** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಸರ್ಕಾರಿ ನೌಕರರ ಸಂಘ ಮತ್ತು ಜಿಲ್ಲಾಡಳಿತದ ಸಹಯೋಗದೊಂದಿಗೆ ಏಪ್ರಿಲ್05 ಮತ್ತು 06ರಂದು ನಗರದ ನೆಹರೂ ಕ್ರೀಡಾಂಗಣ ಮತ್ತು ನಗರದ ವಿವಿಧ ಸಮನಾಂತರ ವೇದಿಕೆಗಳಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಗುರುದತ್ತಹೆಗಡೆ ಅವರು ಹೇಳಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಈ ಕ್ರೀಡಾಕೂಟಕ್ಕೆ ಜಿಲ್ಲೆಯ ಸುಮಾರು 4500ಕ್ಕೂ ಹೆಚ್ಚಿನ ನೌಕರ ಕ್ರೀಡಾಪಟುಗಳು ಭಾಗವಹಿಸುವ ನಿರೀಕ್ಷೆ ಇದ್ದು, ಕ್ರೀಡಾಕೂಟವನ್ನು ವ್ಯವಸ್ಥಿತವಾಗಿ ಆಯೋಜಿಸುವಂತೆ ಯುವ ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕರಿಗೆ ಸೂಚಿಸಿದರು.

ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ನಡೆಯುವ 2ದಿನಗಳ ಕಾಲ ಆಹ್ವಾನಿತ ನೌಕರ ಕ್ರೀಡಾಪಟುಗಳಿಗೆ ವ್ಯವಸ್ಥಿತವಾಗಿ ಊಟೋಪಹಾರದ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದ ಅವರು ಕಾರ್ಯಕ್ರಮದ ಉದ್ಘಾಟನೆಗೆ ನಿಯಮಾನುಸಾರ ಶಿಷ್ಟಾಚಾರದಂತೆ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು ಹಾಗೂ ನಿಗಮ-ಮಂಡಳಿಗಳ ಅಧ್ಯಕ್ಷರು, ಪದಾಧಿಕಾರಿಗಳನ್ನು ಆಹ್ವಾನಿಸಲಾಗುವುದ ಎಂದರು.

ಕ್ರೀಡಾಕೂಟದಲ್ಲಿ ಎಲ್ಲಾ ಸ್ಪರ್ಧಾಳುಗಳು ಸ್ಪರ್ಧಾ ಮನೋಭಾವದಿಂದ ಕ್ರೀಡೆಯಲ್ಲಿ ಸ್ಪರ್ಧಿಸುವಂತೆ ಹಾಗೂ ವಿಜೇತರಾಗಿ ಸ್ಥಾನ ಪಡೆದ ಕ್ರೀಡಾಳುಗಳು ರಾಜ್ಯ ಮಟ್ಟದಲ್ಲಿ ನಡೆಯುವ ಸ್ಪರ್ಧೆಯಲ್ಲಿ ಜಿಲ್ಲೆಯ ಪ್ರತಿನಿಧಿಗಳಾಗಿ ಭಾಗವಹಿಸಿ, ಜಯಶಾಲಿಗಳಾಗಿ ಆಗಮಿಸುವಂತೆಯೂ ಅವರು ಆಶಿಸಿದ ಅವರು, ಕ್ರೀಡಾಕೂಟವು ನಿಷ್ಪಕ್ಷಪಾತವಾಗಿ ಹಾಗೂ ಪಾರದರ್ಶಕವಾಗಿ ನಡೆಯುವಂತೆ ನೋಡಿಕೊಳ್ಳಬೇಕು. ಅದಕ್ಕಾಗಿ ಸೂಕ್ತವಾದ ತೀರ್ಪುಗಾರರನ್ನು ನಿಯೋಜಿಸುವಂತೆಯೂ ಅವರು ಸೂಚಿಸಿದರು.

ಸಭೆಯಲ್ಲಿ ಉಪಸ್ಥಿತರಿದ್ದ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಆರ್.ಮೋಹನ್ಕುಮಾರ್‌ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಈಗಾಗಲೇ ನಡೆಸಲಾದ ಕ್ರೀಡೆಗಳಲ್ಲಿ ವಿಜೇತರಾದ ಅಭ್ಯರ್ಥಿಗಳು ಕ್ರೀಡಾಕೂಟದಲ್ಲಿ ಭಾಗವಹಿಸುತ್ತಿದ್ದಾರೆ. ಈ ಅವಧಿಯಲ್ಲಿ ಕ್ರೀಡಾಳುಗಳಿಗೆ ಉತ್ತಮ ಉಟೋಪಚಾರ ಹಾಗೂ ಕ್ರೀಡೆಗಳಲ್ಲಿ ವಿಜೇತರಾದವರಿಗೆ ಉತ್ತಮವಾದ ಸ್ಮರಣಿಕೆ ಮತ್ತು ಪ್ರಶಸ್ತಿಪತ್ರಗಳನ್ನು ಪ್ರದಾನ ಮಾಡುವಂತೆ ಅವರು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಈ ಸಭೆಯಲ್ಲಿ ಉಪವಿಭಾಗಾಧಿಕಾರಿ ಸತ್ಯನಾರಾಯಣ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರೇಖ್ಯಾನಾಯ್ಕ್, ಕಾರ್ಯದರ್ಶಿ ಆರ್.ಪಾಪಣ್ಣ, ಸಿದ್ಧಬಸಪ್ಪ, ಡಾ॥ ಸಿ.ಎ.ಹಿರೇಮಠ್, ದಿನೇಶ್, ಮತ್ತಿತರರು ಉಪಸ್ಥಿತರಿದ್ದರು.

ಈ ಕ್ರೀಡಾಕೂಟದಲ್ಲಿ ಪುರುಷ ಮತ್ತು ಮಹಿಳೆಯರಿಗಾಗಿ ಪ್ರತ್ಯೇಕವಾಗಿ ಕ್ರೀಡೆಗಳನ್ನು ಆಯೋಜಿಸಲಾಗುತ್ತಿದೆ. ಫುಟ್ಬಾಲ್, ವಾಲಿಬಾಲ್, ಹಾಕಿ, ಕಬ್ಬಡ್ಡಿ, ಟೇಬಲ್ಟೆನ್ನಿಸ್, ಟೆನ್ನಿಸ್, ಷಟಲ್ಬ್ಯಾಡ್ಮಿಂಟನ್, ಕೇರಂ, ಬಾಲ್ಬ್ಯಾಡ್ಮಿಂಟನ್, ಕ್ರಿಕೆಟ್, ಬ್ಯಾಸ್ಕೆಟ್ಬಾಲ್, ಚೆಸ್, ಟೆನ್ನಿಕಾಯ್ಟ್, ಥ್ರೋಬಾಲ್, ಯೋಗ, ಖೋ-ಖೋ,ಈಜು, ಅಥ್ಲೆಟಿಕ್ಸ್, ಈ ಕ್ರೀಡೆಗಳಷ್ಟೇ ಅಲ್ಲದೇ ಹಿಂದೂಸ್ಥಾನಿ ಸಂಗೀತ, ಲಘು ಶಾಸ್ತ್ರೀಯ ಸಂಗೀತ, ಕರ್ನಾಟಕಿ ಶಾಸ್ತ್ರೀಯ ಸಂಗೀತ, ಕರ್ನಾಟಕ ಲಘು ಶಾಸ್ತ್ರೀಯ ಸಂಗೀತ, ಜಾನಪದ ಗೀತೆ ವೈಯಕ್ತಿಕ ಮತ್ತು ಗುಂಪು ಸ್ಪರ್ಧೆ, ಕಥಕ್, ಮಣಿಪುರಿ, ಕೂಚುಪುಡಿ, ಕಥಕ್ಕಳಿ, ಒಡಿಸಿ, ಭರತನಾಟ್ಯ, ಜಾನಪದ ನೃತ್ಯ, ಸ್ಟ್ರಿಂಗ್ವಾದ್ಯಗಳ ಸ್ಪರ್ಧೆಗಳು ಹಾಗೂ ಕಿರುನಾಟಕ ಸ್ಪರ್ಧೆ ನಡೆಯಲಿದೆ. ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ನಿಗಧಿಪಡಿಸಿದ ಮಾನದಂಡಗಳನ್ನು ಅನುಸರಿಸಲಾಗುವುದು ರೇಖ್ಯಾನಾಯ್ಕ್, ಕ್ರೀಡಾ ಅಧಿಕಾರಿ, ಶಿವಮೊಗ್ಗ.

# ನಾಡಿನ ಭರವಸೆಯ ವಿದ್ಯಾರ್ಥಿಗಳು ದಾರಿದೀಪವಾಗಬೇಕು



ಸಾಮಾನ್ಯವಾಗಿ ಮಾರ್ಚ್ ತಿಂಗಳೆಂದರೆ ಪರೀಕ್ಷೆಯ ಪೋಷಕರಿಗೆ ನಿರೀಕ್ಷೆಯ ಕಾಲ. ಅಂತೇಯೇ ಏಪ್ರಿಲ್, ಮೇ ತಿಂಗಳು ಫಲಿತಾಂಶದ ನಿರ್ಧಾರದ ಕಾಲ.ಅವಧಿಯಲ್ಲಿ ಎಷ್ಟೋ ಮನೆಗಳು ಮನಗಳು ಸಂಭ್ರಮದ ವಾತಾವರಣದಲ್ಲಿ ಬೆಳಕು ಕಂಡರೆ, ಅನೇಕ ಮನೆ ಮನಗಳು ಕತ್ತಲಲ್ಲಿ ಮುಳುಗುತ್ತವೆ. ಕಾರಣ ಮನೆ ಬೆಳಕಬೇಕಾದ ಮಕ್ಕಳು ಕೆಲವರು ಆತ್ಮಸ್ಥೈರ ಕುಗ್ಗಿಸಿಕೊಂಡು ಆತ್ಮಹತ್ಯೆಯ ದಾರಿ ತುಳಿಯುತ್ತಾರೆ.

ಅದರಲ್ಲೂ ಇಂದಿನ ಹದಿಹರೆಯದ ಯುವಕ ಯುವತಿಯರ ಪ್ರೇಮ ಪ್ರಕರಣಗಳು ಎಗ್ಗಿಲ್ಲದೆ ನಡೆ–ಯುತ್ತಿದೆ.ಇದರಲ್ಲಿ ಪೋಷಕರ ಪಾತ್ರವೂ ಸಹ ಅಷ್ಟೇ ಇದೆ. ತಮ್ಮ ಮಕ್ಕಳು ಎಲ್ಲರಂತೆ ಓದುತ್ತಿದ್ದಾರೆ, ಮಗ, ಮಗಳು ಬೇರೆ ಊರಿನಲ್ಲಿ ಓದಿ ಮನೆಗೆ ಕೀರ್ತಿ ತರುತ್ತಾರೆ ಎಂಬ ಬಾರಿ ಭರವಸೆಯನ್ನು ಇಟ್ಟುಕೊಂಡಿರುತ್ತಾರೆ. ಆದರೆ ಇಂದಿನ ಕೆಲವು ಯುವಕ ಯುವತಿಯರು ನಗರ ಪ್ರದೇಶದಲ್ಲಿ ಪಬ್, ಬಾರ್, ಡಿಸ್ಕೋತೆಕ್, ಮೊಬೈಲ್, ಮೆಸೇಜ್,ಚಾರ್ಟ್ಸ ಕಂಪ್ಯೂಟರ್ ಚಾಟಿಂಗ್ ಎಲ್ಲವೂ ಯುವ ಪೀಳಿಗೆಯನ್ನು ದಾರಿ ತಪ್ಪಿಸುವಂತೆ ಮಾಡುತ್ತಿದೆ.

ಫೇಲ್ ಆದಾಗ ಜೀವನ ಹಾಳಾಯಿತು, ಲವ್ ಮಾಡಿದವನು ಕೈ ಕೊಟ್ಟಾಗ ಸಾಕಿ ಸಲುಹಿದ, ಕಷ್ಟಪಟ್ಟು ಬೆಳೆಸಿದ ಪೋಷಕರು ನೆನಪಿಗೆ ಬಾರದೆ ಒಂದು ಮೆಸೇಜ್ ಹಾಕಿ ನಾನು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೇನೆ ಎಂದು ಹೇಳಿ ಸಾವನ್ನು ಸುಲಭವಾಗಿ ತಂದು–ಕೊಡುತ್ತಾರೆ. ಇಂತಹ ಪ್ರಕರಣಗಳು ಅತಿಯಾಗಿ ಕೇಳು ಬರುತ್ತಿವೆ.

ಹುಟ್ಟಿದವನು ಸಾಯಲೇಬೇಕು, ಇದು ನಿಶ್ಚಿತ ಆದರೆ ಹುಟ್ಟು ಸಾವಿನ ನಡುವಿನ ಜೀವಿತಕಾಲದಲ್ಲಿ ವ್ಯಕ್ತಿ ತನ್ನ ಸ್ವಇಚ್ಚೆಯಿಂದ ತನ್ನನ್ನು ಕೊಂದುಕೊಳ್ಳುವುದನ್ನು ಆತ್ಮಹತ್ಯೆ ಎನ್ನಲಾಗುತ್ತದೆ. ರಾಷ್ಟ್ರದ ಬೆನ್ನೆಲುಬಾಗಿರುವ ಪೋಷಕರ ಆಧಾರವಾಗಿರುವ ವಿದ್ಯಾರ್ಥಿಗಳು ನಾಡಿನ, ನಾಳಿನ ಭರವಸೆಯ ಆಶಕಿರಣಗಳು. ಆದರೆ ಇಂದು ವಿದ್ಯಾರ್ಥಿಗಳು ದೃತಿಗೆಟ್ಟು ಆತ್ಮಹತ್ಯೆಗೆ ಶರಣಾಗುತ್ತಿರುವುದು ಮನುಕುಲದ ಘೋರ ದುರಂತಕ್ಕೆ ಸಾಕ್ಷಿ ಅಲ್ಲದೇ, ಇದು ಸಮಾಜದ ಶಿಕ್ಷಣ ವ್ಯವಸ್ಥೆಯ ಬೇರನ್ನು ಹಿಡಿದಲುಗಿಸುವ ಪ್ರಸಂಗ ಕೂಡ. ವಿದ್ಯಾರ್ಥಿಗಳ ಆತ್ಮಹತ್ಯೆಯ ಜಾಡ ಹಿಡಿದು ಹೋದರೆ ಅನೇಕ ಕಾರಣಗಳು ಕಾಣಸಿಗುತ್ತವೆ.

ಅನೇಕ ಪೋಷಕರಿಗೆ ಅವರ ಪ್ರತಿಷ್ಠೆಗೆ ತಕ್ಕಂತೆ ಮಕ್ಕಳು ಅಂಕಗಳನ್ನು ಗಳಿಸಬೇಕೆಂಬ ಹಂಬಲ ಅವರ ಆಸೆ ಆಕಾಂಕ್ಷೆಗಳನ್ನು ಮಕ್ಕಳ ಮೂಲಕ ತೀರಿಸಿಕೊಳ್ಳುವ ಚಪಲ. ಪರಿಣಾಮ ವಿದ್ಯಾರ್ಥಿಗಳ ಮೇಲೆ ಅತಿಯಾದ ಒತ್ತಡ,ಅನೇಕರು ಮಕ್ಕಳ ಆಯ್ಕೆಯ ಸ್ವಾತಂತ್ರ್ಯವನ್ನು ತಾವೇ ಕಸಿದುಕೊಂಡು ಬಿಟ್ಟಿರುವುದಲ್ಲದೆ, ಕಡಿಮೆ ಅಂಕಗಳನ್ನು ಪಡೆದರೆ ಆತ ನಿಷ್ಪ ಯೋಜಕ ಎಂದು ಭಾವಿಸಿ ಬಿಡುತ್ತಾರೆ. ತಾಯಿ ತಂದೆ–ಯರ ಈ ತೆರನಾದ ನಿರೀಕ್ಷೆ ಮಕ್ಕಳಿಗೆ ಅಗ್ನಿ ಪರೀಕ್ಷೆಯಾಗಿ ಪರಿಣಮಿಸುತ್ತದೆ. ಅವರ ಆಸೆ ಆಕಾಂಕ್ಷೆಗಳನ್ನು ನೆರವೇರಿಸಲಾಗುವುದಿರಲಿ ಅವುಗಳನ್ನು ಪ್ರತಿಕ್ರಿಯೆಯನ್ನು ಎದುರಿಸಲಾಗದೆ ಮುಗ್ಧ ಜೀವಿಗಳು ಆತ್ಮಹತ್ಯೆಗೆ ಮುಂದಾಗುತ್ತಾರೆ.

ವಿದ್ಯಾರ್ಥಿಗಳಿಗೆ ಆಯ್ಕೆ ಸ್ವಾತಂತ್ರ ಕೊಡದೆ, ತಾವೇ ವಿಧಿ ಬರೆದ ಬ್ರಹ್ಮನೆಂಬಂತೆ ನೀನು ಇದನ್ನೇ ಮಾಡಬೇಕೆಂಬ ಪಟ್ಟು ಹಿಡಿತಾರೆ. ಮಕ್ಕಳ ಸಣ್ಣಪುಟ್ಟ ಸಾಧನೆಗಳನ್ನು ಮೆಚ್ಚಿ ಪುರಸ್ಕರಿಸದೆ, ಅವರಿವರ ಮಕ್ಕಳೊಂದಿಗೆ ತಮ್ಮ ಮಗುವನ್ನು ಹೋಲಿಕೆ ಮಾಡ್ತಾ ನೀನು ನಿಸ್ಪ್ರಾಯಜೋಕಾ ಎಂದು ಜರಿಯುವುದು, ಮಕ್ಕಳ ಆತ್ಮವಿಶ್ವಾಸವನ್ನೇ ಕೊಂದುಬಿಡುತ್ತಾರೆ.

> **ಪೋಷಕರಿಗೆ ಆಧಾರವಾಗಿರುವ ವಿದ್ಯಾರ್ಥಿಗಳು ನಾಡಿನ ನಾಳಿನ ಭರವಸೆಯ ಆಶಾಕಿರಣಗಳು, ಕೆಲವು ಪೋಷಕರಿಗೆ ಅವರ ಪ್ರತಿಷ್ಠೆಗೆ ತಕ್ಕಂತೆ ಮಕ್ಕಳು ಅಂಕಗಳನ್ನು ಗಳಿಸಬೇಕೆಂಬ ಹಂಬಲ ವಿದ್ಯಾರ್ಥಿಗಳ ಮೇಲೆ ಅತಿಯಾದ ಒತ್ತಡ. ಇದು ಮಕ್ಕಳಿಗೆ ಅಗ್ನಿಪರೀಕ್ಷೆ ಆಗಿ ಪರಿಣಮಿಸುತ್ತಿದೆ ದೃತಿ ಗೆಡುತ್ತಿದ್ದಾರೆ ,ಶಿಕ್ಷಣ ಆದರ್ಶ ಜೀವನಕ್ಕೆ ದಾರಿಯ ಹೊರತು ಹೇಡಿಗಳನ್ನು ಹುಟ್ಟು ಹಾಕುವುದಿಲ್ಲ ವಿದ್ಯಾರ್ಥಿಗಳಲ್ಲಿ ಕೇವಲ ಬೌದ್ಧಿಕವಾದ ಸಮ್ಮಿಲವನ್ನಾಗಿಸಿದರೆ ಸಾಲದು ಅವರನ್ನು ಮಾನಸಿಕವಾಗಿ, ಸ್ಪರ್ಧಾತ್ಮಕವಾಗಿಸಬೇಕು. ಉತ್ತಮ ಜೀವನದ ಬೆಳಕನ್ನು ತೋರಿಸಿಕೊಟ್ಟಲ್ಲಿ ಅವರ ಜೀವನ ಮಾರ್ಗ ಅನಂತವಾಗುತ್ತದೆ. ..**

ಅವಿಭಕ್ತ ಕುಟುಂಬಗಳಲ್ಲಿ ತಾಯಿ, ತಂದೆ ಇಬ್ಬರು ಕೆಲಸ ಒತ್ತಡದಲ್ಲಿ ಮಕ್ಕಳ ಬಗ್ಗೆ ಅಷ್ಟಾಗಿ ಗಮನ ಕೊಡುವುದಿಲ್ಲ ಅಲ್ಲದೆ ಒಂದು ಎರಡು ಮಕ್ಕಳು ಇರುವುದರಿಂದ ಅತಿಯಾದ ಮುದ್ದಿನಿಂದ ಸಾಕಿರುತ್ತಾರೆ.

ಹೊಂದಾಣಿಕೆ ಪ್ರವೃತ್ತಿ ಮಕ್ಕಳಲ್ಲಿ ಕಡಿಮೆಯಾಗಿರುತ್ತದೆ ಬಯಸಿದ್ದು ಸಿಗದಿದ್ದಲ್ಲಿ ಬಹುಬೇಗ ನಿರಾಶರಾಗುತ್ತಾರೆ. ಸಮಸ್ಯೆ ಗೆ ಉತ್ತರ ಕಂಡುಕೊಳ್ಳುವಲ್ಲಿ ವಿಫಲರಾಗಿ ಆತ್ಮಹತ್ಯೆ ಕೈ ಹಾಕುತ್ತಾರೆ ಎಂದು ಓದು ಉದ್ಯೋಗಕ್ಕಾಗಿ ಎಂಬಂತಾಗಿದೆ. ಆದ್ದರಿಂದ ಪೈಪೋಟಿ ಎದುರಿಸುವ ಗುರಿ ಮುಟ್ಟಲು ಪ್ರತಿಯೊಬ್ಬರಿಗೂ ಕಠಿಣ ಸಾಧನೆ ಅವಶ್ಯಕತೆ ಇಲ್ಲ ಈ ಕಾರಣಕ್ಕಾಗಿ ಫಲಿತಾಂಶ ಬಂದೊಡನೆ ಹೆಚ್ಚಿನ ವಿದ್ಯಾರ್ಥಿಗಳು ಇಂಥ ದಾರಿ ತುಳಿಯುತ್ತಾರೆ.

ಸಹನೆ ತಾಳ್ಮೆಯ ಕೊರತೆ, ಪೋಷಕರು ತನ್ನಿಚೆಗೆ ಸಹಕರಿಸಲಿಲ್ಲ ಎಂಬ ಕಾರಣ–ಕ್ಕೆ ಪ್ರಶ್ನೆಗೆ ಉತ್ತರಿಸಿದಾಗ ಅಂಕಗಳನ್ನು ಕಡಿಮೆ ತೆಗೆದಾಗ, ಅನುಚಿತ ವರ್ತನೆ ತೋರಿದಾಗ ಶಿಕ್ಷಕರು ಗದರಿಸುವುದು ಇಲ್ಲವೇ ಸಣ್ಣ ,ಪುಟ್ಟ ಶಿಕ್ಷೆ ವಿಧಿಸಿದರು ಎಂಬ ಕಾರಣಕ್ಕೂ ಶಿಕ್ಷೆ ವಿಧಿಸಿದರೆ ಇಂಥ ಕಾರಣಗಳಿಗೆಲ್ಲ ಆತ್ಮಹತ್ಯೆಗೆ ಮುಂದಾಗುವಂತಹ ಪ್ರೇರಪಿಸುವ ಕಡಿಮೆ ತೆಗೆದಾಗ, ಅನುಚಿತ ವರ್ತನೆ ತೋರಿದಾಗ ಶಿಕ್ಷಕರು ಗದರಿಸುವುದು ಇಲ್ಲವೇ ಸಣ್ಣ ,ಪುಟ್ಟ ಶಿಕ್ಷೆ ವಿಧಿಸಿದರು ಎಂಬ ಕಾರಣಕ್ಕೂ ಶಿಕ್ಷೆ ವಿಧಿಸಿದರೆ ಇಂಥ ಕಾರಣಗಳಿಗೆಲ್ಲ ಆತ್ಮಹತ್ಯೆಗೆ ಮುಂದಾಗುವಂತಹ ಪ್ರೇರಪಿಸುವ ದುರ್ಬಲ ಮನಸಿಗೆ ಕಾರಣವಾದರೂ ಏನೋ? ಶಿಶುವಾಗಿದ್ದನಿಂದಲೂ ತಾಯಿ, ತಂದೆ ಮಕ್ಕಳಿಗೆ ಸೋಲುವುದನ್ನು ಕಲಿಸದಿರುವುದು, ಮುಂದೊಂದು ದಿನ ಸೋಲನ್ನೇ ದುರಿಸಲು ಬಂದಾಗ ಧೃತಿಗೆಡಿಸುತ್ತದೆ.

ಆಗ ಸೋಲನ್ನು ಸುಲಭವಾಗಿ ಸ್ವೀಕರಿಸುವಂತೆ ರೂಪುಗೊಳ್ಳುವ ಮನಸ್ಸು ಮುಂದೆ ಸೋಲನ್ನು ಸಹಿಸದೆ ಸಾವನ್ನು ಸ್ವಾಗತಿಸುತ್ತದೆ. ಇಂದು ಮಾಡುತ್ತಿರುವ ಮತ್ತೊಂದು ತಪ್ಪು ಎಂದರೆ ದೊಡ್ಡ ,ದೊಡ್ಡ ಹುದ್ದೆಗಳನ್ನೇ ಹೊಂದಿರಬೇಕು, ಸಣ್ಣ ವೃತ್ತಿಗಳು ಗೌರವಕ್ಕೆ ಕುಂದೆಂಬ ಭಾವನೆ ಇರುತ್ತದೆ. ಪಾಲಿಗೆ ಬಂದದ್ದನ್ನು ಸ್ವೀಕರಿಸಿ ಬದುಕುವ ಛಲ ಇರುವುದಿಲ್ಲ. ಇವರು ತಟ್ಟಿದ ಬಾಗಿಲು ಮುಚ್ಚಿದಲ್ಲಿ ಮತ್ತೊಂದು ಬಾಗಿಲು ತೆರೆಯಲು ಪ್ರಯತ್ನಿಸುತ್ತದೆ ನಕರಾತ್ಮಕ ಭಾವನೆ ತುಳಿಯುತ್ತಾರೆ.

ಪೋಷಕರು ಮಕ್ಕಳಿಗೆ ಐಷಾರಾಮಿ ಜೀವನ ಒಗಿಸುತ್ತಾರೆ.ಹೆಚ್ಚಿನ ಜೀವನ ಆಡಂಬರದಲ್ಲಿ ಕಳೆಯುವುದರಿಂದ ವಿಲಾಸಗಳಿಗೆ ಮನಸ್ಸುತು ಮನಸ್ಸು ವ್ಯಾವ್ಯಾಪ್ರ ವಾಗುತ್ತದೆ ಹೊರತು ಶಾಂತಿ ಸಮಾಧಾನಗಳು ಇಲ್ಲವಾಗುತ್ತದೆ. ಚಿಕ್ಕ ಪುಟ್ಟ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುವ ತಾಳ್ಮೆಯು ಇಲ್ಲವಾಗುತ್ತದೆ. ಶಿಕ್ಷಣ ಆದರ್ಶ ಜೀವನಕ್ಕೆ ದಾರಿಯ ಹೊರತು ಹೇಡಿಗಳನ್ನು ಹುಟ್ಟು ಹಾಕುವುದಿಲ್ಲ. ತಾಯಿ ತಂದೆಯವರು ತಮ್ಮ ಮಕ್ಕಳಿಗೆ ಮೊದಲು ಬದುಕುವ ರೀತಿಯಲ್ಲಿ ಕಲಿಸಿಕೊಡಬೇಕು ಪಾಲಾಯನವಲ್ಲ. ವಿದ್ಯಾರ್ಥಿಗಳ ಆತ್ಮಹತ್ಯೆ ಪ್ರಜ್ಞಾವಂತ ಸಮಾಜವನ್ನೇ ಬದುಕಿನ ಅವನತಿಗೆ ಹಿಡಿದ ಕನ್ನಡಿ.

ವಿದ್ಯಾರ್ಥಿಗಳನ್ನು ಕೇವಲ ಬೌದ್ಧಿಕವಾಗಿ ಸಬಲರನ್ನಾಗಿಸಿದರೆ ಸಾಲದು, ಅವರನ್ನು ಮಾನಸಿಕವಾಗಿ ಸದೃಢರಾಗಿಸಬೇಕು. ಶಾಲೆಗಳಲ್ಲೂ ಪಠ್ಯ ವಸ್ತುಗಳನ್ನು ಪೂರ್ಣ ಮಾಡುವುದಕ್ಕೆ ಕೊಟ್ಟಷ್ಟೇ ಗಮನವನ್ನು ಜೀವನ ಮೌಲ್ಯಗಳ ಶಿಕ್ಷಣದ ಕಡೆಗೂ ಕೊಡುವಂತಾಗಬೇಕು. ಒಂದು ಶಾಲೆ ಮಟ್ಟವನ್ನು ಕೇವಲ ಮಕ್ಕಳ ಭೌತಿಕ ಸಾಧನೆಯನ್ನು ಅಳೆದು ನಿರ್ಧರಿಸುವ ಪರಿಪಾಠ ಬದಲಾಗಬೇಕು.

ಶಿಕ್ಷಕರು ಮತ್ತು ಪೋಷಕರು ವಿದ್ಯಾರ್ಥಿಗಳ ದಿನಗಳಲ್ಲಿ ಕೆಲ ನಿಮಿಷವಾದರೂ ಯೋಗ, ಧ್ಯಾನ,ಪ್ರಾರ್ಥನೆ ಮುಂತಾದವಗಳಲ್ಲಿ ಕಳೆಯುವಂತೆ ಪ್ರೇರಪಿಸಬೇಕು. ಅವರೆದುರು ನೂರಾರು ದಾರಿಗಳು ತೆರೆದಿದ್ದು ಉದಾತ್ತ ಜೀವನ ಬೆಳಕನ್ನು ತೋರಿಸಿಕೊಟ್ಟಲ್ಲಿ ಅವರ ಜೀವನ ಮಾರ್ಗ ಅನಂತವಾಗುತ್ತದೆ. ಸುಖ ದುಃಖ ಸೋಲು ಗೆಲುವು ಗಳೆಲ್ಲಾನೂ ಸಮಾನವಾಗಿ ಸ್ವೀಕರಿಸಿ ಪರಿಪೂರ್ಣ ಜೀವನ ಸವಿದು ದಾರಿದೀಪಗಳಾ ಬೇಕಾಗಿದೆ. ಅವರಿವರೆಗೆ ಹೇಳುವ ಪೋಷಕರ ಮೊದಲು ತಮ್ಮ ಮನೆಯಲ್ಲಿ ಬದಲಾವಣೆ ಮಾಡಿಕೊಂಡರೆ ಒಳ್ಳೆಯದು.

ಲೇಖನ: ಜಿ.ಎಂ.ರಾಜಶೇಖರ್
ಚಿಕ್ಕಮಗಳೂರು
Rajashekar.ckm@gmail.com.
Suddigaralivenews@gmail.com.
94483 64949.

## ಕ್ರಿಮಿನಲ್ ಜನಪ್ರತಿನಿಧಿಗಳ ನಿಷೇಧ ಕುರಿತ ವಿಚಾರಣೆಗೆ ಸುಪ್ರೀಂ ಸಮ್ಮತಿ

**ನವದೆಹಲಿ:** ಕ್ರಿಮಿನಲ್ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಜನಪ್ರತಿನಿಧಿಗಳನ್ನು ರಾಜಕಾರಣದಿಂದ ನಿಷೇಧಿಸುವ ಕುರಿತಂತೆ ಕೈಗೊಳ್ಳಬೇಕಾದ ತೀರ್ಮಾನದ ಬಗ್ಗೆ ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ಸಮತಿಸಿದೆ.

ಕ್ರಿಮಿನಲ್ ಪ್ರಕರಣದಲ್ಲಿ ಶಿಕ್ಷೆಗೆ ಅನುಸಾರವಾಗಿ ಯಾವುದೇ ಜನಪ್ರತಿನಿಧಿಗಳ ಅನರ್ಹತೆಯ ಅವಧಿಯನ್ನು ಕಡಿಮೆ ಮಾಡಿದ ಅಥವಾ ನಿಷೇಧಿಸಿರುವ ಬಗ್ಗೆ ಸುಪ್ರೀಂ ಕೋರ್ಟ್ ಚುನಾವಣಾ ಆಯೋಗದಿಂದ ಪ್ರತಿಕ್ರಿಯೆ ಕೋರಿದೆ.ಜನಪ್ರತಿನಿಧಿ ಕಾಯ್ದೆಯ ಸೆಕ್ಷನ್ 8 ಮತ್ತು 9ರ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ ಶಿಕ್ಷೆಗೊಳಗಾದ ಜನಪ್ರತಿನಿಧಿಗಳಿಗೆ ಜೀವಾವಧಿ ನಿಷೇಧ ಹೇರುವಂತೆ ಕೋರಿ ಬಿಜೆಪಿ ನಾಯಕರೊಬ್ಬರು ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯ ವಿಚಾರಣೆ ನಡೆಸುತ್ತದೆ.

ಸಂಸತ್ತು ಮತ್ತು ವಿಧಾನಸಭೆಗಳ ಶಿಕ್ಷೆಗೊಳಗಾದ ಸದಸ್ಯರಿಗೆ ಚುನಾವಣೆಯಲ್ಲಿ ಸ್ಪರ್ಧಿಸುವುದನ್ನು ಆಜೀವ ನಿಷೇಧಿಸುವಂತೆ ಕೋರಿ ಸಲ್ಲಿಸಲಾದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ದೀಪಂಕರ್ ದತ್ತಾ ನೇತೃತ್ವದ ನ್ಯಾಯಪೀಠ, ಈ ಮಾಹಿತಿಯು ನ್ಯಾಯದ ಹಿತದೃಷ್ಟಿಯಿಂದ ಕೂಡಿದೆ ಎಂದು ಹೇಳಿದೆ.ಏಕೆಂದರೆ ಈ ಹಿಂದೆ, 1977 ರಲ್ಲಿ ಚುನಾವಣಾ ಆಯೋಗವು ಜನ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 11 ರ ಅಡಿಯಲ್ಲಿ ತನ್ನ ಅಧಿಕಾರವನ್ನು ಬಳಸಿದ ಎರಡು ದಾಖಲಿತ ನಿದರ್ಶನಗಳಿವೆ. ಅನರ್ಹತೆಯ ಅವಧಿಯನ್ನು ಕಡಿಮೆ ಮಾಡಲು 1951 (ಆರ್ ಪಿ ಕಾಯ್ದೆ).ನಿಮ್ಮ ಅಭಿಪ್ರಾಯವನ್ನು ನಾವು ಗೌರವಿಸುತ್ತೇವೆ! ನ್ಯಾಯದ ಹಿತದೃಷ್ಟಿಯಿಂದ ನಿಮ್ಮ ಅನುಭವವನ್ನು ಸುಧಾರಿಸಲು ನಮಗೆ ಸಹಾಯ ಮಾಡಿ. ಸೆಕ್ಷನ್ 11 ರ ಅಡಿಯಲ್ಲಿ ಅಧಿಕಾರವನ್ನು ಚಲಾಯಿಸಿದ ಸಂದರ್ಭಗಳನ್ನು ಸೂಚಿಸಲು ನಾವು ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡುತ್ತೇವೆ ಎಂದು ನ್ಯಾಯಪೀಠ ತಿಳಿಸಿದೆ.

## ಕೈಲಾಗದ ವಿರೋಧ ಪಕ್ಷಗಳು ಚಲುವರಾಯಸ್ವಾಮಿ ಟೀಕೆ



**ಬೆಂಗಳೂರು:** ಗ್ಯಾರಂಟಿ ಯೋಜನೆಗಳನ್ನು ನೀಡುತ್ತೇವೆ. ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತೇವೆ. ಆದರೆ ವಿರೋಧ ಪಕ್ಷದವರಿಂದ ಯಾವುದೂ ಆಗಲಿಲ್ಲ ಎಂದು ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ಟೀಕಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಪಕ್ಷಗಳು ನೀಡುವ ಸಲಹೆಗಳಲ್ಲಿ ಒಳ್ಳೆಯದಿದ್ದರೆ ಸ್ವೀಕರಿಸುತ್ತೇವೆ ಎಂದರು. ಅಭಿವೃದ್ಧಿ ವಿಚಾರವಾಗಿ ಪ್ರತಿಪಕ್ಷ ಬಿಜೆಪಿ ಮಾಡುತ್ತಿರುವ ಟೀಕೆಗೆ ಮೇಲಿನಂತೆ ಪ್ರತಿಕ್ರಿಯಿಸಿದ ಅವರು, ದೆಹಲಿಯಲ್ಲಿ ಏಕೆ ಗ್ಯಾರಂಟಿ ಘೋಷಣೆ ಮಾಡಬೇಕಿತ್ತು ಎಂದು ಪ್ರಶ್ನಿಸಿದರು.

ನಮ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅನುಭವಿಗಳಿದ್ದಾರೆ. ಈ ಬಾರಿ ದಾಖಲೆ ಬಜೆಟ್ ಮಂಡಿಸಲಿದ್ದಾರೆ ಎಂದು ಹೇಳಿದರು. ಪಕ್ಷದಲ್ಲಿ ಸಣ್ಣಪುಟ್ಟ ಕಲಹಗಳು ಇದ್ದೇ ಇರುತ್ತವೆ. ಅವನ್ನೆಲ್ಲಾ ಪಕ್ಷದ ಹೈಕಮಾಂಡ್ ನೋಡಿಕೊಳ್ಳಲಿದೆ. ಸಚಿವರ ಸಭೆಯ ಬಗ್ಗೆಯೂ ಹೈಕಮಾಂಡ್ ಗಮನ ಹರಿಸಲಿದೆ ಎಂದು ಹೇಳಿದರು.

# ಸರ್ಕಾರಿ ಕಾಮಗಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ಕುರಿತು ಬಿಜೆಪಿ ಆಕ್ರೋಶ



**ಬೆಂಗಳೂರು:** ಧರ್ಮದ ಹೆಸರಿನಲ್ಲಿ ಸಮಾಜ ಹಾಗೂ ನಾಡನ್ನು ವಿಭಜನೆ ಮಾಡಲು ಹೊರಟಿರುವ ಕಾಂಗ್ರೆಸ್ ಸರ್ಕಾರದ ಧೋರಣೆಯನ್ನು ಬಿಜೆಪಿ ಬಲವಾಗಿ ಖಂಡಿಸಿ ವಿರೋಧಿಸುತ್ತದೆ. ಸರ್ಕಾರ ಸದ್ಯ ಕಾಮಗಾರಿಯಲ್ಲಿ ಮುಸ್ಲಿಂ ಸಮುದಾಯಕ್ಕೆ ಮೀಸಲಾತಿ ಕಲ್ಪಿಸಲು ಹೊರಟಿರುವ ತುಷ್ಟೀಕರಣದ ಧೋರಣೆಯ ನಿರ್ಧಾರವನ್ನು ಕೈಬಿಡಬೇಕು ಎಂದು ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಒತ್ತಾಯಿಸಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ವಿಜಯೇಂದ್ರ ಅವರು, ಕಸುಬು ಆಧಾರಿತ ಅತಿ ಹಿಂದುಳಿದ ಕಾಯಕ ಸಮುದಾಯಗಳು ಆಧುನಿಕ ತಂತ್ರಜ್ಞಾನದ ಹೊಡೆತಕ್ಕೆ ಸಿಲುಕಿ ಬದುಕಿನ ಅಸ್ತಿತ್ವ ಕಂಡುಕೊಳ್ಳಲು ಪ್ರಯಾಸ ಪಡುತ್ತಿದ್ದಾರೆ.

ಇಂತಹ ಅತಿ ಹಿಂದುಳಿದ ಸಮುದಾಯಗಳಿಗೆ ಯಾವ ಕಾರ್ಯಕ್ರಮ, ಯೋಜನೆಗಳನ್ನು ಹಾಗೂ ವಿಶೇಷ ಮೀಸಲಾತಿಯನ್ನು ಕಲ್ಪಿಸಿಕೊಡದ ಕಾಂಗ್ರೆಸ್ ಸರ್ಕಾರದ ನೇತೃತ್ವ ವಹಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಿಂದುಳಿದವರ ಬಗ್ಗೆ ಮಾತನಾಡುವ ನೈತಿಕತೆ ಕಳೆದುಕೊಂಡಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಕಾಂಗ್ರೆಸ್ ಸರ್ಕಾರದ ಕಣ್ಣಿಗೆ ಅಲ್ಪಸಂಖ್ಯಾತರು ಎಂದರೆ ಮುಸ್ಲಿಮರು ಮಾತ್ರ ಕಾಣುತ್ತಾರೆ ಹೊರತು ಇತರ ನೈಜ ಅಲ್ಪಸಂಖ್ಯಾತ ಸಮುದಾಯಗಳಾವೂ ಕಾಣುವುದೇ ಇಲ್ಲ, ದಶಕಗಳ ಹಿಂದೆ ಅಲ್ಪಸಂಖ್ಯಾತರಾಗಿದ್ದ ಮುಸ್ಲಿಮರು ಇಂದು ಸಂಘಟಿತವಾಗಿ ಮುಂಚೂಣಿಯಲ್ಲಿದ್ದಾರೆ, ಕಾಂಗ್ರೆಸ್ ಪಕ್ಷಕ್ಕೆ ಬಹುಸಂಖ್ಯಾತ ಮತ ಬ್ಯಾಂಕ್ ಆಗಿದ್ದಾರೆ, ಈ ಕಾರಣಕ್ಕಾಗಿ ಮುಸ್ಲಿಮರಿಗೆ ಮಾತ್ರ ಸಂವಿಧಾನದ ಆಶಯಕ್ಕೆ ವಿರುದ್ಧವಾಗಿ ಧರ್ಮದ ಹೆಸರಿನಲ್ಲಿ ಉದ್ಯೋಗ ಹಾಗೂ ಶೈಕ್ಷಣಿಕ ಮೀಸಲಾತಿ ನೀಡಲಾಗಿದೆ, ಇದೀಗ ಸರ್ಕಾರಿ ಕಾಮಗಾರಿಗಳಲ್ಲೂ ಶೇ. 4 ರಷ್ಟು ಮೀಸಲಾತಿ ಕಲ್ಪಿಸಲು ಮುಂದಾಗಿ ನಿಯಮ ರೂಪಿಸಲು ಹೊರಟಿರುವುದು ಮುಸ್ಲಿಂ ಓಲೈಕೆಯ ಪರಮಾವಧಿಯಾಗಿದೆ ಎಂದು ಕಿಡಿಕಾರಿದ್ದಾರೆ.ಮುಸ್ಲಿಮರೂ ಸೇರಿದಂತೆ ಸಮಗ್ರ ಅಲ್ಪಸಂಖ್ಯಾತ ಸಮುದಾಯಗಳ ಕುರಿತು ಯಾವುದೇ ಕಲ್ಯಾಣ ಕಾರ್ಯಕ್ರಮಗಳನ್ನು ಕೈಗೊಂಡರೆ ನಾವು ಅದನ್ನು ಆಕ್ಷೇಪಿಸುವುದಿಲ್ಲ. ಆದರೆ ಕೇವಲ ಮುಸ್ಲಿಮರನ್ನು ಮಾತ್ರ ಪ್ರತ್ಯೇಕಿಸಿ ಓಲೈಸುವುದು ಸಮಾಜ ಕಟ್ಟುವುದಕ್ಕೋ ಅಥವಾ ಸಮಾಜ ಒಡೆಯುವುದಕ್ಕೋ ಎಂಬ ಪ್ರಶ್ನೆ ಜನರು ಕೇಳುತ್ತಾರೆ ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ.

ಬಾಯಲ್ಲಿ ಕುವೆಂಪು ಅವರ ಸರ್ವ ಜನಾಂಗದ ಶಾಂತಿಯ ತೋಟದ ಮಂತ್ರ, ಸಂಪನೂಲದ ಪಾಲಿನಲ್ಲಿ ನಿರಂತರ ಪಕ್ಷಪಾತ. ಇದು ಕಾಂಗ್ರೆಸ್ ಅನುಸರಿಸಿಕೊಂಡು ಬಂದಿರುವ ಇಬ್ಬಂದಿ ನೀತಿ, ಸರ್ಕಾರದ ಯೋಜನೆಗಳು ಕಾರ್ಯಗತಗೊಳ್ಳಲು ಪಾರದರ್ಶಕ ನಿಯಮದ ಅಡಿಯಲ್ಲಿ ಕಾಮಗಾರಿಗಳ ನಿರ್ವಹಣೆಯಾಗಬೇಕು.

ಈ ನಿಟ್ಟಿನಲ್ಲಿ ಶೋಷಿತ ಸಮುದಾಯಗಳಿಗೆ ಅವಕಾಶ ಕಲ್ಪಿಸಲು ಮೀಸಲಾತಿ ನೀಡುವುದು ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿದ ಸಂವಿಧಾನದ ಮೂಲ ಆಶಯಕ್ಕೆ ಪೂರಕವಾಗಿದೆ. ಆದರೆ ಧರ್ಮಾಧಾರಿತ ಮೀಸಲಾತಿ ಕಲ್ಪಿಸುವುದು ಪಾರದರ್ಶಕ ನಿಯಮದ ಅರ್ಥವನ್ನೇ ಕಳೆದುಕೊಳ್ಳುತ್ತದೆ ಎಂದು ವಿಜಯೇಂದ್ರ ಸರ್ಕಾರದ ಮೇಲೆ ಟೀಕಾ ಪ್ರಹಾರ ನಡೆಸಿದ್ದಾರೆ.

# ಸಿಎಂಗೆ ತಪ್ಪದ ಮುಡಾ ಸಂಕಷ್ಟ ವಿಭಾಗೀಯ ಪೀಠಕ್ಕೆ ಮೇಲ್ಮನವಿ



**ಬೆಂಗಳೂರು;** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ( ಮುಡಾ) ಅಕ್ರಮವಾಗಿ ನಿವೇಶನ ಪಡೆದ ಆರೋಪ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಪ್ರಕರಣದ ತನಿಖೆಯನ್ನು ಕೇಂದ್ರೀಯ ತನಿಖಾ ದಳಕ್ಕೆ (ಸಿಬಿಐ) ವಹಿಸಲು ನಿರಾಕರಿಸಿರುವ ಹೈಕೋರ್ಟ್‌ನ ಏಕಸದಸ್ಯ ಪೀಠದ ಆದೇಶ ಪ್ರಶ್ನಿಸಿ, ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಲಾಗಿದೆ.

ಪ್ರಕರಣದ ದೂರುದಾರ ಮೈಸೂರಿನ ಸ್ನೇಹಮಯಿ ಕೃಷ್ಣ ಈ ಮೇಲನವಿ ಅರ್ಜಿ ಸಲ್ಲಿಸಿದ್ದು, ಇನ್ನಷ್ಟೇ ವಿಚಾರಣೆಗೆ ಬರಬೇಕಾಗಿದೆ. ವಿಚಾರಣಾಧೀನ ನ್ಯಾಯಾಲಯಕ್ಕೆ ಸಿಆರ್‌ಪಿಸಿ ಸೆಕ್ಷನ್ 156(3) ಅಡಿ ಪ್ರಕರಣವನ್ನು ಸಿಬಿಐಗೆ ವಹಿಸುವ ಅಧಿಕಾರವಿಲ್ಲ.

ಈ ಅಧಿಕಾರ ಹೈಕೋರ್ಟ್‌ಗೆ ಸಂವಿಧಾನದ 22ನೇ ವಿಧಿ ಮತ್ತು ಸುಪ್ರೀಂ ಕೋರ್ಟ್‌ಗೆ ಸಂವಿಧಾನದ 32 ಅಥವಾ 142ನೇ ವಿಧಿಯಡಿ ಮಾತ್ರ ಇದೆ ಎಂಬುದನ್ನು ಅರ್ಥೈಸಿಕೊಳ್ಳುವಲ್ಲಿ ಹೈಕೋರ್ಟ್ ವಿಫಲವಾಗಿದೆ. ಅಲ್ಲದೇ, ಪ್ರಕರಣದ ತನಿಖೆಯನ್ನು ಸಿಬಿಐ ಅಥವಾ ಬೇರೆ ಯಾವುದಾದರೂ ಸ್ವತಂತ್ರ ತನಿಖಾ ಸಂಸ್ಥೆ ನಡೆಸಬೇಕು ಎಂದು ಆರಂಭದಿಂದಲೂ ಕೋರುತ್ತಿರುವುದಾಗಿ ಸ್ನೇಹಮಯಿ ಕೃಷ್ಣ ವಿವರಿಸಿದ್ದಾರೆ.

ಕಳೆದ ತಿಂಗಳು ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಪೊಲೀಸರು, ವಿಚಾರಣಾಧೀನ ನ್ಯಾಯಾಲಯಕ್ಕೆ ಬಿ ರಿಪೋರ್ಟ್ ಸಲ್ಲಿಸಿದ್ದಾರೆ. ಇದನ್ನು ಪ್ರಶ್ನಿಸಿ ಪ್ರತಿಭಟನಾ ಅರ್ಜಿ ಸಲ್ಲಿಸುವುದಾಗಿ ಸ್ನೇಹಮಯಿ ಕೃಷ್ಣ ವಿಚಾರಣಾ ನ್ಯಾಯಾಲಯದಲ್ಲಿ ವಾದಿಸಿದ್ದರು. ಸ್ನೇಹಮಯಿ ಕೃಷ್ಣ ಅವರು ಈ ಹಿಂದೆ ಕರ್ನಾಟಕ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದರು.

ಪ್ರಕರಣವನ್ನು ಲೋಕಾಯುಕ್ತದಿಂದ ಸಿಬಿಐಗೆ ವರ್ಗಾಯಿಸಬೇಕೆಂದು ಒತ್ತಾಯಿಸಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಬಿ.ಎಂ. ಅವರಿಗೆ 14 ನಿವೇಶನಗಳ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ಅರ್ಜಿ ಸಲ್ಲಿಸಿದ್ದರು.ಕಳೆದ ಫೆಬ್ರವರಿ 7 ರಂದು ನ್ಯಾಯಾಲಯವು ಅರ್ಜಿಯನ್ನು ವಜಾಗೊಳಿಸಿತ್ತು, ಲೋಕಾಯುಕ್ತರಿಂದ ಪಕ್ಷಪಾತ ಅಥವಾ ಕಳಪೆ ತನಿಖೆಯನ್ನು ಸೂಚಿಸಲು ಯಾವುದೇ ಪುರಾವೆಗಳಿಲ್ಲ ಎಂದು ತೀರ್ಪು ನೀಡಿತ್ತು.ಪ್ರಕರಣವನ್ನು ಲೋಕಾಯುಕ್ತದಿಂದ ಸಿಬಿಐಗೆ ವರ್ಗಾಯಿಸಬೇಕೆಂದು ಒತ್ತಾಯಿಸಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಬಿ.ಎಂ. ಅವರಿಗೆ 14 ನಿವೇಶನಗಳ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ಅರ್ಜಿ ಸಲ್ಲಿಸಿದ್ದರು.ಕಳೆದ ಫೆಬ್ರವರಿ 7 ರಂದು ನ್ಯಾಯಾಲಯವು ಅರ್ಜಿಯನ್ನು ವಜಾಗೊಳಿಸಿತ್ತು, ಲೋಕಾಯುಕ್ತರಿಂದ ಪಕ್ಷಪಾತ ಅಥವಾ ಕಳಪೆ ತನಿಖೆಯನ್ನು ಸೂಚಿಸಲು ಯಾವುದೇ ಪುರಾವೆಗಳಿಲ್ಲ ಎಂದು ತೀರ್ಪು ನೀಡಿತ್ತು.

ಲೋಕಾಯುಕ್ತ ತನಿಖೆಯಲ್ಲಿ ಯಾವುದೇ ಪಕ್ಷಪಾತ ಅಥವಾ ಅಸಮತೋಲಿತ ವಿಧಾನವನ್ನು ದಾಖಲೆಯಲ್ಲಿರುವ ವಿಷಯವು ಸೂಚಿಸುವುದಿಲ್ಲ ಎಂದು

ಹೇಳುವ ಮೂಲಕ ಕೃಷ್ಣ ಅವರ ಅರ್ಜಿಯನ್ನು ನ್ಯಾಯಾಲಯ ವಜಾಗೊಳಿಸಿದ ಮೂರು ವಾರಗಳ ನಂತರ ಈ ಬೆಳವಣಿಗೆ ನಡೆದಿದೆ. ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರು ಸಿಬಿಐನಿಂದ ಹೆಚ್ಚಿನ ತನಿಖೆ ಅಥವಾ ಮರು ತನಿಖೆ ಅಗತ್ಯವಿಲ್ಲ ಎಂದು ತೀರ್ಪು ನೀಡಿದ್ದರು.

ಮುಡಾ ನಿವೇಶನ

ಹಂಚಿಕೆ ಪ್ರಕರಣದಲ್ಲಿ ಕರ್ನಾಟಕ ಲೋಕಾಯುಕ್ತರು ಸಿದ್ದರಾಮಯ್ಯ, ಅವರ ಪತ್ನಿ ಮತ್ತು ಇತರ ಇಬ್ಬರಿಗೆ ಕ್ಲೀನ್ ಚಿಟ್ ನೀಡಿದ ಮೂರು ವಾರಗಳ ನಂತರ ಸ್ನೇಹಮಯಿ ಕೃಷ್ಣ ಅವರು ದ್ವಿ ಸದಸ್ಯ ಪೀಠದಲ್ಲಿ ಪ್ರಶ್ನೆ ಮಾಡಿದ್ದಾರೆ. ತನಿಖೆಯು ಆರೋಪಗಳು ನಾಗರಿಕ ಸ್ವರೂಪದ್ದಾಗಿದ್ದು, ಕ್ರಿಮಿನಲ್ ಮೊಕದ್ದಮೆಗಳಿಗೆ ಅರ್ಹವಲ್ಲ ಎಂದು ತೀರ್ಮಾನಿಸಿತ್ತು.

## ಗುತ್ತಿಗೆದಾರರಿಗೆ ಹಂತ ಹಂತವಾಗಿ ಹಣ ಬಿಡುಗಡೆ ಸಚಿವ ಸತೀಶ್ ಜಾರಕಿಹೊಳಿ

**ಬೆಂಗಳೂರು:** ಬಾಕಿ ಇರುವ ಗುತ್ತಿಗೆದಾರರ ಹಣವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಚರ್ಚೆ ನಡೆಸಿ ಹಂತ ಹಂತವಾಗಿ ಬಿಡುಗಡೆ ಮಾಡಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ವಿಧಾನ ಪರಿಷತ್ ನಲ್ಲಿ ಹೇಳಿದ್ದಾರೆ.ಜೆಡಿಎಸ್‌ನ ಟಿ.ಎ ಶರವಣ ಪ್ರಶ್ನೆಗೆ ಉತ್ತರಿಸಿದ ಸಚಿವ ಸತೀಶ್ ಜಾರಕಿಹೊಳಿ,ಗುತ್ತಿಗೆದಾರರಿಗೆ ಒಟ್ಟು 9 ಸಾವಿರ ಕೋಟಿ ಹಣ ಬಾಕಿ ಕೊಡಬೇಕು. ಗುತ್ತಿಗೆದಾರರು ಹಣ ಬಿಡುಗಡೆ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರನ್ನು ಭೇಟಿಯಾಗಿ ಚರ್ಚೆ ಮಾಡಿದ್ದಾರೆ.ಏಕಕಾಲದಲ್ಲಿ ಇಷ್ಟು ದೊಡ್ಡ ಮೊತ್ತದ ಹಣವನ್ನು ಬಿಡುಗಡೆ ಮಾಡಲು ಸಾಧ್ಯವಿಲ್ಲ. ಹಂತ ಹಂತವಾಗಿ ಬಾಕಿ ಮೊತ್ತವನ್ನು ಬಿಡುಗಡೆ ಮಾಡುತ್ತೇವೆ ಎಂದು ಅಭಯ ನೀಡಿದರು.ಈಗಾಗಲೇ ಹಣಕಾಸು ಇಲಾಖೆಯ ಅಧಿಕಾರಿಗಳ ಜೊತೆಗೂ ಸಭೆ ನಡೆಸಿದ್ದೇವೆ. ಹಿಂದಿನ ಸರ್ಕಾರದ ಅವಧಿಯಲ್ಲಿ ಹೆಚ್ಚಿನ ಮೊತ್ತದ ಬಾಕಿ ಇರುವ ಸಮಸ್ಯೆ ಎದುರಾಗಿದೆ. ಆದರೂ ನಮ ಸರ್ಕಾರ ಆದ್ಯತೆ ಮೇರೆಗೆ ಬಾಕಿ ಮೊತ್ತವನ್ನು ಬಡುಗಡೆ ಮಾಡಲಿದೆ ಎಂದು ಹೇಳಿದರು.ಇದಕ್ಕೂ ಮುನ್ನ ಮಾತನಾಡಿದ ಸದಸ್ಯ ಶರವಣ ಅವರು, ಗುತ್ತಿಗೆದಾರರಿಗೆ ನಿಗಧಿತ ಸಮಯಕ್ಕೆ ಸರಿಯಾಗಿ ಹಣ ಬಡುಗಡೆ ಮಾಡದ ಕಾರಣ, ಗುತ್ತಿಗೆದಾರರು ಆತಹತ್ಯೆ, ಮಾಡಿಕೊಳ್ಳುವ ಹಂತಕ್ಕೆ ಬಂದಿದ್ದಾರೆ. ಜೊತೆಗೆ ವಿಷ ಕುಡಿಯುತ್ತೇವೆ ಎಂದು ಹೇಳಿದ್ದಾರೆ. ಸರ್ಕಾರಕ್ಕೂ ಮಾನವೀಯತೆ ಇದ್ದರೆ ಮೊದಲು ಹಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

## ಹಕ್ಕಿಜ್ವರ ಮನುಷ್ಯರಿಗೆ ಹರಡುವುದು ಅಪರೂಪ, ಆತಂಕ ಬೇಡ




**ಬೆಂಗಳೂರು:** ಹಕ್ಕಿಜ್ವರದ ರೋಗ ಮನುಷ್ಯರಿಗೆ ಹರಡುವುದು ಅಪರೂಪವಾಗಿದ್ದು, ಆತಂಕಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ.

ಈ ಸಂಬಂಧ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಹಕ್ಕಿಜ್ವರ ಸಾಂಕ್ರಾಮಿಕ ರೋಗವಾದರೂ ಅದು ಹಕ್ಕಿಗಳಿಂದ ಮನುಷ್ಯರಿಗೆ ಹರಡುವುದು ಅಪರೂಪ. ಹಾಗಾಗಿ ಅನಗತ್ಯವಾಗಿ ಆತಂಕ ಪಡುವ ಅವಶ್ಯಕತೆ ಇಲ್ಲ ಎಂದಿದ್ದಾರೆ. ಹಕ್ಕಿಜ್ವರದ ಪ್ರಕರಣಗಳು ರಾಜ್ಯದಲ್ಲಿ ಅಲ್ಲಲ್ಲಿ ವರದಿಯಾಗುತ್ತಿರುವ ಹಿನ್ನಲೆಯಲ್ಲಿ ಕೆಲ ಎಚ್ಚರಿಕೆಗಳನ್ನು ವಹಿಸಬೇಕು ಎಂದು ಹೇಳಿದ್ದಾರೆ.ಮೊಟ್ಟೆ ಮತ್ತು ಮಾಂಸವನ್ನು ಸೇವಿಸುವಾಗ ಜನ ಎಚ್ಚರಿಕೆಗಳನ್ನು ಪಾಲಿಸಬೇಕು. ಮೊಟ್ಟೆ ಮತ್ತು ಮಾಂಸವನ್ನು 70 ಡಿಗ್ರಿ ಉಷ್ಣಾಂಶದಲ್ಲಿ ಬೇಯಿಸಿ ಸೇವಿಸಬೇಕು. ಸೋಂಕುಪೀಡಿತ ಕೋಳಿ ಫಾರಂ, ಮೃತ ಹಕ್ಕಿ ಅಥವಾ ಕೋಳಿಗಳ ಸಮೀಪಕ್ಕೆ ಹೋಗದೆ ಎಚ್ಚರಿಕೆ ವಹಿಸಬೇಕೆಂಬ ಸಲಹೆಯನ್ನು ಅವರು ಮಾಡಿದ್ದಾರೆ.

## ಕುಟುಂಬ ಕಲಹದಿಂದ ಮನನೊಂದು ಕೃಷ್ಣಾ ನದಿಗೆ ಹಾರಿ ಮೂವರು ಮಕ್ಕಳೊಂದಿಗೆ ತಾಯಿ ಆತ್ಮಹತ್ಯೆ

**ಬೆಳಗಾವಿ:** ಕೌಟುಂಬಿಕ ಕಲಹದಿಂದ ಮನನೊಂದು ಮೂವರು ಮಕ್ಕಳೊಂದಿಗೆ ನದಿಗೆ ಹಾರಿ ತಾಯಿ ಆತಹತ್ಯೆ ಮಾಡಿಕೊಂಡಿರುವ ಘಟನೆ ಮುಳವಾಡ ಬಳಿ ನಡೆದಿದೆ.ಬೆಳಗಾವಿ ಜಿಲ್ಲೆ ರಾಯಭಾಗ ತಾಲೂಕಿನ ಚಿಂಚಲಿ ಗ್ರಾಮದ ಶಾರದ ಢಾಲೆ(38), ಮಕ್ಕಳಾದ ಅನುಷಾ(10), ಅಮೃತಾ(14) ಮತ್ತು ಆದರ್ಶ (8) ಮೃತಪಟ್ಟವರು.ಪತಿ ಅಶೋಕ ಕೂಲಿ ಕೆಲಸ ಮಾಡುತ್ತಿದ್ದು, ಕುಡಿತದ ಚಟ ಹೊಂದಿದ್ದನು. ಈತನ ಕಿರುಕುಳ ಹಾಗೂ ಕೌಟುಂಬಿಕ ಕಲಹದಿಂದ ಮನನೊಂದಿದ್ದ ಶಾರದಾ ಅವರು ತನ್ನ ಮೂವರು ಮಕ್ಕಳನ್ನು ಮನೆಯಿಂದ ಕರೆದುಕೊಂಡು ರಾತ್ರಿ ಮುಳವಾಡದ ಕೃಷ್ಣಾನದಿ ಬಳಿ ತೆರಳಿ ಮೂವರು ಮಕ್ಕಳೊಂದಿಗೆ ನದಿಗೆ ಹಾರಿ ಆತಹತ್ಯೆಗೆ ಶರಣಾಗಿದ್ದಾರೆ..ಇಂದು ಬೆಳಗಿನ ಜಾವ 4ಗಂಟೆ ಸುಮಾರಿನಲ್ಲಿ ಈ ಸುದ್ದಿ ತಿಳಿಯುತ್ತಿದಂತೆ ಕುಡಚಿ ಠಾಣೆ ಪೊಲೀಸರು ಹಾಗೂ ಅಗ್ನಿಶಾಮಕ ದಳ ಸ್ಥಳಕ್ಕೆ ಆಗಮಿಸಿ ಮೃತದೇಹಗಳಿಗಾಗಿ ಶೋಧ ನಡೆಸಿ ನಾಲ್ವರ ಮೃತದೇಹಗಳನ್ನು ಹೊರ ತೆಗೆದು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದ್ದಾರೆ.

## ಡಿಸಿಎಂ ಸೊಕ್ಕಿನ ಮಾತುಗಳಿಗೆ ಜನ ತಕ್ಕ ಪಾಠ ಕಲಿಸುತ್ತಾರೆ : ಜೆಡಿಎಸ್



**ಬೆಂಗಳೂರು:** ಉಪಮುಖ್ಯಮಂತ್ರಿ ಎಂಬುದನ್ನು ಮರೆತು, ಪಾಳೇಗಾರನಂತೆ ಹೆದರಿಸುವ, ಬೆದರಿಸುವ ಸೊಕ್ಕಿನ ಮಾತುಗಳಿಗೆ ರಾಜ್ಯದ ಜನ ತಕ್ಕ ಪಾಠ ಕಲಿಸುತ್ತಾರೆ ಎಂದು ಜೆಡಿಎಸ್ ಹೇಳಿದೆ.

ಈ ಸಂಬಂಧ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಅಧಿಕಾರದ ದರ್ಪ ತಲೆಗೇರಿದೆ ಎಂದು ಆರೋಪಿಸಿದೆ. ರಾಜ್ಯದ ಮೇಕೆದಾಟು

ವಿಚಾರವಾಗಿ ಇಂಡಿ ಕೂಟದ ಕಾಂಗ್ರೆಸ್ ಮಿತ್ರಪಕ್ಷ ತಮಿಳುನಾಡಿನ ಸ್ಟಾಲಿನ್ ಸರ್ಕಾರವನ್ನು ಪ್ರಶ್ನಿಸುವ ಎದೆಗಾರಿಕೆ ಇಲ್ಲದ, ನೀವು ಕನ್ನಡ ಚಿತ್ರರಂಗದ ನಟ–ನಟಿಯರಿಗೆ ಗೊಡ್ಡು ಬೆದರಿಕೆ ಹಾಕುತ್ತೀರಿ ಎಂದು ಟೀಕಿಸಿದೆ.

ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ಕಾಂಗ್ರೆಸ್ ಪಕ್ಷದ ತಾಳಕ್ಕೆ ಕುಣಿಯದ ಚಿತ್ರರಂಗ ಹಾಗೂ ಕಲಾವಿದರ ಮೇಲೆ ಅಸೂಯೆ, ದ್ವೇಷ ಕಾರುವುದು ಎಷ್ಟು ಸರಿ? ಎಂದು ಪ್ರಶ್ನಿಸಿದೆ.ತಮಿಳುನಾಡಿನ ಜೊತೆಗೆ ಅಡ್ಜಸ್ಟ್‌ಮೆಂಟ್ ರಾಜಕೀಯ ಮಾಡಿಕೊಂಡು, ರಾಜ್ಯದ ರೈತರಿಗೆ ದ್ರೋಹ ಬಗೆಯುತ್ತಿರುವ ಕಾಂಗ್ರೆಸ್ ಪಕ್ಷವನ್ನು ಯಾಕೆ ಬೆಂಬಲಿಸಬೇಕು? ಎಂದು ಜೆಡಿಎಸ್ ಟೀಕಾ ಪ್ರಹಾರ ನಡೆಸಿದೆ.

## ಉಚಿತವಾಗಿ ಇ-ಕೆವೈಸಿ ನೋಂದಣಿ

**ದಾವಣಗೆರೆ :** ಹರಿಹರ ತಾಲ್ಲೂಕಿನ ನಗರ ಮತ್ತು ಗ್ರಾಮಾಂತರ ಪ್ರದೇಶದ 124 ನ್ಯಾಯಬೆಲೆ ಅಂಗಡಿಯಲ್ಲಿ ಚಾಲ್ತಿಯಲ್ಲಿರುವ 58,335 ಅಂತ್ಯೋದಯ ಅನ್ನ ಯೋಜನೆ ಮತ್ತು ಆದತ್ಯಾ ಬಿ.ಪಿ.ಎಲ್ ಪಡಿತರ ಚೀಟಿಗಳಲ್ಲಿನ ಒಟ್ಟು ಸದಸ್ಯರ ಪೈಕಿ 7567 ಅಂತ್ಯೋದಯ ಅನ್ನ ಯೋಜನೆ ಮತ್ತು ಆದತ್ಯಾ ಬಿ.ಪಿ.ಎಲ್ ಪಡಿತರ ಚೀಟಿಗಳಲ್ಲಿನ ಸದಸ್ಯರ ಇ-ಕೆವೈಸಿ ಮಾಡಲು ಬಾಕಿ ಇರುತ್ತದೆ.

ಬಾಕಿ ಇರುವ 7567 ಸದಸ್ಯರುಗಳು ಕೂಡಲೇ ಇ-ಕೆವೈಸಿಯನ್ನು ಪ್ರತಿ ದಿನ ಬೆಳಗ್ಗೆ 7 ರಿಂದ ಸಂಜೆ 8 ಗಂಟೆಯವರೆಗೆ ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿ ಅಥವಾ ರಾಜ್ಯದ ಯಾವುದೇ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಪೋರ್ಟಬಲಿಟಿ ಮೂಲಕ ಇ-ಕೆವೈಸಿಯನ್ನು ಉಚಿತವಾಗಿ ಮಾಡಿಕೊಳ್ಳಬಹುದೆಂದು ಹರಿಹರ ತಹಶೀಲ್ದಾರ್ ಗುರುಬಸವರಾಜ್ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದಲ್ಲಿ ಪ್ರಸ್ತಾವನೆಗಳ ಪರಿಶೀಲನಾ ಸಭೆ

**ದಾವಣಗೆರೆ:** ಪ್ರಸಕ್ತ ಸಾಲಿನ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ನೀಡುವ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗಾಗಿ ಜಿಲ್ಲಾ ಮಟ್ಟದಲ್ಲಿ ಸ್ವೀಕೃತವಾದ ಪ್ರಸ್ತಾವನೆಗಳ ಪರಿಶೀಲನೆಗೆ ಫೆಬ್ರವರಿ 12 ರಂದು ಸಂಜೆ 4 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

## ಪ್ಯಾರಚೂಟ್ ತರಬೇತಿ ವ್ಯಾಯಾಮದ ವೇಳೆ ಕರ್ನಾಟಕ ಮೂಲದ ಯೋಧ ಸಾವು

**ಬೆಂಗಳೂರು:** ಉತ್ತರಪ್ರದೇಶದ ಆಗ್ರಾದಲ್ಲಿ ಪ್ಯಾರಾಚೂಟ್ ತರಬೇತಿ ವ್ಯಾಯಾಮ ಸಮಯದಲ್ಲಿ ಕರ್ನಾಟಕದ ಹೊಸನಗರ ಮೂಲದ ಭಾರತೀಯ ವಾಯುಪಡೆಯ ಯೋಧ ಮಂಜುನಾಥ್ ಸಾವನ್ನಪ್ಪಿದ್ದಾರೆ ಎಂದು ವಾಯುಪಡೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ವಿಂಗ್ ಕಮಾಂಡರ್ ರೋಹಿತ್ ದಹಿಯಾ ನೇತೃತ್ವದಲ್ಲಿ 12 ತರಬೇತಿ ಜಿಗಿತಗಾರರು ಮಾಲ್ಪುರ ಪ್ಯಾರಾಚೂಟ್ ಡ್ರಾಪ್ ವಲಯದಲ್ಲಿ ವ್ಯಾಯಾಮ ಮಾಡುತ್ತಿದ್ದಾಗ ಪ್ಯಾರಾಚೂಟ್ ತೆರೆಯಲು ವಿಫಲವಾದ ಕಾರಣ ನೆಲಕ್ಕಪ್ಪಳಿಸಿ ಯೋಧ ಮಂಜುನಾಥ್ ಸಾವನ್ನಪ್ಪಿದ್ದಾರೆ.

## ಉಡಾನ್ ಯೋಜನೆಯಡಿ 5 ಹೊಸ ಮಿನಿ ಏರ್ಪೋರ್ಟ್ ನಿರ್ಮಾಣ

**ಬೆಂಗಳೂರು:** ಉಡಾನ್ ಯೋಜನೆಯಡಿ 5 ಹೊಸ ಮಿನಿ ಏರ್ಪೋರ್ಟ್ ನಿರ್ಮಾಣಕ್ಕೆ ರಾಜ್ಯದಲ್ಲಿ ಸ್ಥಳಗಳನ್ನು ನಾಗರಿಕ ವಿಮಾನಯಾನ ಸಚಿವಾಲಯವು ಗುರುತಿಸಿದೆ. ಲೋಕಸಭೆಯಲ್ಲಿ ಶುಕ್ರವಾರ ಸಂಸದ ಬಸವರಾಜ್ ಬೊಮ್ಮಾಯಿ ಪ್ರಶ್ನೆಗೆ ಉತ್ತರಿಸಿದ ನಾಗರಿಕ ವಿಮಾನಯಾನ ರಾಜ್ಯ ಸಚಿವ ಮುರಳೀಧರ್ ಮೊಹಲ್ ಅವರು. ಉಡಾನ್ ಯೋಜನೆಯಡಿ ಏರ್ಸ್ಟ್ರಿಪ್ಸ್ ನಿರ್ಮಾಣಕ್ಕೆ ಬಳ್ಳಾರಿ, ಕೋಲಾರ, ಕುಶಾಲನಗರ, ರಾಯಚೂರು ಹಾಗೂ ಹಾಸನವನ್ನು ತಾತ್ಕಾಲಿಕವಾಗಿ ಗುರುತಿಸಲಾಗಿದೆ. ಬೀದರ್, ಮೈಸೂರು, ವಿದ್ಯಾನಗರ, ಹುಬ್ಬಳ್ಳಿ, ಕಲಬುರಗಿ, ಬೆಳಗಾವಿ, ಶಿವಮೊಗ್ಗ ವಿಮಾನ ನಿಲ್ದಾಣಗಳಲ್ಲಿ ಈಗಾಗಲೇ ವಿಮಾನಗಳ ಹಾರಾಟ ಪ್ರಕ್ರಿಯೆ ಮುಂದುವರಿದಿದೆ. ವಿಜಯಪುರ ಹಾಗೂ ಕಾರವಾರದಲ್ಲಿ ಇನ್ನಷ್ಟೆ ವಿಮಾನ ನಿಲ್ದಾಣ ನಿರ್ಮಾಣ ಕಾರ್ಯ ಆರಂಭವಾಗಬೇಕಿದೆ ಎಂದರು.

## ವಾಯುಪಡೆಯ ತರಬೇತುದಾರ ಸಾವು

**ಶಿವಮೊಗ್ಗ:** ಉತ್ತರ ಪ್ರದೇಶದ ಆಗ್ರಾದಲ್ಲಿರುವ ವಾಯುಪಡೆಯ ಪಿಟಿಎಸ್ ತರಬೇತಿ ಕೇಂದ್ರದಲ್ಲಿ ತರಬೇತಿ ವೇಳೆ ಸಮಯಕ್ಕೆ ಸರಿಯಾಗಿ ಪ್ಯಾರಾಚೂಟ್ ತರೆದುಕೊಳ್ಳದೇ ಜಿಲ್ಲೆಯ ಭಾರತೀಯ ವಾಯುಪಡೆಯ ತರಬೇತುದಾರರೊಬ್ಬರು ಶುಕ್ರವಾರ ಬೆಳಿಗ್ಗೆ ಸಾವನ್ನಪ್ಪಿದ್ದಾರೆ.ಮೃತರನ್ನು ಹೊಸನಗರ ತಾಲೂಕಿನ ಸಂಕೂರು ಸಮೀಪದ ಗೊರನಗದ್ದೆ ನಿವಾಸಿ ಜಿ ಎಂ ಸುರೇಶ್ ಅವರ ಪುತ್ರ ಜಿ ಎಸ್ ಮಂಜುನಾಥ್ (36) ಎಂದು ಗುರುತಿಸಲಾಗಿದೆ.ಮಂಜುನಾಥ್ ಅವರು 2023 ರಲ್ಲಿ ಭಾರತೀಯ ವಾಯುಪಡೆಗೆ ಜೂನಿಯರ್ ವಾರಂಟ್ ಅಧಿಕಾರಿಯಾಗಿ ಸೇರ್ಪಡೆಯಾಗಿದ್ದರು. ಜಮ್ಮು ಮತ್ತು ಕಾಶ್ಮೀರ, ಅಸ್ಸಾಂ, ಗಾಜಿಯಾಬಾದ್ ಮತ್ತು ದೆಹಲಿಯಲ್ಲಿ ಸೇವೆ ಸಲ್ಲಿಸಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.ಪ್ಯಾರಾ ಜಂಪ್ ವಿಭಾಗದಲ್ಲಿ ಕಳೆದ ಒಂದೂವರೆ ತಿಂಗಳಿಂದ ಆಗ್ರಾದ ತರಬೇತಿ ಕೇಂದ್ರದಲ್ಲಿದ್ದರು. ಕೃಷಿಕ ಕುಟುಂಬದ ಮಂಜುನಾಥ್ 2019 ರಲ್ಲಿ ಅಸ್ಸಾಂನ ಮಹಿಳೆಯನ್ನು ವಿವಾಹವಾಗಿದ್ದರು. ದಂಪತಿ ತಮ್ಮ ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದರು. ಅವರು 16 ವರ್ಷಗಳ ಕಾಲ ವಾಯುಪಡೆಯಲ್ಲಿ ಸೇವೆ ಸಲ್ಲಿಸಿದ್ದರು. ಬೆಳಿಗ್ಗೆ 7 ಮತ್ತು 8 ರ ನಡುವೆ ಕಾರ್ಗೋ ವಿಮಾನದಿಂದ ಸುಮಾರು 18,000 ಅಡಿಗಳಷ್ಟು ಪ್ಯಾರಾ ಜಂಪ್ ತರಬೇತಿ ಅವಧಿಯಲ್ಲಿ ಈ ದುರಂತ ಸಂಭವಿಸಿದೆ. 11 ಜಿಗಿತಗಾರರು ತಮ್ಮ ಸುರಕ್ಷಿತವಾಗಿ ಜಂಪ್ ಮಾಡಿದ್ದರೆ, ಮಂಜುನಾಥ್ ಅವರ ಪ್ಯಾರಾಚೂಟ್ ಸರಿಯಾಗಿ ಕಾರ್ಯನಿರ್ವಹಿಸಲಿಲ್ಲ. ಇದರಿಂದಾಗಿ ಅವರು ಸಾವನ್ನಪ್ಪಿದ್ದರು ಎನ್ನಲಾಗಿದೆ.ಮಂಜುನಾಥ್ ಅವರ ಗ್ರಾಮದಲ್ಲಿ ದುರಂತದ ಛಾಯೆ ಆವರಿಸಿದ್ದು, ಸಂಬಂಧಿಕರು ಹಾಗೂ ಸಮಾಜದ ಬಾಂಧವರು ಸಂತಾಪ ಸೂಚಿಸಿದ್ದಾರೆ.




# ದಾನಿಗಳ ನೆರವು: ಹೈಟೆಕ್ ಆದ ಇಬ್ರಾಹಿಂಪೂರ ಸರ್ಕಾರಿ ಶಾಲೆ

**ಶಿಗ್ಗಾವಿ:** ತಾಲ್ಲೂಕಿನ ಇಬ್ರಾಹಿಂ ಪೂರ ಸರ್ಕಾರಿ ಶಾಲೆ, ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ಅಚ್ಚುಮೆಚ್ಚಿನ ಸುಸಜ್ಜಿತ ಸ್ಥಳವಾಗಿಮಾರ್ಪಟ್ಟಿದೆ. 'ಸರ್ಕಾರಿ ಶಾಲೆಯೆಂದರೆ ಸೌಲಭ್ಯಗಳ ಕೊರತೆ ಸಾಮಾನ್ಯ' ಎಂದು ಹೇಳುವವರ ನಡುವೆ, ಇಬ್ರಾಹಿಂಪೂರದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆ ಹೈಟೆಕ್ ಸ್ಪರ್ಶದೊಂದಿಗೆ ಮಾದರಿ ಶಾಲೆಯಾಗಿ ಕಂಗೊಳಿಸುತ್ತಿದೆ. ಶಾಲೆಯಲ್ಲಿ ಒಂದನೇ ತರಗತಿಯಿಂದ ಏಳನೇ ತರಗತಿಯವರೆಗೆ 117 ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. 6 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಕೆಲ ವರ್ಷಗಳ ಹಿಂದೆ ಶಾಲೆಯುಹಲವು ಸೌಲಭ್ಯಗಳಿಂದ ವಂಚಿತವಾಗಿತ್ತು. ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಿದ್ದ ಗ್ರಾಮಸ್ಥರು, ಶಾಲೆ ಅಭಿವೃದ್ಧಿಪಡಿಸಲು ಪಣ ತೊಟ್ಟಿದ್ದರು. ಅವರ ಇಚ್ಛೆಯಂತೆ ಶಾಲೆ ಇಂದು ಅರ್ಥಪೂರ್ಣವಾಗಿ ರೂಪುಗೊಂಡಿದೆ. ಹಾವೇರಿ ಜಿಲ್ಲೆ ಮಾತ್ರವಲ್ಲದೇ ಹೊರ ಜಿಲ್ಲೆಗಳ ಶಾಲೆಗೂ ಇಬ್ರಾಹಿಂ ಪೂರ ಶಾಲೆಮಾದರಿಯಾಗಿದೆ. ಶಾಲೆಯ ವಾತಾವರಣ, ಮಕ್ಕಳ ಕಲಿಕೆ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಲು ಉತ್ಸಾಹ ತುಂಬುತ್ತಿದೆ. ಶಾಲೆ ಪ್ರವೇಶ ದ್ವಾರದಲ್ಲಿ ಕಾಂಪೌಂಡ್ ನಿರ್ಮಿಸಲಾಗಿದ್ದು, ಅದೇ ಗೋಡೆ ಮೇಲೆ ಬಣ್ಣ ಬಣ್ಣದ ಚಿತ್ರಗಳನ್ನು ಬಿಡಿಸಲಾಗಿದೆ. ಶಿಶುನಾಳದ ಗೋವಿಂ 'ಭಟ್ಟರು ಷರೀಫ್ ಅವರ ಗುರು-ಶಿಷ್ಯ ಪರಂಪರೆ, ಮರಗಳ ರಕ್ಷಣೆ, ರೈತರ ಜೀವನ ಕುರಿತ ಚಿತ್ರಗಳು ಗೋಡೆ ಮೇಲಿವೆ. ಶಾಲೆ ಮುಂಭಾಗದಲ್ಲಿ ಹೋಗುವವರು, ಒಮ್ಮೆ ನಿಂತು-ಕೊಂಡು ಚಿತ್ರಗಳನ್ನು ನೋಡಿಹೋಗುವಷ್ಟು ಸೊಗಸಾಗಿಮೂಡಿವೆ. ಶಾಲೆಯ ಪ್ರವೇಶದಲ್ಲಿ ಮಹಾದ್ವಾರ ನಿರ್ಮಿಸಲಾಗಿದ್ದು, 'ಶಿಕ್ಷಣವೇ ಶಕ್ತಿ; ಅರಿವೇ ಗುರು' ವಾಕ್ಯವನ್ನು ಬರೆಯಲಾಗಿದೆ. ಶಾಲೆಯೊಳಗೆ ಮೊದಲ ಹೆಜ್ಜೆ ಇರಿಸುತ್ತಿದ್ದಂತೆ, ವಿವಿಧ ಬರಹಗಳು ಸ್ವಾಗತ ಕೋರುತ್ತವೆ. ನಂತರ, ಶಾಲೆಯ ಆವರಣದಲ್ಲಿ ಉದ್ಯಾನವಿದೆ. ತೆಂಗು, ಅಡಿಕೆ ಸೇರಿದಂತೆ ವಿವಿಧ ಔಷಧೀಯ ಸಸ್ಯಗಳನ್ನು ಬೆಳೆಸಲಾಗಿದೆ.

ಪ್ರತಿ ಗಿಡಗಳಿಗೆ ನದಿಗಳು ಮತ್ತು ಮಹಾತ್ಮರ ಹೆಸರು ನಾಮಕರಣಮಾಡಲಾಗಿದೆ. ಗಿಡಗಳ ಸಂ ರಕ್ಷಣೆ ಜವಾಬ್ದಾರಿಯನ್ನು ವಿದ್ಯಾರ್ಥಿ ಗಳಿಗೆ ನೀ ಡಲಾಗಿದೆ. ಕಲಿಕೆಯ ಜೊತೆಯಲ್ಲಿ ವಿದ್ಯಾರ್ಥಿಗಳು, ಗಿಡಗಳ ಪೋಷಣೆಮಾಡುತ್ತ ಪರಿಸರ ಜಾಗೃತಿಮೂಡಿಸುತ್ತಿದ್ದಾರೆ.






ಶಾಲೆಯ ಆವರಣದಲ್ಲಿ ಸರಸ್ವತಿ ದೇವಿ, ಸ್ವಾಮಿ ವಿವೇಕಾನಂದ, ಡಾ.ಬಿ.ಆರ್. ಅಂಬೇಡ್ಕರ್, ಮಹಾತ್ಮಾ ಗಾಂಧೀಜಿ ಅವರಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗಿದೆ.ಶಿಗ್ಗಾವಿ ತಾಲ್ಲೂಕಿನ ಇಬ್ರಾಹಿಂಪೂರ ಸರ್ಕಾರಿ ಶಾಲೆಯೊಳಗೆ ಉದ್ಯಾನದಲ್ಲಿರುವ ಸರಸ್ವತಿ ದೇವಿಮೂರ್ತಿ ಸಾವಿತ್ರಿಬಾಯಿ ಫುಲೆ, ವಿಶ್ವಗುರು ಬಸವಣ್ಣ, ಸುಭಾಸಚಂದ್ರ ಭೋಸ್, ಭಗತ್ ಸಿಂಗ್, ಚಂದ್ರಶೇಖರ ಆಜಾದ್, ವಲ್ಲಭಬಾಯಿ ಪಟೇಲ ಅವರ ಚಿತ್ರಗಳು ಗೋಡೆ ಮೇಲೆ ರಾರಾಜಿಸುತ್ತಿವೆ. ವಿಧಾನಸೌಧ, ಹೈಕೋರ್ಟ್ , ತಾಜಮಹಲ್, ಕೆಂಪುಕೋಟೆ, ಅರಮನೆ, ಇಂಡಿಯಾಗೇಟ್, ಹಂಪಿಯ ಕಲ್ಲಿನ ರಥ, ಪುರಾಣ ಕಥೆಗಳು ಸೇರಿದಂತೆ ವಿವಿಧ ಚಿತ್ರಗಳೂ ಕಾಣಸಿಗುತ್ತವೆ. ಇವೆಲ್ಲವನ್ನೂ ನೋಡುತ್ತಲೇ ಮಕ್ಕಳು ಬೆಳೆಯುತ್ತಿದ್ದಾರೆ. ಶಾಲೆ ಆವರಣದಲ್ಲಿ ಪುರಾತನ ಸಿದ್ದೇಶ್ವರ ದೇವಸ್ಥಾನವಿದ್ದು, ನಿತ್ಯವೂ ಮಕ್ಕಳು ದೇವರಿಗೆ ನಮಸ್ಕರಿಸಿ ಶಾಲೆಯೊಳಗೆಹೋಗುತ್ತಿದ್ದಾರೆ.ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹೈಟೆಕ್ ಸೌಲಭ್ಯದ ಶೌಚಾಲಯ ನಿರ್ಮಿಸಲಾಗಿದೆ. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಸಹಮಾಡಲಾಗಿದೆ. ದಿನದ 24 ಗಂಟೆಯೂಶಾಲೆ ಹೊರ ಭಾಗ ಹಾಗೂ ಒಳಭಾಗದ ದೃಶ್ಯಗಳು ಸೆರೆಯಾಗುವಂತೆ ಸಿ.ಸಿ.ಟಿ.ವಿ ಕ್ಯಾಮೆರಾ ಅಳವಡಿಸಲಾಗಿದೆ. ಪ್ರೊಜೆಕ್ಟರ್ ಸಹಾಯದಿಂದ ಮಕ್ಕಳಿಗೆ ದೃಶ್ಯ ರೂಪದ ಪಾಠಗಳನ್ನು ತೋರಿಸಲಾಗುತ್ತಿದೆ.



## ಉದ್ಯೋಗ ಮೇಳಗಳಲ್ಲಿ ಆಯ್ಕೆಯಾದವರಿಗೆ ಯೋಗ್ಯ ವೇತನ ನಿಗದಿಪಡಿಸಿ

**ಮಲೇಬೆನ್ನೂರು :** ಹಳ್ಳಿಗಳಲ್ಲಿ ಪ್ರಸ್ತುತವಾಗಿ ವಿದ್ಯಾವಂತರು ಹೆಚ್ಚಾಗಿದ್ದಾರೆ. ಇಂತಹ ಪ್ರದೇಶಗಳಲ್ಲಿ ಉದ್ಯೋಗ ಮೇಳ ಆಯೋಜಿಸಿರುವುದು ಯೋಗ್ಯವಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಯೋಗ್ಯ ವೇತನ ನಿಗದಿಪಡಿಸಬೇಕು ಎಂದು ಮಾಜಿ ಸಂಸದ ಜಿ ಎಂ ಸಿದ್ದೇಶ್ವರ ಬಾಗವಹಿಸಿದ ಕಂಪನಿಗಳಿಗೆ ತಿಳಿಸಿದರು. ಸಮೀಪದ ಭಾನುವಳ್ಳಿ ಗ್ರಾಮದಲ್ಲಿ ಶ್ರೀಶೈಲ ಎಜುಕೇಷನ್ ಟ್ರಸ್ಟ್ (ರಿ) ಶ್ರೀ ಜಿ ಮಲ್ಲಿಕಾರ್ಜುನಪ್ಪ ಮತ್ತು ಶ್ರೀಮತಿ ಹಾಲಮ್ಮ ಚಾರಿಟಿ ಪೌಂಡೇಶನ್ ಮತ್ತು ಸ್ನೇಹ ಸಂಭ್ರಮ ಗೆಳೆಯರ ಬಳಗ ಭಾನುವಳ್ಳಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ನಡೆದ ಬೃಹತ್ ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿದರು.ಈ ವರೆಗೆ ದಾವಣಗೆರೆ ಜಿಲ್ಲೆಗಳಲ್ಲಿ ಇಂತಹ ಉದ್ಯೋಗ ಮೇಳಗಳಲ್ಲಿ 3532 ಅಬ್ಯಾರ್ಥಿಗಳು ಆಯ್ಕೆಯಾಗಿ ತಮ್ಮ ಜೀವನ ನಡೆಸುತ್ತಿದ್ದಾರೆ. ಇಂದು ಸಹ 30 ಕಂಪನಿಗಳು ಬಾಗವಹಿವೆ.1600 ಅಭ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದಾರೆ. ಅವರೆಲ್ಲ ಆಯ್ಕೆಯಾಗಿ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು. ಉದ್ಯೋಗ ಸೃಷ್ಠಿಯಿಂದ ಯುವಕರಿಗೆ ಉದ್ಯೋಗಾವಕಾಶ ಹೆಚ್ಚಾಗುತ್ತದೆ. ಇಂದು ಜಿಎಂಐಟಿ ಸಹಕಾರವಿದೆ. ಯುವಕ,ಯುವತಿಯರು ಉದ್ಯೋಗಸ್ಥರಾದರೆ ಕುಟುಂಬ ಸಮಾಜ,ದೇಶ ಸಮೃದ್ಧಿಯಾಗುತ್ತದೆ. ಇಂದು ಉದ್ಯೋಗ ಪಡೆದವರಿಗೆ ಒಳಿತಾಗಲಿ. ಇಲ್ಲಿ ರಾಜಕೀಯ ವಿಚಾರ ಮಾತನಾಡವ ವೇದಿಕೆ ಇದಲ್ಲ ಹೀಗಾಗಿ ಬೇರೆ ವಿಷಯ ಮಾತನಾಡುವುದಿಲ್ಲ ಎಂದು ಶಾಸಕ ಬಸವನಗೌಡ ಯತ್ನಾಳ್ ಭಾಷಣವನ್ನು ಮೊಟಕುಗೊಳಿಸಿದರು. ಉದ್ಯೋಗಂ ಪುರುಷ ಲಕ್ಷಣಂ ಎಂಬುದೀಗ ಬದಲಾಗಿ ಯುವಕ,ಯುವತಿಯರು ವಿದ್ಯಾವಂತರಾಗಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗ ಮೇಳಗಳು ನಡೆಸುತ್ತಿರುವುದು ಸೂಕ್ತವಾಗಿದೆ ಎಂದು ಶಾಸಕ ಬಿಪಿ ಹರೀಶ್ ತಿಳಿಸಿದರು.

ಪ್ರಾಸ್ತಾವಿಕವಾಗಿ ಸ್ನೇಹ ಸಂಭ್ರಮ ಗೆಳೆಯರ ಬಳಗದ ಅಧ್ಯಕ್ಷ ಹೆಚ್ ಎಂ ಶಿವಕುಮಾರ್ ಮಾತನಾಡಿದರು.ನಂತರ ಆಗಮಿಸಿದ ಮಾಜಿ ಶಾಸಕ ಹೆಚ್ ಎಸ್ ಶಿವಶಂಕರ್ ಆಯ್ಕೆಯಾದ ಅಭ್ಯರ್ಥಿಗಳಿಗೆ ಉದ್ಯೋಗ ಪತ್ರ ವಿತರಿಸಿ ಮಾತನಾಡಿದರು.ದಾವಣಗೆರೆಯ ಸಿಟಿ ಸೆಂಟ್ರಲ್ ಹಾಸ್ಪಿಟಲ್ ಪ್ರೈ ಲಿಮಿಟೆಡ್ ವತಿಯಿಂದ ಉಚಿತ ಆರೋಗ್ಯ ತಪಾಸಣೆ ವ್ಯವಸ್ಥೆ ಮಾಡಲಾಗಿತ್ತು. ರಾಯಚೂರು ಮಾಜಿ ಸಂಸದ ಭಗವಂತ ನಾಯ್ಕ,ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಹನಗವಾಡಿ ವೀರೇಶ್, ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಲಿಂಗರಾಜ್ ಅಣ್ಣೇಶ್ ,ಭಾನುವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ವೆಂಕಟೇಶ್ ರೆಡ್ಡಿ , ಗೌರವ ಅಧ್ಯಕ್ಷೆ ತೇಜಸ್ವಿ ಕಟ್ಟಿಮನಿ, ಉಪಾಧ್ಯಕ್ಷ ಈ ವಿಶ್ವನಾಥಯ್ಯ, ಪ್ರಧಾನ ಕಾರ್ಯದರ್ಶಿ ಡಿ ಆರ್ ರಾಮನಗೌಡ, ಸಹಕಾರ್ಯದರ್ಶಿ ವೈ ನಾಗರಾಜ್, ಸಂಘಟನಾ ಕಾರ್ಯದರ್ಶಿ ಆರ್ ಬಿ ಪಕ್ಕಿರಪ್ಪ ಸುತ್ತಮುತ್ತಲಿನ ಗ್ರಾಮಗಳ ಉದ್ಯೋಗಾವಕಾಂಕ್ಷಿಗಳು, ಗ್ರಾಮಸ್ಥರು ಇದ್ದರು.



# ಆರೋಗ್ಯವೇ ಶ್ರೇಷ್ಠ, ಇದರಿಂದ ದಾನ, ಜ್ಞಾನದ ಶ್ರೇಷ್ಠತೆ ಕಾಣಬಹುದು: ಮಾದುಸ್ವಾಮಿ

**ಮಲೇಬೆನ್ನೂರು:** ಬಡವರ ಸೇವೆಯ ಮೂಲಕ ದೇವರನ್ನು ಕಾಣಬೇಕು. ದಾನ, ಜ್ಞಾನ ಶ್ರೇಷ್ಠ ಎಂಬ ಭಾವನೆಯಿತ್ತು. ಈ ಆರೋಗ್ಯವು ಶ್ರೇಷ್ಠವಾಗಿದೆ. ಆರೋಗ್ಯ ಚೆನ್ನಾಗಿದ್ದರೆ ದಾನ, ಜ್ಞಾನ ಎಲ್ಲವೂ ಸಾಧ್ಯ ಎಂದು ಮಾಜಿ ಸಚಿವ ಜೆ ಸಿ ಮಾಧುಸ್ವಾಮಿ ತಿಳಿಸಿದರು.ಸಮೀಪದ ಉಕ್ಕಡಗಾತ್ರಿ ಅಜ್ಜಯ್ಯನ ಮಹಾ ಶಿವರಾತ್ರಿ ಜಾತ್ರಾ ಮಹೋತ್ಸವದ ಅಂಗವಾಗಿ ಎಸ್ ಎಸ್ ಕೇರ್,ಜೆಜೆಎಂ ವೈದ್ಯಕೀಯ ಮಹಾವಿದ್ಯಾಲಯ, ಬಾಪೂಜಿ ಆಸ್ಪತ್ರೆ ಮತ್ತು ಮೆಡಿಕಲ್ ಸೈನ್ಸ್ ಮತ್ತು ಶ್ರೀ ಕರಿಬಸವೇಶ್ವರ ಗದ್ದುಗೆ ಟ್ರಸ್ಟ್ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಪರೋಪಕಾರಂ ಇದಂ ಶರೀರಂ ಎಂಬಂತಿದೆ. ಬೃಹತ್ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಂಡಿರುವುದು ಸಂತೋಷಕರ ಎಂದು ಅಭಿಪ್ರಾಯಪಟ್ಟರು.

ಇಂದಿನ ಕಾಲದಲ್ಲಿ ಆರೋಗ್ಯಕ್ಕೆ ಆದ್ಯತೆ ನೀಡಬೇಕಾಗಿದೆ. ದಾವಣಗೆರೆ ಜಿಲ್ಲೆಯ ಮುತ್ಸದ್ದಿಗಳು ಶಾಸಕರು ಆದ ಶಾಮನೂರು ಶಿವಶಂಕರಪ್ಪ ತಮ್ಮ ಟ್ರಸ್ಟ್ ವತಿಯಿಂದ ವಾರ್ಷಿಕ 20 ಕೋಟಿ ರೂಗಳನ್ನು ಉಚಿತ ಆರೋಗ್ಯ ಶಿಬಿರ ಮತ್ತು ಉಚಿತ ಚಿಕಿತ್ಸೆಗಾಗಿ ಮೀಸಲಿಟ್ಟಿದ್ದಾರೆ. ಇಂತಹ ಯೋಜನೆಗಳನ್ನು ನಾವು ನೀವೆಲ್ಲರೂ ಸದುಪಯೋಗ ಪಡಿಸಿಕೊಳ್ಳಬೇಕು. ಎಲ್ಲಾ ಭಾಗ್ಯಗಳ ನೋಡಬೇಕೆಂದರೆ ನಮಗೆ ಆರೋಗ್ಯ ಭಾಗ್ಯ ಬೇಕು ಎಂದು ಪ್ರಾಸ್ತಾವಿಕವಾಗಿ ದೇವಸ್ಥಾನ ಟ್ರಸ್ಟ್ ಕಮೀಟಿ ಕಾರ್ಯದರ್ಶಿ ಎಸ್ ಸುರೇಶ್ ಮಾತನಾಡಿದರು.

ಮುಖಂಡ ಜಿಗಳಿ ಇಂದೂಧರ ಮಾತನಾಡಿದರು. ಜಾತ್ರಾ ಮಹೋತ್ಸವದ ಅಂಗವಾಗಿ ಅಜ್ಜಯ್ಯನಿಗೆ ಅಭಿಷೇಕ, ವಿಶೇಷ ಪೂಜೆ, ಪೂಜಾಲಂಕಾರ ಮಾಡಲಾಗಿತ್ತು. ಮಾಜಿ ಮಂತ್ರಿ ಜೆಸಿ ಮಾದುಸ್ವಾಮಿ ಮತ್ತು ಪತ್ನಿ ತ್ರಿವೇಣಿ ದಂಪತಿಗಳು ಅಜ್ಜಯ್ಯನ ದರ್ಶನ ಪಡೆದರು.ಶಿಬಿರದಲ್ಲಿ ಚರ್ಮರೋಗ, ಪ್ರಸೂತಿ ಮತ್ತು ಸ್ತ್ರೀರೋಗ, ಕಣ್ಣು, ಕೀಲು, ಮೂಳೆ, ಮಕ್ಕಳ ತಜ್ಞರು ಭಾಗವಹಿಸಿದ್ದರು. ಉಚಿತ ಔಷಧಿ ವಿಭಾಗ, ಬಿಪಿ, ಶುಗರ್ ತಪಾಸಣೆ ಒಳಗೊಂಡಿತ್ತು. ಎಸ್ ಎಸ್ ಕೇರ್ ಕೋ ಆರ್ಡಿನೇಟರ್ ಹರೀಶ್,ಜೆಜೆಎಂ ಆಸ್ಪತ್ರೆ ಪ್ರೋಪೇಸರ್ ಡಾ ಪ್ರಶಾಂತ್ ಒಳಗೊಂಡಂತೆ 80 ಜನ ತಜ್ಞರತಂಡ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿದ್ದರು.

ವಕೀಲ ನಂದಿತಾವರೆ ತಿಮ್ಮನ ಗೌಡ್ರು, ಟ್ರಸ್ಟಿ ಗದ್ದಿಗಯ್ಯ ಪಾಟೀಲ್ ಮತ್ತು ಟ್ರಸ್ಟ್ ಕಮೀಟಿ ಪದಾಧಿಕಾರಿಗಳು ಇದ್ದರು.



> ಇಂದಿನ ಕಾಲದಲ್ಲಿ ಆರೋಗ್ಯಕ್ಕೆ ಆದ್ಯತೆ ನೀಡಬೇಕಾಗಿದೆ. ದಾವಣಗೆರೆ ಜಿಲ್ಲೆಯ ಮುತ್ಸದ್ದಿಗಳು ಶಾಸಕರು ಆದ ಶಾಮನೂರು ಶಿವಶಂಕರಪ್ಪ ತಮ್ಮ ಟ್ರಸ್ಟ್ ವತಿಯಿಂದ ವಾರ್ಷಿಕ 20 ಕೋಟಿ ರೂಗಳನ್ನು ಉಚಿತ ಆರೋಗ್ಯ ಶಿಬಿರ ಮತ್ತು ಉಚಿತ ಚಿಕಿತ್ಸೆಗಾಗಿ ಮೀಸಲಿಟ್ಟಿದ್ದಾರೆ. ಇಂತಹ ಯೋಜನೆಗಳನ್ನು ನಾವು ನೀವೆಲ್ಲರೂ ಸದುಪಯೋಗ ಪಡಿಸಿಕೊಳ್ಳಬೇಕು.
> **–ಜೆ.ಸಿ.ಮಾಧುಸ್ವಾಮಿ**, ಮಾಜಿ ಸಚಿವ.



## ರಿಯಲ್ ಮೀಡಿಯಾ ಅಂಗ ಸಂಸ್ಥೆ "ಗುರಾನಿ ಎಸ್ಟೇಟ್ಸ್"

**ಬೆಂಗಳೂರು :** ಸೌತ್ ನ ವ್ಯಾಪ್ತಿಗೆ ಸೇರಿದ ಜೆಪಿ ನಗರ, ಬಿಟಿಎಂ ಲೇಔಟ್,ಇಲೆಕ್ಟ್ರಾನಿಕ್ ಸಿಟಿ, ಬನ್ನೇರುಘಟ್ಟ ರೋಡ್, ಕನಕಪುರ ರೋಡ್, ಹೊಸೂರ್ ರೋಡ್,ಅಕ್ಷಯ ನಗರ ಇವುಗಳ ಸುತ್ತಮುತ್ತಲಿನ ಏರಿಯಾಗಳಲ್ಲಿ ನೀವು ಹೊಂದಿರುವ ಅಪಾರ್ಟಮೆಂಟ್, ವಿಲ್ಲಾದ ತಮ್ಮ ಸ್ವಂತ ಮನೆಯ ನಿರ್ವಹಣಾ ಕಾರ್ಯ (PROPERTY MANAGEMENT), ಲೀಸ್ , ಮಾರಾಟ,ಬಾಡಿಗೆ,ಇನ್ನು ಅನೇಕ ಕಾರ್ಯವನ್ನು ಸಮರ್ಥವಾಗಿ ,ಸುಸ್ಥಿರವಾಗಿ,ಪ್ರಾಮಾಣಿಕವಾಗಿ ನಿರ್ವಹಿಸುತ್ತಾ ಬರುತ್ತಿದೆ . ಹೊರ ದೇಶದಲ್ಲಿರುವ (ಓಖಖ) ,ನಿಮ್ಮ ಬಂಧು ಬಳಗ,ಸ್ನೇಹಿತರು ಹೊಂದಿರುವ ಆಸ್ತಿಗಳ ನಿರ್ವಹಣೆ ತುಂಬಾ ಜವಾಬ್ದಾರಿ,ಕಾಳಜಿ ವಹಿಸುವ ಆಶಯ ಹೊಂದಿರುವ ಸಂಸ್ಥೆಯಾಗಿದೆ ಈ ನಿಟ್ಟಿನಲ್ಲಿ ತಮ್ಮ ಸಹಕಾರ,ಸಲಹೆಯ ನಿರೀಕ್ಷೆ ಬಯಸಿ ಈ ವಿನಂತಿ +919901305115. ಸಿದ್ದಾಂತ ಎನ್ ಗುಜ್ಜರ್ +919620506393 ನಾಗರಾಜ್ ಎನ್ ಗುಜ್ಜರ್ +91 77603 96892 ಗುರಾನಿ ಎಸ್ಟೇಟ್



## ಕಸಾಪ ಸಮ್ಮೇಳನ : ಸತ್ಯನಾರಾಯಣ, ಚಂದ್ರಕಲಾಗೆ ಸಾಹಿತ್ಯಸಿರಿ ಪ್ರಶಸ್ತಿ

**ಚಿಕ್ಕಮಗಳೂರು:** ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮಾರ್ಚ್ 7 ಮತ್ತು 8ರಂದು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು ತರೀಕೆರೆಯ ಬಯಲು ರಂಗಮಂದಿರದಲ್ಲಿ ನಡೆಯಲಿದೆ.



ಈ ಸಮ್ಮೇಳನದಲ್ಲಿ ಸಾಹಿತ್ಯ ಸಿರಿ ಪ್ರಶಸ್ತಿಯನ್ನು ಜಿಲ್ಲೆಯಲ್ಲಿ ಸಾಹಿತ್ಯ ಕ್ಷೇತ್ರದ ಸಾಧನೆಗೈದ ಎಚ್.ಎಸ್. ಸತ್ಯನಾರಾಯಣ ಹಾಗೂ ಕೊಪ್ಪ ತಾಲೂಕಿನ ಸಾಹಿತಿ ಎಸ್.ಎನ್. ಚಂದ್ರಕಲಾ ಇವರಿಗೆ ನೀಡಲಾಗುವುದು. ಪ್ರಶಸ್ತಿ ಫಲಕ ಹಾಗೂ ತಲಾ 5000 ನಗದು ಸಹಿತ ಈ ಬಾರಿ ಸಾಹಿತ್ಯ ಸಿರಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸೂರಿ ಶ್ರೀನಿವಾಸ್ ತಿಳಿಸಿದರು.

## ಸರ್ಕಾರದ ಸೌಲಭ್ಯ ಪಡೆದು ಮೀನುಗಾರರು ಆರ್ಥಿಕ ಸದೃಢರಾಗಬೇಕು : ಹೆಚ್.ಡಿ.ತಮ್ಮಯ್ಯ

**ಚಿಕ್ಕಮಗಳೂರು:** ಸರ್ಕಾರ ನೀಡುವ ಸಲಕರಣೆಗಳನ್ನು ಸದುಪಯೋಗಪಡಿಸಿಕೊಂಡು ಮೀನುಗಾರರು ಆರ್ಥಿಕ ಸದೃಢರಾಗಿ, ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಬೇಕು ಎಂದು ಶಾಸಕ ಎಚ್.ಡಿ.ತಮ್ಮಯ್ಯ ಸಲಹೆ ಮಾಡಿದರು.

ಅವರು ಮೀನುಗಾರಿಕೆ ಇಲಾಖೆ ವತಿಯಿಂದ ನೀಡಲಾಗುವ ವಿವಿಧ ಸಲಕರಣೆಗಳನ್ನು ಮೀನುಗಾರ ಫಲಾನುಭವಿಗಳಿಗೆ ವಿತರಿಸಿ ನಂತರ ಮಾತನಾಡಿದರು.

ರೈತರಂತೆಯೇ ಮೀನುಗಾರರು ಜನತೆಗೆ ಆಹಾರವನ್ನು ಪೂರೈಕೆ ಮಾಡುವ ಕೆಲಸ ಮಾಡುತ್ತಾರೆ ಅವರ ಜೀವ ರಕ್ಷಣೆಗೂ ಸರ್ಕಾರ ಕ್ರಮವಹಿಸಬೇಕಾಗಿರುವುದು ಸರ್ಕಾರದ ಹೊಣೆಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ ತಾವೇ ಮೊದಲು ಈ ವಿಷಯವನ್ನು ಸರ್ಕಾರದ ಗಮನಕ್ಕೆ ತಂದ ನಂತರ ರಾಜ್ಯದಾದ್ಯಂತ ಎಲ್ಲಾ ಮೀನುಗಾರರಿಗೆ ಜೀವರಕ್ಷಕ ಜಾಕೆಟ್‌ಗಳನ್ನು ವಿತರಿಸುವ ಕಾರ್ಯ ಆರಂಭವಾಯಿತು ಎಂದರು.

ತೆಪ್ಪ, ದೋಣಿ, ಬಲೆ ಮತ್ತು ಲೈಫ್ ಜಾಕೆಟ್‌ಗಳನ್ನು ವಿತರಿಸಲಾಗುತ್ತಿದೆ ಎಂದರು.



## ಆಕಸ್ಮಿಕ ಬೆಂಕಿ ಅವಘಡ ಮನೆ ಸಂಪೂರ್ಣ ಭಸ್ಮ

**ಚಿಕ್ಕಮಗಳೂರು:** ಜಿಲ್ಲೆಯ ಮೂಡಿಗೆರೆ ತಾಲೂಕು ಮಾಳಿಗನಾಡು ಗ್ರಾಮದಲ್ಲಿ ಆಕಸ್ಮಿಕ ಬೆಂಕಿ ಅವಘಡ ಸಂಭವಿಸಿ ಮನೆ ಸಂಪೂರ್ಣ ಸುಟ್ಟು ಕರಕಲಾಗಿದೆ.

ಈ ದುರ್ಘಟನೆಯಲ್ಲಿ ಮನೆಯಲ್ಲಿ ಇದ್ದ ಗೃಹಪಯೋಗಿ ವಸ್ತುಗಳು ಬಹುತೇಕ ನಾಶವಾಗಿದ್ದು, ಹತ್ತಾರು ಮೂಟೆ ಕಾಫಿ ಬೀಜಗಳೂ ಬೆಂಕಿಗಾಹುತಿಯಾಗಿವೆ.

ಮೂಡಿಗೆರೆಯ ಮಾಳಿಗನಾಡು ಗ್ರಾಮದ ಸುನೀಲ್ ಎಂಬುವವರ ಮನೆಯಲ್ಲಿ ಈ ಅವಘಡ ಸಂಭವಿಸಿದೆ. ಅಗ್ನಿ ಅವಘಡದಲ್ಲಿ ಮನೆಯಲ್ಲಿ ಇದ್ದ ರೇಖಾ (36) ತೀವ್ರವಾಗಿ ಗಾಯಗೊಂಡಿದ್ದು ಸ್ಥಿತಿ ಗಂಭೀರವಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ.

**ಅಡಿಗೆಗೆ ಸ್ಟವ್ ಹಚ್ಚುವಾಗ ಅವಘಡದ ಶಂಕೆ :** ಅಡಿಗೆಗೆ ಸ್ಟವ್ ಹಚ್ಚುವ ವೇಳೆ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡಿರುವ ಶಂಕೆ ವ್ಯಕ್ತವಾಗಿದ್ದು, ಅಗ್ನಿಶಾಮಕ ದಳದವರು ಸ್ಥಳಕ್ಕಾಗಮಿಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಾಳೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ದಾಖಲಾಗಿದೆ. ಪೊಲೀಸರು ಸ್ಥಳಕ್ಕೆ ಭೇಟಿ ನೀಟಿ ಪರಿಶೀಲನೆ ನಡೆಸಿದ್ದಾರೆ.



# ಜೈಪುರ ಗ್ರಾಮದಲ್ಲಿ ವೀರಯೋಧ ದೀಪಕ್ ಸ್ಮಾರಕ ಲೋಕಾರ್ಪಣೆ



**ತರೀಕೆರೆ:** ತಾಲ್ಲೂಕಿನ ತಿಗಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜೈಪುರ ಗ್ರಾಮದಲ್ಲಿ ವೀರಯೋಧ ಐ.ಟಿ.ಬಿ.ಪಿ–ಎನ್.ಎಸ್.ಜಿ. ಬ್ಲಾಕ್ ಕ್ಯಾಟ್ ಕಮಾಂಡೋ ದಿ.ಕೆ.ದೀಪಕ್‌ರವರ ಸ್ಮಾರಕವನ್ನು ಲೋಕಾರ್ಪಣೆಗೊಳಿಸಲಾಯಿತು.

ವೀರಯೋಧ ದೀಪಕ್‌ರವರ ತಂದೆ ಟಿ.ಕೃಷ್ಣಮೂರ್ತಿ ಮತ್ತು ತಾಯಿ ಭುವನೇಶ್ವರಿಯವರ ಉಪಸ್ಥಿತಿಯಲ್ಲಿ ಸ್ಮಾರಕ ಕಟ್ಟಡದ ಉದ್ಘಾಟನೆಯನ್ನು ಕೆ.ಡಿ.ಪಿ ಸದಸ್ಯೆ ರಚನಾ ಶ್ರೀನಿವಾಸ್ ನೆರವೇರಿಸಿ ಮಾತನಾಡುತ್ತಾ ದಿ.ಕೆ.ದೀಪಕ್‌ರವರು ಭಾರತೀಯ ಸೇನೆಯಲ್ಲಿ ಉತ್ತಮ ಸೇವೆ ಸಲ್ಲಿಸಿದ್ದಾರೆ. ಅವರ ವ್ಯಕ್ತಿತ್ವವನ್ನು ಸುತ್ತಮುತ್ತಲ ಎಲ್ಲಾ ಗ್ರಾಮಸ್ಥರು ಮುಕ್ತ ಕಂಠದಿಂದ ಹೊಗಳುತ್ತಿದ್ದಾರೆ ಎಂದರು.

ಅವರು ಭಾರತೀಯ ಸೇನೆಯಲ್ಲಿ ಉನ್ನತ ಸೇವೆ ಸಲ್ಲಿಸುವ ಆಸಕ್ತಿ ಇತ್ತು, ಆದರೆ ದುರಾದೃಷ್ಟವಶಾತ್ ರಸ್ತೆ ಅಪಘಾತದಲ್ಲಿ ನಿಧನರಾಗಿ ದೇಶಕ್ಕೆ ತುಂಬಲಾರದ ನಷ್ಟವಾಗಿದೆ. ಯುವಕರು ದೀಪಕ್ ರವರ ಆದರ್ಶವನ್ನು ಮೈಗೂಡಿಸಿಕೊಂಡು ದೇಶಕ್ಕೆ ಕೀರ್ತಿ ತರುವಂತಹ ಮನಸ್ಥಿತಿಯಲ್ಲಿ ಬೆಳೆಯಬೇಕು ಎಂದು ತಿಳಿಸಿದರು.

ಮುಖಂಡ ಆರ್.ಸತ್ಯಪ್ಪ ಮಾತನಾಡಿ, ದೀಪಕ್ ತುಂಬು ಹೃದಯದ ಯುವಕರಾಗಿ ನಮ್ಮ ಮುಂದೆ ಬೆಳೆದಂತ ಪ್ರತಿಭೆಯಾಗಿದ್ದ. ಈತ ಆತನಿಗೆ ಕ್ರೀಡೆಯಲ್ಲಿ ತುಂಬಾ ಆಸಕ್ತಿ ಇತ್ತು. ಸೇನೆಯಿಂದ ರಜೆಗೆ ಊರಿಗೆ ಬಂದಾಗ ಯುವಕರನ್ನು ಒಗ್ಗೂಡಿಸಿಕೊಂಡು ಕ್ರೀಡೆಯಲ್ಲಿ ಬೆರೆಯುತ್ತಿದ್ದ, ಕಷ್ಟದಲ್ಲಿದ್ದ ಯುವಕರಿಗೆ ಸಹಾಯವನ್ನು ಮಾಡುತ್ತಿದ್ದ, ಅಂತ ಯುವಕ ಇಂದು ಈಗಿನ ಯುವ ಜನತೆಗೆ ಮಾದರಿಯಾಗಿದ್ದಾರೆ. ಯುವಕರು ಈತನ ಆದರ್ಶವಾಗಿ ಬೆಳೆಸಿಕೊಳ್ಳಬೇಕೆಂದು ಹೇಳಿದರು. ತರೀಕೆರೆ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ದೇವೇಂದ್ರಪ್ಪ ಮಾತನಾಡಿ, ತಣಿಗೆಬೈಲು ಗ್ರಾಮದಲ್ಲಿ ಜನಿಸಿ ಭಾರತೀಯ ಸೇನೆಯಲ್ಲಿ ಉನ್ನತ ಹುದ್ದೆ ಪಡೆಯುವುದು ಅಷ್ಟು ಸುಲಭದ ಕೆಲಸವಲ್ಲ, ದೀಪಕ್ ತನ್ನ ಪರಿಶ್ರಮದಿಂದ ಉನ್ನತ ಹುದ್ದೆಯನ್ನು ಪಡೆದು ತಣಿಗೆಬೈಲು ಗ್ರಾಮ ಒಂದಕ್ಕೆ ಅಲ್ಲದೆ ತರೀಕೆರೆ ತಾಲೂಕಿಗೆ ಉತ್ತಮ ಹೆಸರನ್ನು ತಂದಿದ್ದಾರೆಂದು. ಅತಿ ಚಿಕ್ಕ ವಯಸ್ಸಿನಲ್ಲಿ ನಿಧನರಾಗಿದ್ದು, ಮನಸ್ಸಿಗೆ ತುಂಬಾ ನೋವನ್ನುಂಟು ಮಾಡಿದೆ ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಇಲಾಖೆಯ ಅಧಿಕಾರಿ ಚರಣ್‌ರಾಜ್ ಮಾತನಾಡಿ, ಕೆ.ದೀಪಕ್‌ರವರ ತಾಯಿ ನಮ್ಮ ಇಲಾಖೆಯಲ್ಲಿ ತಣಿಗೆಬೈಲು ಜಯಪುರ ಗ್ರಾಮದಲ್ಲಿ ಅಂಗನವಾಡಿ ಕಾರ್ಯಕರ್ತೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕೆ.ದೀಪಕ್‌ರವರು ಭಾರತೀಯ ಸೇನೆಯಲ್ಲಿ ಕೆಲಸ ಮಾಡುತ್ತಿದ್ದರಿಂದ ನನಗೆ ಇತ್ತೀಚಿಗೆ ಅಷ್ಟೇ ತಿಳಿಯಿತು. ಇಂಥ ಒಂದು ಚಿಕ್ಕ ಹಳ್ಳಿಯಲ್ಲಿ ಜನಿಸಿ ಭಾರತೀಯ ಸೇನೆಯ ಅತ್ಯುನ್ನತ ಹುದ್ದೆಯಲ್ಲಿ ಸೇವೆ ಸಲ್ಲಿಸಿದಂತ ದೀಪಕ್‌ರವರ ಈ ಸ್ಮಾರಕ ಈ ಭಾಗದ ಯುವಕರಿಗೆ ಮಾರ್ಗದರ್ಶಕವಾಗಬೇಕೆಂದು ತಿಳಿಸಿದರು.

# ಶಿಲ್ಪಕಲೆಗಳ ಕೆತ್ತನೆಯಲ್ಲಿ ವಿಶ್ವಕರ್ಮ ಕೊಡುಗೆ ಅಪಾರ



**ಚಿಕ್ಕಮಗಳೂರು:** ಪರಮಾತ್ಮನ ವಿಗ್ರಹ ಹಾಗೂ ಶಿಲ್ಪಕಲೆಗಳ ಕೆತ್ತನೆಯಲ್ಲಿ ವಿಶ್ವಕರ್ಮ ರ ಕೊಡುಗೆ ಅಪಾರ. ಬಂಡೆ ಹಾಗೂ ಮರಗಳಿಂದ ಆರಾಧಿಸುವ ದೈವ ಮೂರ್ತಿಗಳನ್ನು ಕೆತ್ತಲಟ್ಟಿರುವ ಹಿನ್ನೆಲೆಯಲ್ಲಿ ವಿಶ್ವಕರ್ಮರಿಗೆ ರಾಷ್ಟ್ರದಲ್ಲಿ ವಿಶೇಷ ಗೌರವವಿದೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ನಗರದ ಶ್ರೀಲೇಖಾ ಟಾಕೀಸ್ ಸಮೀಪದ ವಿಶ್ವಕರ್ಮ ಸಮುದಾಯ ಭವನದಲ್ಲಿ ಜಿಲ್ಲಾ ವಿಶ್ವಬ್ರಾಹ್ಮಣ ಸಮಾಜ ಸೇವಾಸಭಾದಿಂದ ಹಮ್ಮಿಕೊಂಡಿದ್ದ ಶ್ರೀ ವೈಶ್ಯಕರ್ಮಣ ಮಹಾಯಜ್ಞ, ಸಾಮೂಹಿಕ ಉಪನಯನ ಮತ್ತು ಸಂಘದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾನ್ಯ ಬಂಡೆಯನ್ನು ನೂರಾರು ಹುಳಿಏಟಿನಿಂದ ಕೆತ್ತಿ ಸುಂದರ ರೂಪಕೊಟ್ಟು ದೈವಜ್ಞಾನ ತುಂಬು ವ ಕೈಚಳಕ ವಿಶ್ವಕರ್ಮರಲ್ಲಿದೆ. ಆ ಕೆತ್ತಲ್ಪಟ್ಟಿರುವ ನೂರಾರು ಮೂರ್ತಿಗಳನ್ನು ಮಠ–ಮಂದಿರ, ಮನೆಗಳಲ್ಲಿ ಪ್ರತಿಷ್ಠಾಪಿಸಿ ಕೈಮುಗಿಯುವ ಸಂಸ್ಕೃತಿಗೆ ಪ್ರೇರಿತರು. ಹೀಗಾಗಿ ದೈವದ ಸೇವೆಯಲ್ಲಿ ವಿಶ್ವಕರ್ಮರ ಕೊಡುಗೆ ಶ್ಲಾಘನೀಯ ಎಂದರು.

ಅಮರಶಿಲ್ಪಿ ಜಕಣಾಚಾರಿಯ ಬೇಲೂರು ಹಳೇಬೀಡು ಕೆತ್ತನೆ ನೋಡಲು ಎರಡು ಕಣ್ಣುಗಳು ಸಾಲದು. ಈ ವಿಶಿಷ್ಟ ಶಿಲ್ಪಕಲೆ ಸವಿಯಲು ಪ್ರಪಂಚದ ವಿವಿಧ ಮೂಲೆಗಳಿಂದ ಭೇಟಿ ನೀಡುತ್ತಾರೆ. ಅದರಂತೆ ವಿಜಯ ನಗರ ಸಾಮ್ರಾಜ್ಯ, ಪುರಾತನ ದೇವಾಲಯಗಳಲ್ಲಿ ಯಾವುದೇ ತಾಂತ್ರಿಕತೆ ಇಲ್ಲದ ವೇಳೆಯಲ್ಲಿ ಕೇವಲ ಮೆ ದುಳಿನ ಶಕ್ತಿಯಿಂದಲೇ ಭವ್ಯ ರೂಪು ನೀಡಿದ್ದಾರೆ ಎಂದರು. ಪ್ರಸ್ತುತ ಶ್ರೀಲೇಖಾ ಟಾಕೀಸ್ ಸಮೀಪ ಸಂಘದ ಕಟ್ಟಡವು ಅರ್ಧಬರ್ಧ ಸ್ಥಿತಿಯಲ್ಲಿದೆ. ಈ ಭವನದ ಅಭಿವೃದ್ಧಿಗೆ ನಗರಸಭಾದ ಆಡಳಿತದಲ್ಲಿ ಅನುದಾನವು ಕಾಯ್ದಿರಿಸಿದ್ದು, ಸದ್ಯದಲ್ಲೇ ಅನುದಾನ ಬಿಡುಗಡೆ ಗೊಳಿಸಿ, ಮುಂದಿನ ವಾರ್ಷಿಕೋತ್ಸವ ಕಾರ್ಯಕ್ರಮದ ವೇಳೆಗೆ ಕಟ್ಟಡದ ಸಂಪೂರ್ಣ ಕಾಮಗಾರಿ ಪೂರೈಸಿ ಸಮಾಜಕ್ಕೆ ಅರ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಚನ್ನಗಿರಿಯ ಸಾವಿತ್ರಿ ಪೀಠದ ಶ್ರೀ ಶಂಕರಾತ್ಮನಂದ ಸರಸ್ವತಿ ಮಹಾಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಎಳೆವಯಸ್ಸಿನಿಂದಲೇ ಮಕ್ಕಳಿಗೆ ಸನಾತನ ಸಂಸ್ಕೃತಿಯನ್ನು ಪಾಲಕರು ಬಿತ್ತಿದರೆ, ಭವಿಷ್ಯದಲ್ಲಿ ಹಿಂದೂ ಪರಂಪರೆ, ಸನಾತನ ಧರ್ಮವನ್ನು ಉಳಿಸಿ ಬೆಳೆಸಲು ಸಾಧ್ಯ ಎಂದು ಕರೆ ನೀಡಿದರು.

ವಿಶ್ವಕರ್ಮ ಸಮುದಾಯದಲ್ಲಿ ಹಲವಾರು ಉಪಜಾತಿಗಳಿವೆ. ಎಲ್ಲವೂ ಕೂಡಾ ವಿಶ್ವಕರ್ಮ ಜನಾಂಗದ ಭಾಗವಾಗಿದೆ ಎಂದ ಅವರು ಈ ವೈಶ್ವಕರ್ಮಣ ಯಜ್ಞವು ಲೋಕಕಲ್ಯಾಣಾರ್ಥ ಹಾಗೂ ಜನತೆಯಲ್ಲಿ ಸಾ ಮರಸ್ಯ ಮೂಡಿಸುವ ನಿಟ್ಟಿನಲ್ಲಿ ಜರುಗಿಸಲಾಗಿದೆ ಎಂದು ತಿಳಿಸಿದರು.

ಜಿ.ಪಂ. ಮಾಜಿ ಅಧ್ಯಕ್ಷ ಎ.ಎನ್.ಮಹೇಶ್ ಮಾತನಾಡಿ ಸಣ್ಣ ಸಮಾಜಗಳಲ್ಲಿ ಕಾಳೆಯುವ ಸಂಸ್ಕೃತಿ ಯಿದೆ. ಹೀಗಾಗಿ ಸಮಾಜವನ್ನು ಮುನ್ನೆಲೆಗೆ ತರುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಾಗಿ ಮುನ್ನಡೆದರೆ ಆರ್ಥಿಕ ಮತ್ತುವ ಸದೃಢವಾಗಿ ಸಮಾಜವು ಬೆಳವಣಿಗೆ ಹೊಂದಲು ಸಾಧ್ಯವಾಗಲಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ವಿಶ್ವಬ್ರಾಹ್ಮಣ ಸಮಾಜ ಸೇವಾ ಸಭಾದ ಅಧ್ಯಕ್ಷ ಹೆಚ್.ಆರ್. ಉಮಾಶಂಕರ್ ವಿಶ್ವಕರ್ಮ ಸಮಾಜ ಸ್ಥಾಪನೆಗೆ ಹಲವಾರು ಹಿರಿಯರ ಕೊಡುಗೆಯಿದೆ. ಜೊತೆ ಗೆ ಸಮಾಜದ ಏಳಿಗೆಗೆ ಶಕ್ತಿಮೀರಿ ಕೆಲಸವು ಆಗಿವೆ. ಆದರೆ ಅನೇಕ ವರ್ಷಗಳು ಕಳೆದರೂ ಭವನ ಪೂರ್ಣಗೊಳ್ಳದಿರುವುದು ಬೇಸರ ತಂದಿದ್ದು ಈ ಬಗ್ಗೆ ಶಾಸಕರು ಶೀಘ್ರವೇ ಗಮನಹರಿಸಿ ಭವನ ಪೂರ್ಣಕ್ಕೆ ಅನುದಾನ ಒದಗಿಸಿಕೊಡಬೇಕು ಎಂದು ಮನವಿ ಮಾಡಿದರು.

ಇದೇ ವೇಳೆ ಮುಂಜಾನೆಯಿಂದ ನೂರಾರು ಭಕ್ತಾಧಿಗಳ ಸಮ್ಮುಖದಲ್ಲಿ ಯಜ್ಞ ಪೂರ್ಣಗೊಂಡಿತು.

ತದ ನಂತರ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಸುಮಾರು 20 ವಟುಗಳಿಗೆ ಸಾಮೂಹಿಕ ಉಪ ನಯನ ಜರುಗಿಸಲಾಯಿತು. ಕಾರ್ಯಕ್ರಮದಲ್ಲಿ ವಿ.ಬ್ರಾ.ಸ.ಸೇವಾ ಸಭಾದ ಗೌರವಾಧ್ಯಕ್ಷ ಚೇತನ್‌ಕುಮಾರ್, ನಿಕಟಪೂರ್ವ ಅಧ್ಯಕ್ಷ ಎಂ.ಜೆ.ಮಹೇಶ್‌ಆಚಾರ್, ವಿಶ್ವಕರ್ಮ ಸಹಕಾರ ಸಂಘದ ಅಧ್ಯಕ್ಷ ಬಿ.ಪಿ.ರತೀಶ್, ಜಿಲ್ಲಾ ವಿಶ್ವಕರ್ಮ ಮಹಿಳಾ ಸಂಘದ ಅಧ್ಯಕ್ಷೆ ಮಂಜುಳಾ ಭೀಮಾಚಾರ್, ಸೇವಾರತ್ನ ಪುರಸ್ಕೃತ ಕೃಷ್ಣಮೂರ್ತಿ, ವಿ.ಸ.ಅ. ನಿಗಮದ ಸದಸ್ಯ ಚಿದಂಬರ್, ಆಚಾರ್ಯ, ತೀರ್ಥಾಚಾರ್ ಮತ್ತಿತರರಿದ್ದರು



## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಗೋಪ್ವೆನಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯಾಲಯ

ಚನ್ನಗಿರಿ ತಾಲ್ಲೂಕು ದಾವಣಗೆರೆ ಜಿಲ್ಲೆ

ಸಂಖ್ಯೆ:ಗ್ರಾ.ಪಂ/ಇ–ಟೆಂಡರ್ ಪ್ರಕಟಣೆ 01/2024–25 ದಿನಾಂಕ:01–03–2025

### ಟೆಂಡರ್ ಪ್ರಕಟಣೆ ಇ–ಪ್ರಕ್ಯೂರ್ ಮೆಂಟ್ ಮೂಲಕ

ಕರ್ನಾಟಕ ರಾಜ್ಯಪಾಲರ ಪರವಾಗಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯಿತಿ ಗೋಪ್ವೆನಹಳ್ಳಿ, ಚನ್ನಗಿರಿ ತಾಲ್ಲೂಕು ಇವರು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿನ 15 ನೇ ಹಣಕಾಸು ಯೋಜನೆಯ 2024–25 ಸಾಲಿನ ನೋಂದಾಯಿತ ಅರ್ಹ ಹಾಗೂ ಇ–ಟೆಂಡರ್‌ಗಾಗಿ ಇ–ಪ್ರಕ್ಯೂರ್‌ಮೆಂಟ್ ಸೆಲ್‌ನಲ್ಲಿ ನೋಂದಾಯಿಸಲ್ಪಟ್ಟ ಸಾಮಾಗ್ರಿ ಸರಬರಾಜುದಾರರಿಂದ ಇಲಾಖಾ ನಿಯಮಾವಳಿಯ ಮೇರೆಗೆ ಇ–ಪ್ರಕ್ಯೂರ್ ಮೆಂಟ್ ಮುಖಾಂತರ ಐಟಂವಾರು ಟೆಂಡರ್‌ಗಳನ್ನು Standard Document For E-Procurement For Good ನಮೂನೆಯಲ್ಲಿ ಆಹ್ವಾನಿಸಲಾಗಿದೆ.

| ಕ್ರ. ಸಂ | ವಿವರ |
|---|---|
| 1 | ಚನ್ನಗಿರಿ ತಾಲ್ಲೂಕು ಗೋಪ್ವೇನಹಳ್ಳಿ ಗ್ರಾಮದ ಸರ್ವೇಶ್ವರ ಚಾರ್ ತೋಟದಿಂದ ಆರ್ ವಿ ಎನ್ ಕಾನ್ವೆಂಟ್ ವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿ. (15 ನೇ ಹಣಕಾಸು ಯೋಜನೆಯ 2024–25 ಸಾಲಿನ ) RDPR/2024-25/OW/WORK_INDENT13365 |

ಈ ಟೆಂಡರ್ ಬಿಡ್ ಮಾಡುವ ಕೊನೆಯ ದಿನಾಂಕ:10/03/2025 , ತಾಂತ್ರಿಕ ಆರ್ಥಿಕ ಬಿಡ್ ತೆರೆಯುವ ದಿನಾಂಕ 12/03/2025 ಪ್ರಕ್ರಿಯೆಯು ತಾಂತ್ರಿಕ ತೊಂದರೆ ಮತ್ತು ಇತರೆ ವಿಷಯಗಳಿಂದ ರದ್ದತಿಯಾದರೆ ಮತ್ತೊಮ್ಮೆ ಪತ್ರಿಕ ಪ್ರಕಟಣೆ ಮಾಡಲಾಗುವುದಿಲ್ಲ ಹೆಚ್ಚಿನ ಮಾಹಿತಿಗಾಗಿ ಅಧಿಕೃತ ಪೋರ್ಟಲ್ www.kppp.karnataka.gov.in ನೋಡಿಕೊಳ್ಳುವುದು. ಕಛೇರಿ ವೇಳೆಯಲ್ಲಿ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸುವುದು.

ಸಹಿ/
ಅಧ್ಯಕ್ಷರು
ಗ್ರಾಮ ಪಂಚಾಯಿತಿ ಕಾರ್ಯಾಲಯ
ಗೋಪ್ವೆನಹಳ್ಳಿ.

ಸಹಿ/
ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು
ಗ್ರಾಮ ಪಂಚಾಯಿತಿ ಕಾರ್ಯಾಲಯ ಗೋಪ್ವೆನಹಳ್ಳಿ



# ಪಿಎಂ ಇಂಟರ್ನ್‌ಶಿಪ್: ಯುವ ಜನತೆಯ ಕೌಶಲ್ಯಾಭಿವೃದ್ಧಿಗೆ ಒತ್ತು : ಆರ್. ಮಾಲತಿ

**ಚಿತ್ರದುರ್ಗ :** ಪಿಎಂ ಇಂಟರ್ನ್‌ಶಿಪ್ ಭಾರತ ಸರ್ಕಾರದ ಹೊಸ ಯೋಜನೆಯಾಗಿದ್ದು, ಯುವ ಜನತೆಯ ಕೌಶಲ್ಯಾಭಿವೃದ್ಧಿ ಹೆಚ್ಚಿಸಿಕೊಳ್ಳಲು ಸಹಾಯಕವಾಗಿದೆ ಎಂದು ಬೆಂಗಳೂರಿನ ಆರ್‌ಡಿಎಸ್‌ಡಿಇ ತರಬೇತಿ ಅಧಿಕಾರಿ ಆರ್.ಮಾಲತಿ ಹೇಳಿದರು.

ನಗರದ ಸ್ಟೇಡಿಯಂ ಸಮೀಪದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಮಂಗಳವಾರ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯಿಂದ ಜಿಲ್ಲೆಯ ತರಬೇತುದಾರರು ಹಾಗೂ ಉದ್ದಿಮೆದಾರರಿಗೆ ಅಪ್ರೆಂಟಿಶಿಪ್ ಮತ್ತು ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಎಂಬ ಹೊಸ ತರಬೇತಿ ಕಾರ್ಯಕ್ರಮವನ್ನು ಕಳೆದ ವರ್ಷದಿಂದ ಜಾರಿಗೊಳಿಸಿದೆ. ಒಂದು ವರ್ಷದ ತರಬೇತಿ ಕಾರ್ಯಕ್ರಮ ಇದಾಗಿದ್ದು, ತರಬೇತಿ ಅವಧಿಯಲ್ಲಿ 5 ಸಾವಿರ ಶಿಷ್ಯ ವೇತನ ನೀಡಲಾಗುತ್ತದೆ. ನೋಂದಣಿ ಮಾಡಿಕೊಳ್ಳಲು ಪ್ರತ್ಯೇಕ ಪೋರ್ಟಲ್ ಇದ್ದು, ನೋಂದಣಿ ಮಾಡಿಕೊಂಡ ಆರಂಭದಲ್ಲೇ ಅಗತ್ಯತೆಗಳಿಗಾಗಿ ಆರು ಸಾವಿರ ನೀಡಲಾಗುತ್ತದೆ. ತರಬೇತಿ ಪಡೆದು ನಾನಾ ಕಂಪನಿಗಳಲ್ಲಿ ಉದ್ಯೋಗ ಪಡೆದುಕೊಳ್ಳಬಹುದು ಅಥವಾ ಸ್ವಂತ ಉದ್ಯೋಗ ಮಾಡಬಹುದು, ಇದಕ್ಕಾಗಿ ಬ್ಯಾಂಕುಗಳಿಂದ ಸಾಲ ಸೌಲಭ್ಯ ಕೂಡ ಸಿಗಲಿದೆ ಎಂದು ಹೇಳಿದರು.

ಚಿತ್ರದುರ್ಗದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಂಶುಪಾಲ ಬಿ.ಸುರೇಶ್ ಮಾತನಾಡಿ, ಜಿಲ್ಲೆಯ ಎಲ್ಲಾ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿನ ತರಬೇತುದಾರರು ಮತ್ತು ಉದ್ದಿಮೆದಾರರಿಗೆ ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಬಗ್ಗೆ ಅರಿವು ಮೂಡಿಸಲು ಈ ಕಾರ್ಯಕ್ರಮ ಆಯೋಜಿಸಿದ್ದು, ಜಿಲ್ಲೆಯಲ್ಲಿ ಒಟ್ಟು 54 ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಿದ್ದು, ಇದರಲ್ಲಿ 200 ತರಬೇತುದಾರರು ಭಾಗವಹಿಸಿದ್ದಾರೆ. ತರಬೇತುದಾರರು ಹೆಚ್ಚಿನ ಕೌಶಲ್ಯ ಹೊಂದಿ ಭವಿಷ್ಯದಲ್ಲಿ ಉತ್ತಮ ಜೀವನ ರೂಪಿಸಿಕೊಳ್ಳಲು ಈ ಕಾರ್ಯಕ್ರಮ ಹೆಚ್ಚು ಸಹಕಾರಿಯಾಗಿದೆ ಎಂದು ತಿಳಿಸಿದರುಚಳ್ಳಕೆರೆ ತಾಲ್ಲೂಕಿನ ಪರಶುರಾಂಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಂಶುಪಾಲ ಜರೀಫ್‌ಉಲ್ಲಾ ಮಾತನಾಡಿ, ಐಟಿಐ ತರಬೇತಿ ನಂತರ ಅಪ್ರೆಂಟಿಶಿಪ್ ಮತ್ತು ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಬಗ್ಗೆ ಪೋರ್ಟಲ್‌ನಲ್ಲಿ ಯಾವ ರೀತಿ ನೋಂದಣಿ ಮಾಡಿಕೊಳ್ಳಬೇಕು ಎಂಬ ಬಗ್ಗೆ ಪವರ್‌ಪಾಯಿಂಟ್ ಮೂಲಕ ಮಕ್ಕಳಿಗೆ ತಿಳಿಸಿಕೊಡಲಾಗಿದೆ. ಇದ–ರಿಂದ ಏನೇನು ಅನುಕೂಲಗಳಿವೆ ಎಂಬ ಬಗ್ಗೆ ಮಾಹಿತಿ ಒದಗಿಸಲಾಗಿದೆ. ದ್ವಿತೀಯ ವರ್ಷ ಐಟಿಐ ತರಬೇತಿ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳ ಅಪ್ರೆಂಟಿ ಶಿಪ್ ಪೋರ್ಟಲ್‌ನಲ್ಲಿ ನೋಂದಣಿ ಮಾಡಿ ಕೊಳ್ಳಲಾಗಿದೆ. 1 ಸಾವಿರಕ್ಕೂ ಹೆಚ್ಚು ಉದ್ದಿಮೆದಾರರು ಕೂಡ ನೋಂದಣಿ ಮಾಡಿಕೊಂಡಿದ್ದಾರೆ.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಆರ್‌ಡಿಎಸ್‌ಡಿಇ ಕಚೇರಿಯ ಶಾಂತಿ, ಬೆಂಗಳೂರು ಎನ್‌ಎಸ್‌ಡಿಸಿ ದುಂಡೇಶ್ ಬಡಿಗೇರ್, ಚಿತ್ರದುರ್ಗ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ತರಬೇತಿ ಅಧಿಕಾರಿ ಲೀಲಾವತಿ ಉಪಸ್ಥಿತರಿದ್ದರು.



Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**